ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ: 13 ಸಂಚಿಕೆ: 174

25–11–2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 174

## ಹೊಸ ವರ್ಷಾಚರಣೆ ವೇಳೆ ಹೋಟೆಲ್, ಡಾಬಾಗಳ ಮೇಲೆ ಪೊಲೀಸ್ ಇಲಾಖೆ ಹೆಚ್ಚಿನ ನಿಗಾ ವಹಿಸಬೇಕು

**ದಾವಣಗೆರೆ:** ಡ್ರಗ್ಸ್ ಜಾಲವನ್ನು ಮಟ್ಟ ಹಾಕುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕಠಿಣ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರು ಕೂಡ ಇಲಾಖೆಗೆ ಸಹಕಾರ ನೀಡಬೇಕು ಎಂದು ಭಾರತೀಯ ಜನತಾ ಪಾರ್ಟಿ ವ್ಯಾಪಾರ–ವಾಣಿಜ್ಯ ಪ್ರಕೋಷ್ಠದ ಜಿಲ್ಲಾ ಸಂಚಾಲಕ ರಾಜು ವೀರಣ್ಣ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗಷ್ಟೇ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯನ್ನು ಭೇಟಿಯಾಗಿ ಮಾದಕವಸ್ತುಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದೆವು. ಅದರಂತೆ ಎಸ್ಪಿ ಉಮಾ ಪ್ರಶಾಂತ್ ನಗರದಲ್ಲಿ ವ್ಯಾಪಕವಾಗಿ ಹರಡಿದ್ದ ಡ್ರಗ್ಸ್ ಜಾಲವನ್ನು ಪತ್ತೆ ಹಚ್ಚಿ ದಿಟ್ಟ ಕ್ರಮ ಕೈಗೊಂಡಿರುವುದು ಶ್ಲಾಘನೀಯ. ಇದೇ ರೀತಿ ಹೊಸ ವರ್ಷಾಚರಣೆ ವೇಳೆ ಹೋಟೆಲ್, ಡಾಬಾಗಳ ಮೇಲೆ ಪೊಲೀಸ್ ಇಲಾಖೆ ಹೆಚ್ಚಿನ ನಿಗಾ ವಹಿಸಬೇಕು. ಶಾಲಾ–ಕಾಲೇಜುಗಳ ಬಳಿ ಹದ್ದಿನ ಕಣ್ಣಿಡಬೇಕು ಎಂದು ಒತ್ತಾಯಿಸಿದರು.

ಇತ್ತೀಚೆಗೆ ಹಳ್ಳಿಗಳಿಗೂ ಡ್ರಗ್ಸ್ ದಂಧೆ ವ್ಯಾಪಿಸುತ್ತಿರುವುದರಿಂದ ನಮ್ಮ ಸಂಸ್ಕೃತಿ ಹಾಳಾಗುತ್ತಿದೆ. ವ್ಯಸನಿಗಳು ನಶೆಯಲ್ಲಿ ಸಂಸ್ಕಾರ ಮರೆತು, ಅಪರಾಧ ಕೃತ್ಯಗಳಲ್ಲಿ ತೊಡಗುತ್ತಿದ್ದಾರೆ. ಪೋಷಕರು ಮಕ್ಕಳ ಮೇಲೆ ಹೆಚ್ಚಿನ ಗಮನ ಹರಿಸಬೇಕು. ತಿಂಗಳಿಗೆ ಒಮ್ಮೆಯಾದರೂ ಪೋಷಕರು ಶಾಲಾ–ಕಾಲೇಜುಗಳಿಗೆ ಭೇಟಿ ನೀಡಬೇಕು. ಮಾದಕವಸ್ತುಗಳ ವಿರುದ್ಧ ಪೊಲೀಸ್ ಇಲಾಖೆ ಜೊತೆಗೆ ಪೋಷಕರು, ಯುವಕರು, ಸಂಘ–ಸಂಸ್ಥೆಗಳು ಕೈಜೋಡಿಸಬೇಕು. ಅಂತಹದ್ದೇನಾದರೂ ಗಮನಕ್ಕೆ ಬಂದ ತಕ್ಷಣ ಪೊಲೀಸ್ ಇಲಾಖೆಗೆ ಮಾಹಿತಿ ನೀಡಬೇಕು. ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಂಡು, ಮಾದಕವಸ್ತು ಜಾಲವನ್ನು ಬೇರುಸಮೇತ ಕಿತ್ತೆಸೆಯಬೇಕು ಎಂದು ಅವರು ವಿನಂತಿಸಿದರು.

ಪಕ್ಷದ ಮುಖಂಡರಾದ ಜಿ.ದಯಾನಂದ, ಪ್ರವೀಣ ಜಾಧವ್, ಪಂಜು ಪೈಲ್ವಾನ್, ಅಜಯಕುಮಾರ, ರವಿಗೌಡ್ರು, ಗೋಶಾಲೆ ಸುರೇಶ, ಚೇತನಕುಮಾರ, ಸುಹಾಗ್ ಸುದ್ದಿಗೋಷ್ಠಿಯಲ್ಲಿ ಹಾಜರಿದ್ದರು.

## ನಾಳೆ ಲಿಂ.ಡಾ.ಶಾಮನೂರು ಶಿವಶಂಕರಪ್ಪನವರ ಶಿವಗಣಾರಾಧನೆ ಹಾಗೂ ನುಡಿನಮನ

**ದಾವಣಗೆರೆ:** ಅಖಿಲ ಭಾರತ ವೀರಶೈವ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರು ಹಾಗೂ ದಾವಣಗೆರೆ ದಕ್ಷಿಣ ಕ್ಷೇತ್ರದ ಹಿರಿಯ ಶಾಸಕ ಲಿಂ.ಡಾ.ಶಾಮನೂರು ಶಿವಶಂಕರಪ್ಪನವರ ಶಿವಗಣಾರಾಧನೆ ಹಾಗೂ ನುಡಿನಮನ ಕಾರ್ಯಕ್ರಮವನ್ನು ಡಿ.26ರಂದು ನಗರದ ಶ್ರೀ ಕಲ್ಲೇಶ್ವರ ರೈಸ್ ಮಿಲ್ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ತಿಳಿಸಿದರು.

ಬುಧವಾರ ಶ್ರೀ ಕಲ್ಲೇಶ್ವರ ರೈಸ್ ಮಿಲ್ ಆವರಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಂಗಳೂರಿನಲ್ಲಿ ಡಿಸೆಂಬರ್ 14ರಂದು ನಿಧನರಾದ ಡಾ. ಶಾಮನೂರು ಶಿವಶಂಕರಪ್ಪನವರ ಪಾರ್ಥಿವ ಶರೀರವನ್ನು ದಾವಣಗೆರೆಗೆ ತರುವಾಗ ನಡೆದ ಅಂತಿಮ ದರ್ಶನ, ಮೆರವಣಿಗೆ ಹಾಗೂ ಅಂತಿಮ ವಿಧಿವಿಧಾನಗಳನ್ನು ಜನತೆಗೆ ಸಮಗ್ರವಾಗಿ ತಲುಪಿಸಿದ ಪತ್ರಿಕೆ ಹಾಗೂ ದೃಶ್ಯ ಮಾಧ್ಯಮಗಳಿಗೆ ಕುಟುಂಬದ ಪರವಾಗಿ ಕೃತಜ್ಞತೆ ಸಲ್ಲಿಸಲಾಗಿದೆ ಎಂದು ಅವರು ಹೇಳಿದರು.

ಡಿಸೆಂಬರ್ 26ರಂದು ನಡೆಯುವ ಕಾರ್ಯಕ್ರಮವು ಬೆಳಗ್ಗೆ 10.15ಕ್ಕೆ ನಾಡಗೀತೆಯೊಂದಿಗೆ ಆರಂಭವಾಗಲಿದ್ದು, ವೇದಿಕೆಯ ಮೇಲೆ ಮಠಾಧೀಶರು, ಗಣ್ಯರು ಹಾಗೂ ಸಾರ್ವಜನಿಕರ ಸಮ್ಮುಖದಲ್ಲಿ ಎರಡು ನಿಮಿಷಗಳ ಮೌನಾಚರಣೆ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಗುತ್ತದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸರ್ವೋಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಜಸ್ಟಿಸ್ ಶಿವರಾಜ್ ಪಾಟೀಲ್ ವಹಿಸಲಿದ್ದಾರೆ ಎಂದರು.



ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಡಾ. ಶಾಮನೂರು ಶಿವಶಂಕರಪ್ಪನವರ ಪುತ್ಥಳಿಯನ್ನು ಅನಾವರಣಗೊಳಿಸಿ ನುಡಿನಮನ ಸಲ್ಲಿಸಲಿದ್ದಾರೆ. ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಜೀವನ ಕುರಿತ ಕಿರುಹೊತ್ತಿಗೆಯನ್ನು ಬಿಡುಗಡೆಗೊಳಿಸಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 'ಅಮೃತ ಪುರುಷ' ಸಾಕ್ಷ್ಯಚಿತ್ರವನ್ನು ಬಿಡುಗಡೆ ಮಾಡುವರು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ 2026ರ ಕ್ಯಾಲೆಂಡರ್ ಬಿಡುಗಡೆಗೊಳಿಸಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಂಗವಾಗಿ ಮೂರು ವೇದಿಕೆಗಳನ್ನು ನಿರ್ಮಿಸಲಾಗಿದ್ದು, ಮುಖ್ಯ ವೇದಿಕೆಯಲ್ಲಿ ಮಠಾಧೀಶರು ಹಾಗೂ ಗಣ್ಯರು, ಬಲಭಾಗದ ವೇದಿಕೆಯಲ್ಲಿ ಹರ–ಗುರು–ಚರಮೂರ್ತಿಗಳು ಹಾಗೂ ಎಡಭಾಗದ ವೇದಿಕೆಯಲ್ಲಿ ಕುಟುಂಬದ ಸದಸ್ಯರು ಆಸೀನರಾಗಲಿದ್ದಾರೆ.

ಸಾರ್ವಜನಿಕರಿಗೆ 25 ಸಾವಿರಕ್ಕೂ ಅಧಿಕ ಆಸನ ವ್ಯವಸ್ಥೆ ಕಲ್ಪಿಸಲಾಗಿದೆ. ಮಾಧ್ಯಮ ಪ್ರತಿನಿಧಿಗಳಿಗೆ ಪ್ರತ್ಯೇಕ ಆಸನ ವ್ಯವಸ್ಥೆ ಮಾಡಲಾಗಿದೆ. ಸಾರ್ವಜನಿಕರಿಗೆ 90ಕ್ಕೂ ಹೆಚ್ಚು ಊಟದ ಕೌಂಟರ್‌ಗಳನ್ನು ತೆರೆಯಲಾಗಿದ್ದು, ಗಣ್ಯರು ಮತ್ತು ಪರಮಪೂಜ್ಯರಿಗೆ ಪ್ರತ್ಯೇಕವಾಗಿ ಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿದೆ. ಕುಡಿಯುವ ನೀರು, ಅಂಬ್ಯುಲೆನ್ಸ್ ಹಾಗೂ ಅಗ್ನಿಶಾಮಕ ಸಿಬ್ಬಂದಿ ನಿಯೋಜನೆ ಸೇರಿದಂತೆ ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮಕ್ಕೆ ಆಗಮಿಸುವ ಸಾರ್ವಜನಿಕರು ಬೇತೂರು ರಸ್ತೆ, ಬಸಾಪುರ ರಸ್ತೆ ಹಾಗೂ ರಿಂಗ್ ರಸ್ತೆ ಮಾರ್ಗವಾಗಿ ಸ್ಥಳಕ್ಕೆ ಸುಲಭವಾಗಿ ತಲುಪುವಂತೆ ಸಂಚಾರ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಮಾಹಿತಿ ನೀಡಿದರು.

ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿ, ನಮ್ಮ ಮಾವನವರು ಎಲ್ಲಾ ಜಾತಿ ಜನಾಂಗಗಳ ಒಡನಾಡಿಯಾಗಿದ್ದರು. ಎಲ್ಲ ವರ್ಗಗಳ ನಾಯಕರಾಗಿದ್ದರು. ಆದ್ದರಿಂದ ಎಲ್ಲರಿಗೂ ಆಹ್ವಾನ ಪತ್ರಿಕೆ ತಲುಪಿಸುವ ವ್ಯವಸ್ಥೆ ಮಾಡಲಾಗಿದೆ. ತಲುಪದೇ ಇದ್ದವರು ಇದನ್ನೇ ಆಹ್ವಾನವೆಂದು ಪರಿಗಣಿಸಿ ಎಲ್ಲರೂ ಕಾರ್ಯಕ್ರಮಕ್ಕೆ ಆಗಮಿಸಬೇಕು ಎಂದು ಮನವಿ ಮಾಡಿದರು.

## ಡ್ರಗ್ಸ್ ಪ್ರಕರಣಕ್ಕೆ ನೈತಿಕ ಹೊಣೆ ಹೊತ್ತು ಜಿಲ್ಲಾಮಂತ್ರಿಗಳು ರಾಜೀನಾಮೆ ನೀಡಲಿ

**ದಾವಣಗೆರೆ:** ಡ್ರಗ್ಸ್ ಪ್ರಕರಣದಲ್ಲಿ ತಮ್ಮ ಬೆಂಬಲಿಗ ಬಂಧಿತನಾದ ಹಿನ್ನೆಲೆಯಲ್ಲಿ ಜಿಲ್ಲಾ ಮಂತ್ರಿ ಎಸ್.ಎಸ್.ಮಲ್ಲಿಕಾರ್ಜುನ ನೈತಿಕ ಹೊಣೆ ಹೊತ್ತು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಯಶವಂತರಾವ್ ಜಾಧವ್ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಕರಣದಲ್ಲಿ ಬಂಧಿತನಾಗಿರುವ ಶಾಮನೂರು ವೇದಮೂರ್ತಿ ಸಚಿವ ಮಲ್ಲಿಕಾರ್ಜುನರ ಬಲಗೈ ಭಂಟನೆಂದೇ ಗುರುತಿಸಿಕೊಂಡಿದ್ದಾರೆ. 1997ರ ಉಪ ಚುನಾವಣೆ ವೇಳೆ ನಗರದ ಹಳೆ ಎಂ.ಇ.ಎಸ್ ಶಾಲೆಯಲ್ಲಿ ಕಳ್ಳ ಮತದಾನ ಮಾಡುತ್ತಿದ್ದ ವೇಳೆ ನಾವೇ ತಡೆದು, ಬುದ್ಧಿ ಹೇಳಿದ್ದೆವು. ಇಂತಹ ರೌಡಿಸಂ, ಕಳ್ಳದಂಧೆಕೋರರು, ಅನ್ನಭಾಗ್ಯ ಅಕ್ಕಿ ಕಾಳಸಂತೆಕೋರರು, ಇಸ್ಪೀಟ್ ಆಡಿಸೋರಿಗೆ ಕಾಂಗ್ರೆಸ್ಸಿನ ಜಿಲ್ಲಾ ಮಂತ್ರಿಗಳೇ ಆಶ್ರಯದಾತರು ಎಂದು ಆರೋಪಿಸಿದರು.

ಪ್ರತಿ ಸಲ ನಮ್ಮ ಮೇಲೆ, ಮಾಜಿ ಸಂಸದ ಜಿ.ಎಂ.ಸಿದ್ದೇಶ್ವರ ಸೇರಿದಂತೆ ಬಿಜೆಪಿಯವರ ಮೇಲೆ ಕಾಂಗ್ರೆಸ್ ಪಟಾಲಂ ಮಿಥ್ಯಾರೋಪ ಮಾಡುತ್ತಿತ್ತು. ಆದರೆ, ಮಾಡಿದ ಯಾವುದೇ ಆರೋಪಕ್ಕೂ ಸಾಕ್ಷ್ಯ, ದಾಖಲೆ ನೀಡುತ್ತಿರಲಿಲ್ಲ. ನಮ್ಮ ಮೇಲೆ ಒಂದೇ ಒಂದು ಕೇಸ್ ಇದ್ದರೆ ಎಫ್.ಐ.ಆರ್ ಸಮೇತ ತೋರಿಸಲಿ. ಇದೀಗ ಕಾಂಗ್ರೆಸ್ ಪಕ್ಷದ ಶಾಮನೂರು ವೇದಮೂರ್ತಿ ಡ್ರಗ್ಸ್ ಕೇಸ್ ನಲ್ಲಿ 1 ಲಕ್ಷ ರೂ. ನಗದು, 10 ಲಕ್ಷ ರೂ. ಮೌಲ್ಯದ ಮಾದಕವಸ್ತು ಸಮೇತ ಸಿಕ್ಕಿ ಬಿದ್ದಿರುವ ಬಗ್ಗೆ ಕಾಂಗ್ರೆಸ್ ಪಟಾಲಂ ಮಾತನಾಡಲಿ ಎಂದು ಅವರು ಹೇಳಿದರು.

ಓದುವ ಮಕ್ಕಳಿಗೆ, ವಿದ್ಯಾರ್ಥಿ–ಯುವಜನರಿಗೆ ಮಾದಕ ವಸ್ತುಗಳಾದ ಗಾಂಜಾ, ಡ್ರಗ್ಸ್ ಪೂರೈಸುವ ಜಾಲದ ಹಿಂದೆ ಯಾರೆಲ್ಲಾ ಇದ್ದಾರೆ, ಇದರ ಆಳ, ಅಗಲ ಏನೆಂಬ ಬಗ್ಗೆ ಎಸ್ಪಿ ಸಮಗ್ರ ತನಿಖೆ ಕೈಗೊಳ್ಳಬೇಕು. ಪಟೇಲ್ ಬಡಾವಣೆ ಡ್ರಗ್ಸ್ ಪ್ರಕರಣದಲ್ಲಿ ನಾಲ್ವರನ್ನು ಪೊಲೀಸರು ಬಂಧಿಸಿದ್ದು, ಮೂವರು ಓಡಿ ಹೋಗಿದ್ದಾರೆ. ತಲೆ ಮರೆಸಿಕೊಂಡ ಆ ಮೂವರನ್ನೂ ಬಂಧಿಸಬೇಕು. ಇಲ್ಲವಾದರೆ, ಮೂವರೂ ಯಾರೆಂಬುದನ್ನು ನಾವು ಬಯಲು ಮಾಡುತ್ತೇವೆ. ಶಾಬನೂರಿನ ಅಗರ್ಭ ಶ್ರೀಮಂತನೆಂದು ಬೀಗುತ್ತಿದ್ದ ವೇದಮೂರ್ತಿ ಇದೇ ರೀತಿ ಡ್ರಗ್ಸ್ ದಂಧೆಯಿಂದಲೇ ಶ್ರೀಮಂತ ಆಗಿರಬೇಕು. ಯಾವುದೇ ಕಾರಣಕ್ಕೂ ವೇದಮೂರ್ತಿ ಕಾನೂನು ಕುಣಿಕೆಯಿಂದ ತಪ್ಪಿಸಿಕೊಳ್ಳದಂತೆ ಎಸ್ಪಿ ಗಮನ ಹರಿಸಲಿ ಎಂದು ಅವರು ಸಲಹೆ ನೀಡಿದರು.

ಡಿ.22ರಂದು ಆರೋಪಿಗಳ ಬಂಧನದಿಂದ ರಾತ್ರಿವರೆಗೆ ಎಸ್ಪಿಗೆ ಯಾರಿಂದೆಲ್ಲಾ ಫೋನ್ ಕರೆ ಹೋಗಿವೆ, ಏನೆಲ್ಲಾ ಒತ್ತಡ ಹೇರಿದ್ದರು? ಎಂಬ ಬಗ್ಗೆಯೂ ತನಿಖೆ ಆಗಬೇಕು ಎಂದು ಅವರು ಆಗ್ರಹಿಸಿದರು.

ರಾಜಕೀಯ ದ್ವೇಷದಿಂದ ನಾವು ಮಾತನಾಡುತ್ತಿಲ್ಲ. ಡ್ರಗ್ಸ್ ಕೇಸ್‌ನಲ್ಲಿ ಬಂಧಿತರಾದ 4 ಜನರ ಜೊತೆಗೆ ತಲೆ ಮರೆಸಿಕೊಂಡ ಉಳಿದ ಮೂವರನ್ನೂ ಬಂಧಿಸಬೇಕು. ಎಫ್.ಐ.ಆರ್ ದಾಖಲಿಸುವ ವೇಳೆ ವೇದಮೂರ್ತಿ ಬಗ್ಗೆ ಮೃದುಧೋರಣೆ ತಾಳಿದರೆ ಬೀದಿಗಿಳಿದು ಹೋರಾಡುತ್ತೇವೆ. ದಾವಣಗೆರೆ ನಗರ, ಜಿಲ್ಲೆಯ ಮಕ್ಕಳು, ವಿದ್ಯಾರ್ಥಿ–ಯುವ ಜನರು ಮಾದಕ ವಸ್ತುಗಳಿಗೆ ಬಲಿಯಾಗುತ್ತಿದ್ದು, ಅಂತಹ ಮಕ್ಕಳ ಪಾಲಕರಿಗೆ ಅರಿವು ಮೂಡಿಸಬೇಕು. ಮಕ್ಕಳ ಮೇಲೆ ಪ್ರತಿಯೊಬ್ಬ ಪಾಲಕರೂ ನಿಗಾ ವಹಿಸಬೇಕು. ಪೊಲೀಸ್ ಇಲಾಖೆಯೂ ದೇಶದ ಭವಿಷ್ಯವಾದ ಅಂತಹ ಮಕ್ಕಳನ್ನು ಕಾಪಾಡಬೇಕು ಎಂದು ಅವರು ಮನವಿ ಮಾಡಿದರು.

ಬಿಜೆಪಿ ಮುಖಂಡರಾದ ಅಣಬೇರು ಜೀವನಮೂರ್ತಿ, ರಾಜು ನೀಲಗುಂದ, ಶಿವನಗೌಡ ಪಾಟೀಲ, ಟಿಂಕರ್ ಮಂಜಣ್ಣ, ಬಾಲಚಂದ್ರ ಶ್ರೇಷ್ಠಿ, ಶಿವಾನಂದ, ಕಿಶೋರಕುಮಾರ, ಸೋಗಿ ಗುರುಶಾಂತ ಸುದ್ದಿಗೋಷ್ಠಿಯಲ್ಲಿದ್ದರು.

## ಅಡಿಕೆ ಎಲೆಚುಕ್ಕೆ ರೋಗ ನಿಯಂತ್ರಣ ಜಾಗೃತಿ : ಮಧು ಬಂಗಾರಪ್ಪ

**ಶಿವಮೊಗ್ಗ:** ಮಲೆನಾಡು ಪ್ರದೇಶದಲ್ಲಿ ತೀವ್ರತರವಾಗಿರುವ ಅಡಿಕೆ ಎಲೆಚುಕ್ಕೆ ರೋಗದಿಂದಾಗಿ ಸಣ್ಣ ರೈತರಿಗೆ ತುಂಬಾ ತೊಂದರೆಯಾಗುತ್ತಿರುವ ಹಿನ್ನೆಲೆ ರಾಜ್ಯ ಸರ್ಕಾರ ವಿಜ್ಞಾನಿಗಳಿಂದ ಮಾರ್ಗದರ್ಶನ ಪಡೆದು ಹತೋಟಿ ಕ್ರಮ ಕೈಗೊಳ್ಳುತ್ತಿದ್ದು ರೈತರಿಗೆ ಈ ಬಗ್ಗೆ ಹೆಚ್ಚಿನ ತಿಳುವಳಿಕೆ ನೀಡುವುದು ಅತಿ ಅವಶ್ಯಕವಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಮಧು ಬಂಗಾರಪ್ಪ ತಿಳಿಸಿದರು.

ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಎಲೆ ಚುಕ್ಕೆ ರೋಗ ನಿಯಂತ್ರಣ ಮತ್ತು ಇತರೆ ವಿಷಯ ಕುರಿತು ಚರ್ಚಿಸಲು ವಿಜ್ಞಾನಿಗಳು ಮತ್ತು ಅಧಿಕಾರಿಗಳೊಂದಿಗೆ ಏರ್ಪಡಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಳೆಗಾಲದಲ್ಲಿ ಹೆಚ್ಚಾಗಿ ಹರಡುವ ಎಲೆ ಚುಕ್ಕೆ ರೋಗ ನಿಯಂತ್ರಣ ದುಬಾರಿಯಾಗಿದೆ. ರೋಗ ನಿಯಂತ್ರಣ ಕ್ರಮಕ್ಕೆ ಕೇಂದ್ರ ಮತ್ತು ರಾಜ್ಯ ಕ್ರಮವಾಗಿ ಶೇ.60 ಮತ್ತು 40 ಹಣ ನೀಡಲು ಸಿದ್ದವಿದ್ದು, ಮುಖ್ಯವಾಗಿ ರೋಗ ನಿಯಂತ್ರಣಕ್ಕೆ ಹೆಚ್ಚಿನ ಒತ್ತು ನೀಡಬೇಕಿದೆ. ಈ ನಿಟ್ಟಿನಲ್ಲಿ ವಿಜ್ಞಾನಿಗಳ ಅಭಿಪ್ರಾಯ ಮತ್ತು ಮಾರ್ಗದರ್ಶನದ ಮೇಲೆ ಮಾರ್ಗಸೂಚಿಯನ್ನು ತಯಾರಿಸಲಾಗುತ್ತಿದೆ.

ಇಲಾಖೆಗಳು, ಗ್ರಾ.ಪಂ, ಸಹಕಾರ ಸಂಘಗಳು, ಅಡಿಕೆ ಮಾರಾಟ ಸಹಕಾರ ಸಂಘಗಳ ಮೂಲಕ ರೈತರಿಗೆ ಈ ರೋಗ ನಿಯಂತ್ರಣ ಮತ್ತು ವಿಜ್ಞಾನಿಗಳು



ತಯಾರಿಸಿದ ಮಾರ್ಗಸೂಚಿಗಳನ್ನು ಅನುಸರಿಸುವ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕಿದೆ. ಅರ್ಧ, ಮುಕ್ಕಾಲು ಎಕರೆ ಹೊಂದಿರುವ ಸಣ್ಣ ಸಣ್ಣ ರೈತರಿಗೆ ಈ ರೋಗದಿಂದಾಗಿ ತುಂಬಾ ತೊಂದರೆಯಾಗುತ್ತಿದ್ದು ರೋಗ ನಿಯಂತ್ರಣಕ್ಕಾಗಿ ಎಲ್ಲರೂ ಸೇರಿ ಒಂದು ತಂಡವಾಗಿ ಕಾರ್ಯ ನಿರ್ವಹಿಸುವ ಮೂಲಕ ಸಹಕರಿಸಬೇಕೆಂದರು.

ಅತಿ ಹೆಚ್ಚು ಕೆಪಿಎಸ್ ಶಾಲೆ : ರಾಜ್ಯದಲ್ಲಿ ಮೊಟ್ಟಮೊದಲ ಬಾರಿಗೆ ಅತಿ ಹೆಚ್ಚಿನ ಸಂಖ್ಯೆಯಲ್ಲಿ 900 ಕೆಪಿಎಸ್ ಶಾಲೆಗಳನ್ನು ಸುಮಾರು ರೂ.3500 ಕೋಟಿ ಅನುದಾನದಲ್ಲಿ ತೆರೆಯಲಾಗುತ್ತಿದ್ದು, ಇದೊಂದು ದೊಡ್ಡ ಮತ್ತು ಶೈಕ್ಷಣಿಕ ಕ್ಷೇತ್ರದ ಅತ್ಯುತ್ತಮ ಯೋಜನೆಯಾಗಿದೆ. ಜಿಲ್ಲೆಯಲ್ಲಿ ಈಗಾಗಲೇ 11 ಕೆಪಿಎಸ್ ಶಾಲೆಗಳಿದ್ದು, ಹೊಸದಾಗಿ 19 ಕೆಪಿಎಸ್ ಶಾಲೆಗಳನ್ನು ಮಂಜೂರು ಮಾಡಲಾಗಿದೆ. ಇಂತಹ ದೊಡ್ಡ ಯೋಜನೆಗೆ ಶಿವಮೊಗ್ಗದಲ್ಲಿಯೇ ಮಾನ್ಯ ಮುಖ್ಯಮಂತ್ರಿಗಳಿಂದ ಚಾಲನೆ ಕೊಡಿಸುವ ಯೋಜನೆ ಇದೆ. ಇದೇ ವೇಳೆ ಆಡಳಿತ ಭವನ, ಕೊಳಚೆ ಪ್ರದೇಶಗಳ ನಿವಾಸಿಗಳಿಗೆ ಹಕ್ಕುಪತ್ರ ನೀಡುವುದು, ಅರಣ್ಯ ಸಮಸ್ಯೆಗಳಿಗೆ ಪರಿಹಾರೋಪಾಯ ಸೇರಿದಂತೆ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ಕೊಡಿಸುವ ಬಗ್ಗೆ ಯೋಜಿಸಲಾಗುತ್ತಿದೆ ಎಂದರು.

ಕೊಳಚೆ ಪ್ರದೇಶ ನಿವಾಸಿಗಳಿಗೆ ಹಕ್ಕುಪತ್ರ : ಜಿಲ್ಲೆಯಲ್ಲಿರುವ ಎಲ್ಲ ಕೊಳಚೆ ಪ್ರದೇಶಗಳನ್ನು ಗುರುತಿಸಿ ಅವರಿಗೆ ಹಕ್ಕುಪತ್ರ ನೀಡುವ ಮೂಲಕ ಮುಖ್ಯವಾಹಿನಿಗೆ ತರಲು ಆಂದೋಲನದ ರೀತಿಯಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಎಲ್ಲಾ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿರುವ ಕೊಳಚೆ ಪ್ರದೇಶಗಳನ್ನು ಗುರುತಿಸಿ ಅವರಿಗೆ ಹಕ್ಕುಪತ್ರ, ಇ–ಸ್ವತ್ತು ನೀಡಲು ಕ್ರಮ ಜರುಗಿಸುವಂತೆ ಡಿಯುಡಿಸಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇನ್ನು 15 ದಿನಗಳ ಒಳಗೆ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಸ್ಲಂ ಗಳನ್ನು ಗುರುತಿಸಿ ಕ್ರಮ ವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು ಜಿಲ್ಲೆಯನ್ನು ಕೊಳಚೆ ಪ್ರದೇಶಮುಕ್ತ ಜಿಲ್ಲೆಯನ್ನಾಗಿ ಮಾಡುವ ಮೂಲಕ ಮಾದರಿ ಜಿಲ್ಲೆಯಾಗಿಸಲು ಎಲ್ಲರೂ ಸಹಕರಿಸಬೇಕು ಎಂದರು.

ಸಭೆಯಲ್ಲಿ ವಿಧಾನ ಪರಿಷತ್ ಶಾಸಕರಾದ ಬಲ್ಕೀಶ್ ಬಾನು, ಜಿ.ಪಂ ಸಿಇಓ ಹೇಮಂತ್ ಎನ್, ಸಿಸಿಎಫ್ ಹನುಮಂತಪ್ಪ, ಅಪರ ಜಿಲ್ಲಾಧಿಕಾರಿ ಅಭಿಷೇಕ್ ವಿ, ಮಾಜಿ ವಿಧಾನ ಪರಿಷತ್ ಶಾಸಕರಾದ ಪ್ರಸನ್ನಕುಮಾರ್, ಕೃಷಿ ಮಹಾವಿದ್ಯಾಲಯದ ಆಡಳಿತ ಮಂಡಳಿ ಸದಸ್ಯ ದೇವಿಕುಮಾರ್, ಎಸಿ ಸತ್ಯನಾರಾಯಣ, ಡಿಯುಡಿಸಿ ಅಧಿಕಾರಿಗಳು, ಅರಣ್ಯ ಇಲಾಖೆ ಅಧಿಕಾರಿಗಳು, ಸ್ಲಂ ಬೋರ್ಡ್ ಅಧಿಕಾರಿಗಳು, ಡಿಡಿಪಿಐ, ಇತರೆ ಇಲಾಖೆ ಅಧಿಕಾರಿಗಳು ಹಾಜರಿದ್ದರು.

## ಶಿವಮೊಗ್ಗ ಹೊಸಮನೆಯಲ್ಲಿ 30 ರಂದು ವೈಕುಂಠ ಏಕಾದಶಿ ಸಂಭ್ರಮ



**ಶಿವಮೊಗ್ಗ:** ಹೊಸಮನೆ ನಾಲ್ಕನೇ ತಿರುವಿನ ಲಕ್ಷ್ಮಿ ನರಸಿಂಹಸ್ವಾಮಿ ದೇವಾಲಯದಲ್ಲಿ ದೇವಸ್ಥಾನ ಸಮಿತಿ ವತಿಯಿಂದ ಡಿ. 30ರಂದು ಇಡೀ ದಿನ ವೈಕುಂಠ ಏಕಾದಶಿಯ ವಿಶೇಷ ಪೂಜೆ, ಆರಾಧನೆ, ಭರತನಾಟ್ಯ, ಸಂಗೀತ ಕಾರ್ಯಕ್ರಮ ಸೇರಿದಂತೆ ವಿವಿಧ ಪ್ರಮುಖರ ಧಾರ್ಮಿಕ ಸಭೆ ನಡೆಯಲಿದೆ ಎಂದು ದೇವಸ್ಥಾನ ಸಮಿತಿ ತಿಳಿಸಿದೆ.

ಡಿಸೆಂಬರ್ 30ರ ಮಂಗಳವಾರ ಬೆಳಿಗ್ಗೆ 9:00 ಗಂಟೆಯಿಂದ ಪೂಜಾ ವಿಧಿ ವಿಧಾನ ಆರಂಭಗೊಳ್ಳಲಿದ್ದು, ಮಧ್ಯಾಹ್ನ 12:30 ಕ್ಕೆ ಮಹಾಮಂಗಳಾರತಿ ನಡೆಯಲಿದೆ.

ಸಂಜೆ 6 ರಿಂದ ಸಪ್ತಸ್ವರ ಟ್ರಸ್ಟ್ ನ ಸಂಗೀತ ಕಲಾವಿದರಿಂದ ಸಂಗೀತ ಲಹರಿ ಭಕ್ತಿಗೀತೆಗಳ ಪ್ರಸ್ತುತತೆ ನಡೆಯಲಿದೆ.

ತದನಂತರ ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ದೇವರ ನವರೂಪದ ಭರತನಾಟ್ಯ ಕಾರ್ಯಕ್ರಮವನ್ನು ಪ್ರತಿಭಾವಂತ ಪುಟಾಣಿ ಕಲಾವಿದರು ನಡೆಸಿಕೊಡಲಿದ್ದಾರೆ.

ಮಧ್ಯಾಹ್ನ ಪೂಜೆಯ ನಂತರ ನಡೆಯಲಿರುವ ಕಾರ್ಯಕ್ರಮದಲ್ಲಿ ಮಾಜಿ ಉಪಮುಖ್ಯಮಂತ್ರಿ ಕೆ. ಎಸ್ ,ಈಶ್ವರಪ್ಪ, ಸಚಿವ ಮಧು ಬಂಗಾರಪ್ಪ, ಸಂಸದ ಬಿ ವೈ ರಾಘವೇಂದ್ರ, ಶಾಸಕರಾದ ಚನ್ನಬಸಪ್ಪ ಡಿಎಸ್ ಅರುಣ್, ರುದ್ರೇಗೌಡ, ಮಂಜುನಾಥಗೌಡ, ಸೂಡಾಧ್ಯಕ್ಷ ಸುಂದರೇಶ್ ಸೇರಿದಂತೆ ವಿವಿಧ ಗಣ್ಯರು ಆಗಮಿಸಿದ್ದಾರೆ.

ಕಾರ್ಯಕ್ರಮಕ್ಕೆ ಸರ್ವರನ್ನು ದೇವಸ್ಥಾನ ಸಮಿತಿಯ ಗೌರವಾಧ್ಯಕ್ಷ ಸುರೇಶ್ ಬಾಳೆಗುಂಡಿ, ಅಧ್ಯಕ್ಷ ಗಣೇಶ್ ಎಲ್, ಉಪಾಧ್ಯಕ್ಷ ಬಸವರಾಜ್ ಎಂ.ಆರ್., ಪ್ರಧಾನ ಕಾರ್ಯದರ್ಶಿ ಹಾಗೂ ಪ್ರಧಾನ ಅರ್ಚಕರಾದ ಶ್ರೀನಿವಾಸ ಮೂರ್ತಿ ಹಾಗೂ ಪದಾಧಿಕಾರಿಗಳು ಸ್ವಾಗತಿಸಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಶ್ರೀ ಸ್ವಾಮಿಯ ಕೃಪೆಗೆ ಪಾತ್ರರಾಗಲು ಕೋರಲಾಗಿದೆ.

### ಕಿಷ್ಕಿಂದ ವಿಶ್ವವಿದ್ಯಾಲಯದ ಪ್ರಥಮ ಘಟಿಕೋತ್ಸವದಲ್ಲಿ ರಾಜ್ಯಪಾಲರಾದ ಥಾವರ್ ಚಂದ್ ಗೆಹಲೋಟ್ ಕರೆ

## ಸುಭಿಕ್ಷ ರಾಷ್ಟ್ರ ನಿರ್ಮಾಣಕ್ಕೆ ಯುವಜನತೆ ಕೊಡುಗೆ ನೀಡಬೇಕು

**ಬಳ್ಳಾರಿ:** ಶಿಕ್ಷಣ ಎನ್ನುವುದು ಒಂದು ನಿರಂತರ ಯಾತ್ರೆ ಮತ್ತು ಅಮೂಲ್ಯ ಸಂಪತ್ತು. ವಿದ್ಯಾರ್ಥಿಗಳು ಜ್ಞಾನ ಬೆಳಸಿಕೊಂಡು ಉಜ್ವಲ ಭವಿಷ್ಯ ರೂಪಿಸಿಕೊಳ್ಳುವುದರ ಜೊತೆಗೆ, ಸುಭಿಕ್ಷ ರಾಷ್ಟ್ರ ನಿರ್ಮಾಣದಲ್ಲಿ ಸಕ್ರಿಯ ಪಾತ್ರ ವಹಿಸಬೇಕು ಎಂದು ರಾಜ್ಯಪಾಲರಾದ ಥಾವರ್ ಚಂದ್ ಗೆಹಲೋಟ್ ಅವರು ಕರೆ ನೀಡಿದರು.

ಬಳ್ಳಾರಿ–ಸಿರುಗುಪ್ಪ ರಸ್ತೆ ಮಾರ್ಗದ ಮೌಂಟ್ ವ್ಯೂ ಕ್ಯಾಂಪಸ್ ನಲ್ಲಿ ಬುಧವಾರ ಆಯೋಜಿಸಿದ್ದ ಕಿಷ್ಕಿಂದ ವಿಶ್ವವಿದ್ಯಾಲಯದ ಪ್ರಥಮ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಶಿಕ್ಷಣ ಕೇವಲ ಪದವಿ ಪಡೆಯುವುದಕ್ಕೆ ಸೀಮಿತವಾಗಬಾರದು. ಅದು ಜ್ಞಾನ ಸಂಪಾದನೆಗೆ ಅನುವು ಮಾಡಿಕೊಡುವ ಸಾಧನವಾಗಬೇಕು. ವಿದ್ಯಾರ್ಥಿಗಳು ಕಲಿತ ವಿದ್ಯೆಯನ್ನು ದೇಶದ ಏಳಿಗೆಗಾಗಿ ಧಾರೆ ಎರೆಯಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಯುವ ಸಮೂಹ ಕೇವಲ ಬೌದ್ಧಿಕವಾಗಿ ಬೆಳೆದರೆ ಸಾಲದು, ಜೀವನದಲ್ಲಿ ಮಾನವೀಯ ಮೌಲ್ಯಗಳನ್ನು ಕೂಡ ಅಳವಡಿಸಿಕೊಳ್ಳುವುದು ಅಷ್ಟೇ ಮುಖ್ಯ. ಭಾರತೀಯ ಪರಂಪರೆಯು ನಮಗೆ ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಕಲಿಸಿಕೊಟ್ಟಿದೆ. ಈ ಪರಂಪರೆಯನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವ ಜವಾಬ್ದಾರಿ ಈಗಿನ ವಿದ್ಯಾರ್ಥಿಗಳ ಮೇಲಿದೆ ಎಂದರು.



"ಎದ್ದೇಳಿ, ಎಚ್ಚರಗೊಳ್ಳಿ ಮತ್ತು ಗುರಿ ಸಾಧಿಸುವವರೆಗೆ ನಿಲ್ಲಬೇಡಿ" ಸ್ವಾಮಿ ವಿವೇಕಾನಂದರ ಈ ವಾಕ್ಯದಿಂದ ಸ್ಫೂರ್ತಿ ಪಡೆದು, ನಮ್ಮ ಜ್ಞಾನವನ್ನು ಕಾರ್ಯರೂಪಕ್ಕೆ ತರಬೇಕು ಮತ್ತು ರಾಷ್ಟ್ರವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ನಮ್ಮ ಕೌಶಲ್ಯಗಳನ್ನು ಬಳಸಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಭಾರತವನ್ನು ಸದೃಢ ಮತ್ತು ಸುಭಿಕ್ಷ ರಾಷ್ಟ್ರವನ್ನಾಗಿ ಮಾಡುವಲ್ಲಿ ಯುವಜನತೆಯ ಪಾತ್ರ ಪ್ರಮುಖವಾಗಿದೆ. ಕಿಷ್ಕಿಂದೆಯಂತಹ ಪವಿತ್ರ ಮಣ್ಣಿನಲ್ಲಿ ಸ್ಥಾಪಿತವಾಗಿರುವ ಈ ವಿಶ್ವವಿದ್ಯಾಲಯವು ಯುವಶಕ್ತಿಗೆ ಸರಿಯಾದ ಮಾರ್ಗದರ್ಶನ ನೀಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಉನ್ನತ ಶಿಕ್ಷಣ ಸಚಿವ ಎಂ.ಸಿ. ಸುಧಾಕರ್ ಅವರು ಮಾತನಾಡಿ, ಕಲ್ಯಾಣ ಕರ್ನಾಟಕದಂತಹ ಭಾಗದಲ್ಲಿ ಶೈಕ್ಷಣಿಕ ಸಂಸ್ಥೆಗಳನ್ನು ಕಟ್ಟುವುದು ಸವಾಲಿನ ಕೆಲಸ. ಈ ಸವಾಲುಗಳ ನಡುವೆಯೂ ವಿಶ್ವವಿದ್ಯಾಲಯವು ಎರಡು ವರ್ಷ ಪೂರೈಸಿ ಪ್ರಥಮ ಘಟಿಕೋತ್ಸವ ಆಚರಿಸುತ್ತಿರುವುದು ಸಂತಸದ ಸಂಗತಿ ಎಂದು ತಿಳಿಸಿದರು.

ರಾಜ್ಯದಲ್ಲಿ ಪ್ರಸ್ತುತ 29 ಖಾಸಗಿ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ. ಕೇವಲ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಗೆ ಆದ್ಯತೆ ನೀಡದೆ, ಶಿಕ್ಷಣದ ಗುಣಮಟ್ಟ ಕಾಪಾಡಿಕೊಳ್ಳುವುದು ಇಂದಿನ ಅಗತ್ಯವಾಗಿದೆ. ಈ ಭಾಗದ ವಿದ್ಯಾರ್ಥಿಗಳಲ್ಲಿ ಅಡಗಿರುವ ಪ್ರತಿಭೆಯನ್ನು ಹೊರಹಾಕಲು ಪೂರಕ ವಾತಾವರಣ ನಿರ್ಮಿಸಬೇಕು. ವಿಶೇಷವಾಗಿ ಸಂಶೋಧನಾ ಚಟುವಟಿಕೆಗಳಿಗೆ ಹೆಚ್ಚಿನ ಒತ್ತು ನೀಡುವ ಮೂಲಕ ಜಾಗತಿಕ ಮಟ್ಟದ ಸ್ಪರ್ಧೆಗೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಬೇಕು ಎಂದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೆಣ್ಣು ಮಕ್ಕಳಿಗೆ ಉನ್ನತ ಶಿಕ್ಷಣದ ಹಾದಿ ಸುಗಮವಾಗುತ್ತಿದೆ. ಇಲ್ಲಿನ ಹೆಣ್ಣು ಮಕ್ಕಳಿಗೆ ಉಜ್ವಲ ಭವಿಷ್ಯವಿದೆ. ಅವರಿಗೆ ಉನ್ನತ ಶಿಕ್ಷಣ ನೀಡಲು ಪ್ರೋತ್ಸಾಹ ನೀಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ದೇಶ ಹಾಗೂ ರಾಜ್ಯದಲ್ಲಿ ಅಂತಾರಾಷ್ಟ್ರೀಯ ಮಟ್ಟದ ವಿಶ್ವವಿದ್ಯಾಲಯಗಳು ತಲೆ ಎತ್ತುತ್ತಿವೆ. ಈ ಪೈಪೋಟಿಯ ನಡುವೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಸಂಸ್ಥೆಗಳು ಯಶಸ್ವಿಯಾಗಬೇಕು ಎಂದು ಆಶಿಸಿದರು.

ಬೆಳಗಾವಿ ಲೋಕಸಭಾ ಕ್ಷೇತ್ರದ ಸಂಸದ ಜಗದೀಶ್ ಶೆಟ್ಟರ್ ಅವರು ಮಾತನಾಡಿ, ಹಿಂದುಳಿದ ತಾಲ್ಲೂಕುಗಳಲ್ಲಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಿರುವ ಸರ್ಕಾರದ ನಿರ್ಧಾರವು ಅತ್ಯಂತ ಪ್ರಶಂಸನೀಯವಾಗಿದ್ದು, ಇದು ಈ ಭಾಗದ ಶೈಕ್ಷಣಿಕ ಮತ್ತು ಸಾಮಾಜಿಕ ಪ್ರಗತಿಗೆ ಪೂರಕವಾಗಿ ಕಾರ್ಯನಿರ್ವಹಿಸಲಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ತಮ್ಮ ನೆಲದಲ್ಲೇ ಉನ್ನತ ಶಿಕ್ಷಣ ಲಭಿಸುವಂತಾಗಬೇಕು. ಕೇವಲ ಪದವಿ ಪಡೆಯುವುದು ಶಿಕ್ಷಣದ ಉದ್ದೇಶವಾಗಬಾರದು. ವಿದ್ಯಾರ್ಥಿಗಳು ಗುಣಾತ್ಮಕ ಶಿಕ್ಷಣದ ಜೊತೆಗೆ ಕೌಶಲಗಳನ್ನು ಮೈಗೂಡಿಸಿಕೊಂಡು ದೇಶದ ಅಭಿವೃದ್ಧಿಗೆ ಅಮೂಲ್ಯ ಕೊಡುಗೆ ನೀಡುವಂತಾಗಬೇಕು ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ವಳ ಬಳ್ಳಾರಿಯ ಸುವರ್ಣಗಿರಿ ವಿರಕ್ತ ಮಠದ ಪರಮಪೂಜ್ಯ ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಿ ಗೌರವಿಸಲಾಯಿತು.

ಇದೇ ವೇಳೆ ಶೈಕ್ಷಣಿಕ ಸಾಧನೆಯಲ್ಲಿ ಉನ್ನತ ಸ್ಥಾನ ಗಳಿಸಿದ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ ಪತ್ರ ವಿತರಿಸಲಾಯಿತು. ಈ ಸಂದರ್ಭದಲ್ಲಿ ಸಿರುಗುಪ್ಪ ಶಾಸಕ ಬಿ.ಎಂ.ನಾಗರಾಜ, ಸಿಂಧನೂರು ಶಾಸಕ ಬಾದರ್ಲಿ ಹಂಪನಗೌಡ, ಟಿ.ಇ.ಎಚ್.ಆರ್.ಡಿ ಟ್ರಸ್ಟ್ ಅಧ್ಯಕ್ಷ ಡಾ.ಎಸ್.ಜೆ.ವಿ.ಮಹಿಪಾಲ್, ಕಿಷ್ಕಿಂದ ವಿಶ್ವವಿದ್ಯಾಲಯದ ಕುಲಾಧಿಪತಿ ಡಾ.ಯಶವಂತ್ ಭೂಪಲ್, ಕುಲಪತಿ ಪ್ರೊ.ಟಿ.ಎನ್.ನಾಗಭೂಷಣ, ಸಹಕುಲಾಧಿಪತಿ ವೈ.ಜೆ.ಪೃಥ್ವಿರಾಜ್, ಕುಲಸಚಿವ ಡಾ.ಯು.ಈರಣ್ಣ, ಕುಲಪತಿ(ಮೌಲ್ಯಮಾಪನ) ಡಾ.ರಾಜು ಜಾಡರ್, ಹಣಕಾಸು ಅಧಿಕಾರಿ ವೈ.ನಮ್ರತಾ ಸೇರಿದಂತೆ ಬೋಧಕರು, ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು.

## ರಾಶಿ ಭವಿಷ್ಯ

### ಮೇಷ ರಾಶಿ

ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಸ್ವಲ್ಪ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ನಿಮ್ಮ ಸಂಗಾತಿಯ ಚಿತ್ತ ಚೆನ್ನಾಗಿರುವಂತೆ ಕಾಣದಿದ್ದರಿಂದ ವಿಷಯಗಳನ್ನು ಸರಿಯಾಗಿ ನಿರ್ವಹಿಸಿ. ಇಂದು ವಿಶ್ರಾಂತಿ ಪಡೆಯಲು ಸಮಯವಿಲ್ಲ ಬಾಕಿಯಿರುವ ಕೆಲಸಗಳು ನಿಮ್ಮನ್ನು ವ್ಯಸ್ತವಾಗಿಡುತ್ತವೆ

### ವೃಷಭ ರಾಶಿ

ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಹಾಗೂ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ. ನಿಮ್ಮ ಹೆಂಡತಿಯ ಜಜೊತೆ ಪ್ರವಾಸಕ್ಕೆ ಹೋಗಲು ಒಳ್ಳೆಯ ದಿನ. ಇದು ನಿಮ್ಮ ಮನಸ್ಥಿತಿಯನ್ನು ಬದಲಾಯಿಸುವುದಷ್ಟೇ ಅಲ್ಲದೇ ನಿಮ್ಮ ತಪ್ಪು ತಿಳುವಳಿಕೆಗಳನ್ನೂ ಹೋಗಲಾಡಿಸುತ್ತದೆ.

### ಮಿಥುನ ರಾಶಿ

ರಕ್ತದೊತ್ತಡವಿರುವ ರೋಗಿಗಳು ತಮ್ಮ ರಕ್ತದೊತ್ತಡ ಕಡಿಮೆ ಮಾಡಲು ಮತ್ತು ಕೊಲೆಸ್ಟರಾಲ್ ನಿಯಂತ್ರಣದಲ್ಲಿರಿಸಲು ಕೆಂಪು ವೈನ್ ತೆಗೆದುಕೊಳ್ಳಬಹುದು. ಇದು ಅವರಿಗೆ ಮತ್ತಷ್ಟು ವಿಶ್ರಾಂತಿ ತರುತ್ತದೆ. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು ಆದರೆ ಇದರ ಹೊರೆತಾಗಿಯೂ ನಿಮ್ಮ ಆರ್ಥಿಕ ಭಾಗವು ಬಲವಾಗಿರುತ್ತದೆ ಸ್ನೇಹಿತರು ಮತ್ತು ಅಪರಿಚಿತರಿಬ್ಬರ ಬಗೆಗೂ ಎಚ್ಚರದಿಂದಿರಿ.

### ಕರ್ಕ ರಾಶಿ

ನೀವು ಸಾಮಾನ್ಯವಾಗಿ ಇರುವುದಕ್ಕಿಂತ ಕಡಿಮೆ ಚೈತನ್ಯವನ್ನು ಇಂದು ಕಾಣುತ್ತೀರಿ ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ನಿಮ್ಮ ಕೆಲಸಗಳನ್ನು ಇನ್ನೊಂದು ದಿನಕ್ಕೆ ವರ್ಗಾಯಿಸಿ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯ ವರೆಗೂ ಹೋಗಬಹುದು.ಇದರ ಕಾರಣದಿಂದ ನಿಮ್ಮ ವಿಶೇಷ ಹಣ ಖರ್ಚಾಗಬಹುದು. ನೆರೆಮನೆಯವರ ಜೊತಗಿನ ಜಗಳ ನಿಮ್ಮ ಮನಸ್ಸು ಕೆಡಿಸುತ್ತದೆ. ಆದರೆ ನಿಮ್ಮ ಸಹನೆ ಕಳೆದುಕೊಳ್ಳಬೇಡಿ, ಏಕೆಂದರೆ ಇದು ಬೆಂಕಿಗೆ ತುಪ್ಪ ಸುರಿಯುತ್ತದೆ.

### ಸಿಂಹ ರಾಶಿ

ನೀವು ಇಂದು ಆರಾಮವಾಗಿ ವಿಶ್ರಾಂತಿ ಪಡೆಯಬೇಕು ನೀವು ಆನಂದಿಸುವ ಮತ್ತು ಆಸಕ್ತಿಗಳು ಮತ್ತು ವಿಷಯಗಳಲ್ಲಿ ತೊಡಗಿಕೊಳ್ಳಿ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ ಅಥವಾ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ. ನಿಮ್ಮ ಅತಿಯಾದ ಜೀವನಶೈಲಿ ಮನೆಯಲ್ಲಿ ಆತಂಕ ಸೃಷ್ಟಿಸಬಹುದು ಆದ್ದರಿಂದ ತಡರಾತ್ರಿಯನ್ನು ಹಾಗೂ ಇತರರ ಮೇಲೆ ಬಹಳ ಖರ್ಚು ಮಾಡುವುದನ್ನು ತಪ್ಪಿಸಿ.

### ಕನ್ಯಾ ರಾಶಿ

ನೀವು ವ್ಯಾಯಾಮದ ಮೂಲಕ ನಿಮ್ಮ ತೂಕವನ್ನು ನಿಯಂತ್ರಿಸಬಹುದು. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಪ್ರಣಯ ನಿಮ್ಮ ಹೃದಯ ಮತ್ತು ಮನಸ್ಸನ್ನು ಆಳುತ್ತದೆ. ಸ್ಪರ್ಧಾತ್ಮಕ ಪರೀಕ್ಷೆಗೆ ಹೋಗುತ್ತಿರುವವರು ಶಾಂತವಾಗಿರಬೇಕು.

### ತುಲಾ ರಾಶಿ

ಕೆಲವು ಅನಿವಾರ್ಯ ಸಂದರ್ಭಗಳು ನಿಮಗೆ ಅಹಿತಕರವೆನಿಸಬಹುದು. ಆದರೆ ನೀವು ನಿಮ್ಮ ಸಮತೋಲನ ಕಾಯ್ದುಕೊಳ್ಳಬೇಕು ಮತ್ತು ಪರಿಸ್ಥಿತಿಯನ್ನು ನಿಭಾಯಿಸಲು ತಕ್ಷಣವೇ ಪ್ರತಿಕ್ರಿಯಿಸಬಾರದು. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಪ್ರೇಮಿಗಳು ಕುಟುಂಬದ ಭಾವನೆಗಳ ಬಗ್ಗೆ ತುಂಬ ಕಾಳಜಿ ಹೊಂದಿರುತ್ತಾರೆ.

### ವೃಶ್ಚಿಕ ರಾಶಿ

ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ನಿಮ್ಮ ಕುಟುಂಬದ ಕಲ್ಯಾಣಕ್ಕಾಗಿ ಕೆಲಸ ಮಾಡಿ. ನಿಮ್ಮ ಕಾರ್ಯಗಳು ದುರಾಶೆಯಿಂದಲ್ಲದೇ ಪ್ರೀತಿ ಮತ್ತು ಸಕಾರಾತ್ಮಕ ದೃಷ್ಟಿಯಿಂದ ನಡೆಯಬೇಕು. ನಿಮ್ಮ ಪ್ರೀತಿಯನ್ನು ಅಮೂಲ್ಯ ವಸ್ತುಗಳಂತೆ ಹೊಸತನದಿಂದಿಡಿ.

### ಧನು ರಾಶಿ

ಇಂದು ನೀವು ಆರಾಮವಾಗಿರಬೇಕು ಹಾಗೂ ನಿಕಟ ಸ್ನೇಹಿತರು ಮತ್ತು ಕುಟುಂಬದ ಎಲ್ಲಾ ಸದಸ್ಯರನ್ನು ಸಂತೋಷವಾಗಿರಿಸಲು ಪ್ರಯತ್ನಿಸಬೇಕು. ಬಹಳ ಪ್ರಯೋಜನಕಾರಿ ದಿನವಲ್ಲ– ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶೀಲಿಸಿ ಮತ್ತು ನಿಮ್ಮ ವೆಚ್ಚಗಳ ಮೇಲೆ ಮಿತಿ ಹೇರಿ. ಶಿಶುವಿನ ಅನಾರೋಗ್ಯ ನಿಮ್ಮನ್ನು ವ್ಯಸ್ತವಾಗಿಡುತ್ತದೆ. ನೀವು ತಕ್ಷಣ ಗಮನ ನೀಡುವ ಅಗತ್ಯವಿರುತ್ತದೆ. ನಿಮ್ಮಿಂದ ಸ್ವಲ್ಪ ಉದಾಸೀನತೆಯೂ ಸಮಸ್ಯೆಯನ್ನು ಉಲ್ಬಣಗೊಳಿಸುವುದರಿಂದ ಸರಿಯಾದ ಸಲಹೆ ತೆಗೆದುಕೊಳ್ಳಿ.

### ಮಕರ ರಾಶಿ

ವಿಶೇಷವಾಗಿ ಹೊರಗಿಟ್ಟ ಆಹಾರ ತಿನ್ನುವಾಗ ವಿಶೇಷ ಮುನ್ನೆಚ್ಚರಿಕೆ ತೆಗೆದುಕೊಳಬೇಕು. ಆದರೆ ಅನಗತ್ಯ ಒತ್ತಡ ಕೇವಲ ನಿಮಗೆ ಮಾನಸಿಕ ಉದ್ವೇಗ ಉಂಟುಮಾಡುತ್ತದೆ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು ಮತ್ತು ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ನಿಮ್ಮ ಪ್ರೇಮಿಯ ಜೊತೆ ಹೊರಹೋದಾಗ ನಿಮ್ಮ ರೂಪ ಮತ್ತು ವರ್ತನೆಯಲ್ಲಿ ನೈಜತೆಯಿರಲಿ.

### ಕುಂಭ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ಮನೆಯಲ್ಲಿನ ಕೆಲವು ಬದಲಾವಣೆಗಳು ನಿಮ್ಮನ್ನು ಭಾವುಕರನ್ನಾಗಿಸಬಹುದು– ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

### ಮೀನ ರಾಶಿ

ನಿಮಗೇನು ಒಳ್ಳೆಯದೆಂದು ನಿಮಗೆ ಮಾತ್ರ ಗೊತ್ತು – ಆದ್ದರಿಂದ ಧೃಢವಾಗಿರಿ ಮತ್ತು ಧೈರ್ಯಶಾಲಿಗಳಾಗಿರಿ ಮತ್ತು ತಕ್ಷಣದ ನಿರ್ಧಾರಗಳನ್ನು ತೆಗೆದುಕೊಳ್ಳಿ ಹಾಗೂ ಫಲಿತಾಂಶಗಳಿಗೆ ಸಿದ್ಧವಾಗಿರಿ. ಆರ್ಥಿಕ ಜೀವನದ ಸ್ಥಿತಿ ಇಂದು ಉತ್ತಮವಾಗಿದೆ ಎಂದು ಹೇಳಲಾಗುವುದಿಲ್ಲ, ಇಂದು ನಿಮ್ಮನ್ನು ಉಳಿಸಲು ನಿಮಗೆ ಕಷ್ಟವಾಗಬಹುದು.

# ಪುನಿತ್ ರಾಜಕುಮಾರ್ ಕಪ್' ಸೀಸನ್ 4 ರ ವಿನ್ನರ್ ತಮಿಳುನಾಡಿನ ರಾಮನಾಥನ್ ಬಾಲಸುಬ್ರಮಣ್ಯ

**ದಾವಣಗೆರೆ:** ದಾವಣಗೆರೆ ಚೆಸ್ ಕ್ಲಬ್ ವತಿಯಿಂದ ಕರ್ನಾಟಕ ರಾಜ್ಯ ಚೆಸ್ ಅಸೋಸಿಯೇಷನ್ ಇವರ ಸಹಯೋಗದೊಂದಿಗೆ ಕನ್ನಡ ರಾಜ್ಯೋತ್ಸವ ಹಾಗೂ ಪುನಿತ್ ರಾಜಕುಮಾರ್ ಅವರ ಸವಿನೆನಪಿಗಾಗಿ ಪ್ರತಿ ವರ್ಷದಂತೆ ಈ ವರ್ಷವೂ ಸಹ ನಗರದಲ್ಲಿ ಓಪನ್ ರಾಪಿಡ್ ಪುನಿತ್ ರಾಜಕುಮಾರ್ ಕಪ್ ಸೀಸನ್–4 ಚದುರಂಗ ಸ್ಪರ್ಧೆಯನ್ನು ದಿನಾಂಕ 21–12–2025ರ ಭಾನುವಾರದಂದು ಬಾಪೂಜಿ ಬ್ಯಾಂಕ್ ಸಮುದಾಯ ಭವನದಲ್ಲಿ ಏರ್ಪಡಿಸಲಾಗಿತ್ತು.

ಈ ಪಂದ್ಯಾವಳಿಯ ಉದ್ಘಾಟನೆಯನ್ನು ದಾವಣಗೆರೆ ಹರಿಹರ ನಗರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿಯವರು ಉದ್ಘಾಟಿಸಿದರು

ಬೆಳಗ್ಗಿನಿಂದ ಲೀಗ್ ಮಾದರಿಯಲ್ಲಿ ಪಂದ್ಯಾವಳಿಗಳು ಎಂಟು ಸುತ್ತುಗಳಲ್ಲಿ ನಡೆದು ಕೊನೆಯ ಸುತ್ತಿನಲ್ಲಿ ಶಿವಮೊಗ್ಗದ ಅಜಯ್ ಎಸ್ ಎಂ ಅವರ ವಿರುದ್ಧ ಗೆದ್ದು ಪ್ರಥಮ ಸ್ಥಾನ ಪಡೆದು 15000 ನಗದು ಹಾಗೂ *ಪುನೀತ್ ರಾಜಕುಮಾರ್ ಕಪ್* ಮುಡಿಗೇರಿಸಿಕೊಂಡರು.

ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿ ಹಾಗೂ ಮಾಜಿ ಮಹಾಪೌರರಾದ ಚಮನ್ ಸಾಬ್ ಗಡಿಗುಡಾ ಮಂಜುನಾಥ್, ಏ ನಾಗರಾಜ್ ವಾಣಿ ಬಕೇಶ್ ಮುಸ್ತಫಾ ಅಜ್ಜಂಪುರ ಬಕೇಶ್ ಅವರು ಪುನೀತ್ ಟ್ರೋಫಿಯನ್ನು ವಿತರಿಸಿ ಸನ್ಮಾನಿಸಿದರು.

ನಂತರದ ಸ್ಥಾನಗಳಲ್ಲಿ ಶಿವಮೊಗ್ಗದ ಅಜಯ್ ಎಸ್ ಎಂ ಎರಡನೇ ಸ್ಥಾನವನ್ನು ಪಡೆದು 10 ಸಾವಿರ ನಗದು ಹಾಗೂ



ವಿಶೇಷ ಟ್ರೋಫಿ ಶಿವಮೊಗ್ಗದ ವಿಲಾಸ್ ಅಂದ್ರದೆ 5000 ನಗದು ಹಾಗೂ ಟ್ರೋಫಿ ಮೂರನೇ ಸ್ಥಾನ ಗೋಪಿನಾಥ್ 4ನೇ ಸ್ಥಾನ ನಯಾಝು ಅಹಮದ್ ಐದನೇ ಸ್ಥಾನವನ್ನು ಪಡೆದರು ಪ್ರಶಸ್ತಿ ಪಡೆದ ವಿಜೇತರಿಗೆ ಮಹಾನಗರ ಪಾಲಿಕೆಯ ಮಹಾಪೌರರಾದ ಚಮನ್ ಸಾಬ್ ಅವರು ವಿತರಿಸಿದರು.

ಈ ಪಂದ್ಯಾವಳಿಯಲ್ಲಿ ವಿಶೇಷ ಬಹುಮಾನವಾಗಿ 19 ವರ್ಷ ಮೇಲ್ಪಟ್ಟ ಮಹಿಳೆಯರ ಭಾಗದಲ್ಲಿ ಕೌಸಲ್ಯ ಎಸ್ ಪ್ರಥಮ ಬಹುಮಾನ ರೂ.2,000/– ಮತ್ತು ಟ್ರೋಫಿ ಸೋನಿಯಾ ಸಿಂಗಾಣಿಯ ದ್ವಿತೀಯ ಬಹುಮಾನ ರೂ.1,500/– ಹಾಗೂ ಟ್ರೋಫಿ ನಂದಿನಿ ವಿ ತೃತೀಯ ಬಹುಮಾನ ರೂ.1,000/– ಗಳು ನಗದು ಮತ್ತು ಟ್ರೋಫಿ 4ನೇ ರಿಂದ 10ನೇ ಸ್ಥಾನ ಪಡೆದವರಿಗೆ ವಿಶೇಷ ಟ್ರೋಫಿಗಳನ್ನು ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ವಾಣಿ ಬಕೇಶ್ ಅವರು ವಿತರಿಸಿದರು.

59 ವರ್ಷ ಮೇಲ್ಪಟ್ಟ ವಯಸ್ಕರ ವಿಭಾಗದಲ್ಲಿ ಹೊನ್ನಾಳಿಯ ಹಾಲೇಶ್ವರಯ್ಯ ಪ್ರಥಮ ಸ್ಥಾನ ರೂ.2,000/– ಮತ್ತು ಟ್ರೋಫಿ ಚಿಕ್ಕಮಂಗಳೂರಿನ ಮಂಜುನಾಥ್ ಪ್ರಸಾದ್ ದ್ವಿತೀಯ ರೂ.1,500/– ಟ್ರೋಫಿ ತೃತೀಯ ದಾವಣಗೆರೆಯ ಬಸವರಾಜ್ ವಿ ಪಿ ರೂ.1.000/– ನಗದು ಹಾಗು ವಿಶೇಷ ಟ್ರೋಫಿ ಪಡೆದರು ನಂತರದ 4 ರಿಂದ 10ನೇ ಸ್ಥಾನ ಪಡೆದ ಹಿರಿಯ ಕ್ರೀಡಾಪಟುವಿಗೆ ವಿಶೇಷ ಬಹುಮಾನವಾಗಿ ಟ್ರೋಫಿಗಳನ್ನು ಮಹಾನಗರ ಪಾಲಿಕೆಯ ಮಾಜಿ ಸದಸ್ಯರಾದ ಗಡಿಗುಡಾಲ್ ಮಂಜುನಾಥ್ ಅವರು ವಿತರಿಸಿದರು.

49 ವರ್ಷದ ಮೇಲ್ಪಟ್ಟ ಹಿರಿಯರ ವಿಭಾಗದಲ್ಲಿ ಸಂತೋಷ್ ಕುಮಾರ್ ಬಿಎಸ್ ಪ್ರಥಮ ಸ್ಥಾನ ವಾಲ್ಮೀಕರ್ ಪ್ರವೀಣ್ ದ್ವಿತೀಯ ಸ್ಥಾನ ಶ್ರೀಪಾದ ಗಣಪತಿ ಹೆಗಡೆ ತೃತೀಯ ಸ್ಥಾನವನ್ನು ನಗದು ಹಾಗು ವಿಶೇಷ ಟ್ರೋಫಿಯನ್ನು ಪಡೆದರು ನಾಲ್ಕನೇ ಸ್ಥಾನದಿಂದ 10ನೇ ಸ್ಥಾನ ಪಡೆದ ಹಿರಿಯ ಕ್ರೀಡಾಪಟುಗಳಿಗೆ ಮಹಾನಗರ ಪಾಲಿಕೆಯ ಸದಸ್ಯರಾದ ಏ ನಾಗರಾಜ ಬಹುಮಾನವನ್ನು ವಿತರಿಸಿದರು

07 ವರ್ಷದೊಳಗಿನ ವಿಭಾಗದಲ್ಲಿ ಆಂಧ್ರದ ವೆದುಗಲ ರತನ್ ತೇಜ್ ಪ್ರಥಮ ಸ್ಥಾನ ಸಮರ್ಥ್ ಎಸ್ ಪೂಜಾರ್ ದ್ವಿತೀಯ ಸ್ಥಾನ ಚಿರಂತೇಶ್ ಗೌಡ 3 ನೇ ಸ್ಥಾನ ನಗದು ಹಾಗೂ ವಿಶೇಷ ಟ್ರೋಫಿ ನಂತರ ನಾಲ್ಕರಿಂದ ಹತ್ತನೇ ಸ್ಥಾನದವರೆಗೆ ವಿಶೇಷ ಟ್ರೋಫಿಗಳನ್ನು ನಗರದ ಕಾಂಗ್ರೆಸ್ ಮುಖಂಡರಾದ ಅಜ್ಜಂಪುರ ಬಕೇಶ್ ಮಕ್ಕಳಿಗೆ ವಿತರಿಸಿದರು

09 ವರ್ಷದೊಳಗಿನ ವಿಭಾಗದಲ್ಲಿ ಆಂಧ್ರದ ಎಸ್ ಕೆ ವಿಜ್ಞೇಶ್ ರೆಡ್ಡಿ ಪ್ರಥಮ ಸ್ಥಾನ ಶಿವಮೊಗ್ಗದ ಆಯುಷ್ ಭಟ್ ದ್ವಿತೀಯ ಸ್ಥಾನ ಗೋವಾದ ಅಮೀರ ಬ್ರೋಕರ್ ತೃತಿಯ ಸ್ಥಾನ ನಗದು ಹಾಗೂ ವಿಶೇಷ ಟ್ರೋಫಿ ಮತ್ತು ನಾಲ್ಕನೇ ರಿಂದ ಹತ್ತನೇ ಸ್ಥಾನದವರೆಗೆ ಟ್ರೋಫಿಯನ್ನು ನಗರದ ಓಂ ಅಪ್ಪಿಯನ್ಸಸ್ ಎಪಿಎಸ್ ಡಿಸ್ಟ್ರಿಬ್ಯೂಟರ್ ಆದ ಶಿವಕುಮಾರ್ ಅವರು ವಿತರಿಸಿದರು.

11 ವರ್ಷದೊಳಗಿನ ವಿಭಾಗದಲ್ಲಿ ಅನಿರುದ್ ಭಾರ್ಗವ್ ಪ್ರಥಮ ಶ್ರೇಷ್ಠ ಗುಣಶೇಖರ್ ದ್ವಿತೀಯ ಸ್ಥಾನ ನಚಿಕೇತ್ ಗುರುಕರ್ ತೃತೀಯ ಸ್ಥಾನ 13 ವರ್ಷದ ಒಳಗಿನ ಮಕ್ಕಳ ವಿಭಾಗದಲ್ಲಿ ದಾವಣಗೆರೆಯ ಈಶಾನ್ ಬಂಗೇರಿ ಪ್ರಥಮ ಸ್ಥಾನ ಗೋವಾದ ಅನ್ವೇ ಬ್ರೋಕರ್ ದ್ವಿತೀಯ ಸ್ಥಾನ ದಾವಣಗೆರೆ ಅದ್ವೈತ್ ಎಮ್ ಎಸ್ ತೃತೀಯ ಸ್ಥಾನ 15 ವರ್ಷದೊಳಗಿನ ವಿಭಾಗದಲ್ಲಿ ಹಾವೇರಿಯ ಸಂಗಮೇಶ್ ವಿ ಸುಗಂಧಿ ಪ್ರಥಮ ಸ್ಥಾನ ಗುಹಾನ್ ನೀಲಮಂಗಲ ಹರ್ಷ ದ್ವಿತೀಯ ಸ್ಥಾನ ತ್ರಿಶೂಲ ಎಚ್ ಎಂ ತೃತೀಯ ಸ್ಥಾನ 17 ವರ್ಷದೊಳಗಿನ ವಿಭಾಗದಲ್ಲಿ ಶಿವಮೊಗ್ಗದ ಅನಗ ಪಾಟೀಲ್ ಪ್ರಥಮ ಸ್ಥಾನ ಗೋವಾದ ಶ್ರೀ ಗುಣಶೇಖರ್ ಶ್ರೀ ಅರ್ಪಿತ ಮೂರನೇ ಸ್ಥಾನ 19 ವರ್ಷದ ಒಳಗಿನ ವಿಭಾಗದಲ್ಲಿ ಸಚಿನ್ ಪೈ ಪ್ರಥಮ ಸ್ಥಾನ ಅರ್ಫತ್ ಎ ದ್ವಿತೀಯ ಸ್ಥಾನ ಶ್ರೇಯಸ್ ಎಮ್ ಶಿವಪ್ರಸಾದ್ ಮೂರನೇ ಸ್ಥಾನ ಪಡೆದ ಎಲ್ಲಾ ಸ್ಪರ್ಧಾಳುಗಳಿಗೆ ಜಿಲ್ಲಾ ಕ್ರೀಡಾಪಟುಗಳ ಸಂಘದ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿಯವರು ನಗದು ಹಾಗೂ ವಿಶೇಷ ಟ್ರೋಫಿಗಳನ್ನು ವಿತರಿಸಿದರು.

ಬಹುಮಾನ ವಿತರಿಸಿದ ಗಣ್ಯರಿಗೆ ದಾವಣಗೆರೆ ಜಿಲ್ಲಾ ಚೆಸ್ ಅಸೋಸಿಯೇಷನ್ ವತಿಯಿಂದ ಯುವರಾಜ್ ಮಂಜುಳಾ ಯುವರಾಜ್ ಅವರು ವಿಶೇಷ ಗೌರವ ಸಮರ್ಪಣೆ ಮಾಡಲಾಯಿತು.

# ಧ್ಯಾನ ಎಲ್ಲಾ ಸಮಸ್ಯೆಗಳಿಗೆ ಉತ್ತರ. – ಪಿರಮಿಡ್ ಧ್ಯಾನ ಗುರು ನಾಗೇಂದ್ರ ಪ್ರಕಾಶ್

**ದಾವಣಗೆರೆ** : ಇಂದಿನ ಒತ್ತಡ ಜೀವನದಲ್ಲಿ ಧ್ಯಾನ ಬಹು ಅವಶ್ಯ . ಧ್ಯಾನ ಎಲ್ಲಾ ಸಮಸ್ಯೆಗಳಿಗೆ ಉತ್ತರ. ನೆಮ್ಮದಿಯ ಜೀವನಕ್ಕೆ ಧ್ಯಾನ ಅತ್ಯಂತ ಅವಶ್ಯಕ ಎಂದು ಪಿರಮಿಡ್ ಧ್ಯಾನ ಗುರು ಮಾಸ್ಟರ್ ನಾಗೇಂದ್ರ ಪ್ರಕಾಶ್ ಹೇಳಿದರು.

ದೇವನಗರಿ ಮೈತ್ರೇಯ ಪಿರಮಿಡ್ ಧ್ಯಾನ ಸಂಘಟನೆ ವತಿಯಿಂದ ದಾವಣಗೆರೆ ನಗರದ ಶ್ರೀ ಸದ್ಯೋಜಾತಾ ಮಠದಲ್ಲಿ ದಿನಾಂಕ : 21.12.2025 ರ ಭಾನುವಾರ ಬೆಳಿಗ್ಗೆ 10 ಗಂಟೆಯಿಂದ 4.30 ರ ವರೆಗೆ ಹಮ್ಮಿಕೊಂಡಿದ್ದ ವಿಶ್ವ ಧ್ಯಾನ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಧ್ಯಾನದಿಂದ ಆನಂದ, ಪ್ರೀತಿ, ಸ್ನೇಹ ಭರಿತ ಜೀವನ ನಡೆಸಬಹುದು ಎಂದರು.

ಮತ್ತೊರ್ವ ಧ್ಯಾನ ಗುರು ಮಾಸ್ಟರ್ ರಾಯದುರ್ಗ ರವಿಚಂದ್ರ ಮಾತನಾಡಿ, ಧ್ಯಾನವನ್ನು ಎಲ್ಲರೂ ಮಾಡಬೇಕು, ಅ ದೇವರು ನಮ್ಮ ಶರೀರ ಮೂಲಕ ಕೆಲಸ ಮಾಡಿಸುತ್ತಿದ್ದಾನೆ. ಶರೀರ ಒಂದು ಕಾರ್ಖಾನೆ. ಪ್ರತಿದಿನ ಬೆಳಿಗ್ಗೆ ಎದ್ದ ತಕ್ಷಣ ನಾವು ನಮ್ಮ ಶರೀರ, ಪಂಚಭೂತ ಗಳಾದ ಭೂಮಿ, ಜಲ, ಅಗ್ನಿ, ವಾಯುವು, ಆಕಾಶ ಗಳಿಗೆ ಕೃತಜ್ಞತೆ ಸಲ್ಲಿಸಬೇಕು. ದೇಹದಲ್ಲಿ 2 ಲಕ್ಷ 72 ಸಾವಿರ ನರನಾಡಿಗಳು ಕೆಲಸ ಮಾಡುತ್ತಿವೆ ಎಂದು ವಿವರಿಸಿದರು .




ಪಂಚೇಜಂದ್ರಿಯ, ಕರ್ಮೆಂದ್ರೀಯ, ಜ್ಞಾನೇಂದ್ರಿಯ, ಆತ್ಮ ಜ್ಞಾನವನ್ನು ತಿಳಿಸಿದ ಮಾಸ್ಟರ್ ರವಿಚಂದ್ರ ನಮ್ಮ ಕಷ್ಟ, ಸುಖಕ್ಕೆ ನಾವೇ ಕಾರಣ. ನಮ್ಮ ಜೀವನವನ್ನು ನಾವೇ ನಿರ್ಧಾರ ಮಾಡಿಕೊಂಡು ಭೂಮಿಗೆ ಬರುತ್ತೇವೆ. ನಮ್ಮ ಕಷ್ಟ ಸುಖಗಳಿಗೆ ನಾವೇ ಹೊಣೆ ಹೊರತು ಅನ್ಯ ಯಾರೂ ಜವಾಬ್ದಾರರಲ್ಲ . ಆದ್ದರಿಂದ ನಮ್ಮ ಪಾಪ ಕರ್ಮಗಳ ನಿವಾರಣೆ ಮಾಡಿಕೊಂಡು ಪವಿತ್ರ ಜೀವನ ನಡೆಸಲು ಧ್ಯಾನ ಸಹಕಾರಿ ಎಂದು ಮನವರಿಕೆ ಮಾಡಿದರು.

ಮಾಸ್ಟರ್ ಸುಬ್ರಮಣ್ಯ ಮಾತನಾಡಿ, ಹಿಂದೆ ಋಷಿ, ಯೋಗಿಗಳು ಹಿಮಾಲಯ, ಕಾಡಿಗೆ ಹೋಗಿ ಧ್ಯಾನ ಮಾಡುತ್ತಿದ್ದರು. ಆದರೆ ಈಗ ನಾವು ಮನೆಯಲ್ಲಿ ಕುಳಿತು ಸಂಸಾರದಲ್ಲಿ ಇದ್ದುಕೊಂಡೇ ಸಾಧನೆ ಮಾಡಬಹುದು. ಪ್ರತಿದಿನ ಧ್ಯಾನ ಮಾಡಿದರೆ, ಅರೋಗ್ಯವಾಗಿ ಇರುತ್ತೇಜವೆ, ಧ್ಯಾನದಿಂದ ಸಂತೋಷ, ಶಾಂತಿ, ನೆಮ್ಮದಿ ಸಿಗುತ್ತದೆ. ನೋ ಮೆಡಿಷನ್ , ನೋ ಡಾಕ್ಟರ್ , ನೋ ಟ್ರೀಟ್ಮೆಂಟ್ ಎಂದು ತಿಳಿಸಿದರು, ಧ್ಯಾನದಿಂದ ಆನಂದ, ಪರಮಾನಂದ, ಬ್ರಹಮಾನಂದ ಪಡೆಯುತ್ತೇಜವೆ. ಪ್ರತಿದಿನ ಧ್ಯಾನ, ಸ್ವಾಧ್ಯಾಯ, ಸತ್ಸಂಗ, ಧ್ಯಾನ ಪ್ರಚಾರ ಮಾಡಿದರೆ, ಧ್ಯಾನದಿಂದ ಜ್ಞಾನ, ಜ್ಞಾನದಿಂದ ಮುಕ್ತಿ ಪಡೆಯಬಹುದು ಎಂದು ಹೇಳಿದರು .

ಮೇಡಂ ಚಂದ್ರಕಲಾ ವೇದಿಕೆಯಲ್ಲಿದ್ದರು. 350 ಕ್ಕೂ ಅಧಿಕ ಧ್ಯಾನಾಸಕ್ತರು ಭಾಗವಹಿಸಿದ್ದರು.

ಮಾಸ್ಟರ್ ಗೀತಾ ರಾಮ್ ಪ್ರಾರ್ಥನೆ ಮಾಡಿದರು. ಮಾಸ್ಟರ್ ಮಾರುತಿ ರಾಮ್ ಎಲ್ಲರನ್ನೂ ಸ್ವಾಗತಿಸಿದರು. ಕೊನೆಯಲ್ಲಿ ಮಾಸ್ಟರ್ ಸಿದ್ಧಾರೂಢ ಸ್ವಾಮಿ ವಂದನಾರ್ಪಣೆ ಮಾಡಿದರು.

# ಎಸ್‌ಸ್ಸೆಸ್‌ಗೆ ಕೇರಳ ಸಮಾಜದಿಂದ ಶ್ರದ್ಧಾಂಜಲಿ

**ದಾವಣಗೆರೆ:** ಕೇರಳ ಸಮಾಜದ ವತಿಯಿಂದ, ನಗರದ ರಾಘವೇಂದ್ರ ವಿದ್ಯಾನಿಕೇತನ ಶಾಲೆಯಲ್ಲಿ ಹಿರಿಯ ಶಾಸಕ, ಅಖಿಲ ಭಾರತದ ವೀರಶೈವ ಮಹಾಸಭಾದ ಅಧ್ಯಕ್ಷ ದಿ. ಡಾ. ಶಾಮನೂರು ಶಿವಶಂಕರಪ್ಪ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕೇರಳ ಸಮಾಜದ ಕಾರ್ಯದರ್ಶಿ ಮಣಿಕುಟ್ಟನ್, ಶ್ರೀಧರ್ ನಾಯರ್, ಅಶೋಕ್ ಕುಮಾರ್, ಸಿಜಿತ್, ಪ್ರಕಾಶ್, ಅನಿಶ್, ಮಹಿಳಾ ಘಟಕದ ಅಧ್ಯಕ್ಷರಾದ ಬಿ. ಪ್ರಸನ್ನ, ಮಂಜುಶಾ, ರೋಷಣಿ, ರಾಜೇಶ್, ಸೌಮ್ಯ ದಿನೇಶ್, ರಿಜಾ



ಜಯಂತ್, ಲತಾ ಅಶೋಕ್ ಮುಂತಾದವರು ಉಪಸ್ಥಿತರಿದ್ದರು.

## ನಿಧನ ಸುದ್ದಿಗಳು

### ಶ್ರೀ ಕೆ.ಎಂ. ಜಗದೀಶ್ ನಿಧನ

**ದಾವಣಗೆರೆ** : ಸಿಟಿ ಡೋ. ನಂ. 476/1೦, 16ನೇ ಕ್ರಾಸ್, ಕೆಟಿಜೆ ನಗರ ವಾಸಿಶ್ರೀ ಕೆ.ಎಂ. ಜಗದೀಶ್
ಅವರು ದಿನಾಂಕ : 23.12.2025ರ ಮಂಗಳವಾರ ರಾತ್ರಿ 7.00ಕ್ಕೆ ನಿಧನರಾದರು. ಮೃತರಿಗೆ 75 ವರ್ಷ ವಯಸ್ಸಾಗಿತ್ತು. ಪತ್ನಿ, ಮೂವರು ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ : 24.12.2025ರ ಬುಧವಾರ ಸಂಜೆ 4 ಗಂಟೆಗೆ ಕುರ್ಕಿ ಗ್ರಾಮದ ಮೃತರ ಜಮೀನಿನಲ್ಲಿ ನೆರವೇರಿದೆ.

### ಶ್ರೀಮತಿ ಗೌರಮ್ಮ ಬಣಕಾರ್ ನಿಧನ

**ದಾವಣಗೆರೆ** : ತಾಲ್ಲೂಕು ಹಲಸಬಾಳು ಗ್ರಾಮದ ವಾಸಿ ಶ್ರೀಮತಿ ಗೌರಮ್ಮ ಬಣಕಾರ್‌ಇವರು, ದಿನಾಂಕ : 23.12.2025ರ ಮಂಗಳವಾರ ರಾತ್ರಿ 10.45 ಗಂಟೆಗೆ ನಿಧನರಾದರು.ಮೃತರಿಗೆ 75 ವರ್ಷ ವಯಸ್ಸಾಗಿತ್ತು. ಮೂವರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗವನ್ನು ಆಗಲಿದ್ದಾರೆ. ಅಂತ್ಯಕ್ರಿಯೆಯನ್ನು ದಿನಾಂಕ 24.12.2025ರ ಬುಧವಾರ ಮಧ್ಯಾಹ್ನ 1 ಗಂಟೆಗೆ ಹಲಸಬಾಳು ರುದ್ರಭೂಮಿಯಲ್ಲಿ ನೆರವೇರಿಸಲಾಯಿತು. ಇಂತಿ ದುಃಖತಪ್ತರು : ಬಣಕಾರ್ ವಂಶಸ್ಥರು, ಮಕ್ಕಳು, ಮೊಮ್ಮಕ್ಕಳು, ಹಾಗೂ .: 9481671218, 9164516784

### ಶ್ರೀಮತಿ ಹೆಚ್. ಪಾರ್ವತಮ್ಮ ನಿಧನ

**ದಾವಣಗೆರೆ** : ಸಿಟಿ, ತರಳಬಾಳು ಬಡಾವಣೆ ವಾಸಿ ದಿ. ಶ್ರೀ ಕೆ.ಎಂ. ರುದ್ರಮುನಯ್ಯ ಅವರ ಧರ್ಮಪತ್ನಿ
ಶ್ರೀಮತಿ ಹೆಚ್. ಪಾರ್ವತಮ್ಮಅವರು ದಿನಾಂಕ : 23.12.2025ರ ಮಂಗಳವಾರ ಬೆಳಿಗ್ಗೆ 12.23ಕ್ಕೆ ನಿಧನರಾದರು. ಮೃತರಿಗೆ 71 ವರ್ಷ ವಯಸ್ಸಾಗಿತ್ತು.
ಓರ್ವ ಪುತ್ರ, ಇಬ್ಬರು ಪುತ್ರಿಯರು, ಸೊಸೆ, ಅಳಿಯ, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯುದಿನಾಂಕ : 24.12.2025ರ ಬುಧವಾರ ಬೆಳಿಗ್ಗೆ 10.30ಕ್ಕೆ ಶಾಮನೂರಿನ ವೀರಶೈವ ರುದ್ರಭೂಮಿಯಲ್ಲಿ ನೆರವೇರಿದೆ. ಇಂತಿ ದುಃಖತಪ್ತರು : ಕುರುಡಿ ಮಠದ ವಂಶಸ್ಥರು, ಕಂದಗಲ್ ಬಂಧು–ಮಿತ್ರರು. ಮೊ : 90609 60151

### ಸುಜಾತಾ ಮಾಸಣಗಿ ನಿಧನ

**ದಾವಣಗೆರೆ:** ತಾಲ್ಲೂಕಿನ ಬಾಡ ಗ್ರಾಮದ ಅಣಬೇರು ಕೆಂಚಪ್ಪ ಪ್ರೌಢಶಾಲೆಯ ಶಿಕ್ಷಕಿ ಸುಜಾತಾ ಮಾಸಣಗಿ (47) ಅನಾರೋಗ್ಯದಿಂದ ಸೋಮವಾರ ನಿಧನರಾದರು.

ಇವರಿಗೆ ಪತಿ, ಪುತ್ರ ಇದ್ದಾರೆ. ಎಸ್. ಎಸ್. ಬಡಾವಣೆಯ 4ನೇ ಮುಖ್ಯ ರಸ್ತೆ–ಯಲ್ಲಿರುವ ಮನೆಯಲ್ಲಿ ಮಂಗಳವಾರ ಬೆಳಿಗ್ಗೆ 8 ಗಂಟೆಯವರೆಗೆ ಮೃತದೇಹದ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ. ರಾಣೆಬೆನ್ನೂರು ನಗರದ ರುದ್ರಭೂಮಿ–ಯಲ್ಲಿ ಅಂತ್ಯಕ್ರಿಯೆ ನಡೆದಿದೆ.

# ಅಪರಾಧಗಳನ್ನು ನಿಯಂತ್ರಿಸಲು ಸಾರ್ವಜನಿಕರ ಸಹಕಾರ ಅಗತ್ಯ

**ಬಳ್ಳಾರಿ:** ಅಪರಾಧಗಳನ್ನು ನಿಯಂತ್ರಿಸಲು ಸಾರ್ವಜನಿಕರ ಸಹಕಾರ ಅತ್ಯಗತ್ಯ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ. ಅವರು ಹೇಳಿದರು.

ನಗರದ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಗೃಹ ಇಲಾಖೆಯ ಜಿಲ್ಲಾ ಮಟ್ಟದ ಸಾರ್ವಜನಿಕರ ಕುಂದುಕೊರತೆ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಿಸಿಟಿವಿ ಗಳ ಡಿವಿಆರ್‌ಗಳನ್ನು ಕಳ್ಳರು ಕಿತ್ತುತ್ತಿರುವ ಕಾರಣ ಸಿಸಿಟಿವಿ ಗಳನ್ನು ಗೂಗಲ್ ಡ್ರೈವ್ ಅಥವಾ ಐ ಕ್ಲೌಡ್ ಡ್ರೈವ್‌ಗೆ ಕನೆಕ್ಟ್ ಮಾಡಲಾಗಿದ್ದು, ರೆಕಾರ್ಡ್ ಆಗಿರುವ ಮಾಹಿತಿ ಇರುತ್ತದೆ. ಯಾವುದೇ ತನಿಖಾ ಏಜೆನ್ಸಿಗಳ ವಿಚಾರಣೆಯು ಆನ್‌ಲೈನ್‌ನಲ್ಲಿ ನಡೆಯುವುದಿಲ್ಲ. ಸಿಬಿಐ, ಇಡಿ, ಪೊಲೀಸ್ ಇನ್ನಿತರೆಗಳ ಹೆಸರಿನಲ್ಲಿ ನಡೆಯುತ್ತಿರುವ ಸೈಬರ್ ಅಪರಾಧಗಳ ಕುರಿತು ಜನರು ಸದಾಕಾಲ ಎಚ್ಚರವಾಗಿದ್ದು, ಏನಾದರೂ ಸಮಸ್ಯೆಗಳಿದ್ದಲ್ಲಿ ತಕ್ಷಣವೇ ಪೊಲೀಸ್ ಇಲಾಖೆಯ ಗಮನಕ್ಕೆ ತರಬೇಕು ಎಂದರು.

ಸಂಚಾರಿ ಪೊಲೀಸ್ ಠಾಣೆಯ ಸಿಪಿಐ ಅಯ್ಯನಗೌಡ ಪಾಟೀಲ್ ಅವರು ಮಾತನಾಡಿ,




ಮಕ್ಕಳ ಸುರಕ್ಷತೆಗಾಗಿ ಅಪ್ರಾಪ್ತರಿಗೆ ವಾಹನಗಳನ್ನು ಚಲಾಯಿಸಲು ಕೊಡಬಾರದು. ಅಪ್ರಾಪ್ತರು ವಾಹನ ಚಾಲಿಸಿದಲ್ಲಿ ಮತ್ತು ವಾಹನ ಕೊಟ್ಟವರಿಗೆ ದಂಡ ವಿಧಿಸಲಾಗುತ್ತದೆ ಎಂದು ತಿಳಿಸಿದರು.

ನಗರದ ಐದು ವೃತ್ತಗಳಲ್ಲಿ ಸಿಗ್ನಲ್ ಲೈಟ್‌ಗಳನ್ನು ಅಳವಡಿಸಿದ್ದು, ಉಳಿದೆರೆಡು ವೃತ್ತಗಳಲ್ಲಿ ಶೀಘ್ರದಲ್ಲೇ ಸಿಗ್ನಲ್ ಲೈಟ್‌ಗಳನ್ನು ಅಳವಡಿಸಲಾಗುತ್ತದೆ. ಶಿಕ್ಷಣ ಸಂಸ್ಥೆಗಳ ವಾಹನಗಳು – ಅವಶ್ಯಕ ಪದಾರ್ಥಗಳ ವಾಹನಗಳ ಸಂಚಾರ, ಸಂಚಾರಿ ನಿಯಮಗಳನ್ನು ಸಾರ್ವಜನಿಕರು ಕಟ್ಟುನಿಟ್ಟಾಗಿ ಪಾಲಿಸಲು ಅಗತ್ಯವಾದ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಅವ್ವಾರು ಮಂಜುನಾಥ್ ಪ್ರಾಸ್ತಾವಿಕವಾಗಿ ಮಾತನಾಡಿ, ದಿನದ 24 ತಾಸು ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸ್ ಇಲಾಖೆಗೆ ನಮ್ಮೆಲ್ಲರ ಸಹಕಾರ ಅತ್ಯಗತ್ಯ. ಕರ್ತವ್ಯದ ಒತ್ತಡ, ಸಿಬ್ಬಂದಿಗಳ ಕೊರತೆ ಮತ್ತು ಇನ್ನಿತರೆ ಸಮಸ್ಯೆಗಳಲ್ಲೂ ಉತ್ತಮವಾದ ಸೇವೆ ಸಲ್ಲಿಸಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುತ್ತಿರುವ ಪೊಲೀಸ್ ಇಲಾಖೆಯ ಸೇವೆ ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಹಿರಿಯ ಉಪಾಧ್ಯಕ್ಷ ಎಸ್. ದೊಡ್ಡಗೌಡ, ಉಪಾಧ್ಯಕ್ಷ ಸೊಂತ ಗಿರಿಧರ, ಗೌರವ ಕಾರ್ಯದರ್ಶಿ ಕೆ.ಸಿ. ಸುರೇಶಬಾಬು ಜಂಟಿ ಕಾರ್ಯದರ್ಶಿಗಳಾದ ಡಾ. ಮರ್ಚೆಡ್ ಮಲ್ಲಿಕಾರ್ಜುನಗೌಡ, ವಿ. ರಾಮಚಂದ್ರ, ನಿಕಟಪೂರ್ವ ಅಧ್ಯಕ್ಷ ಯಶವಂತರಾಜ್ ನಾಗಿರೆಡ್ಡಿ, ಮಾಜಿ ಅಧ್ಯಕ್ಷ ಬಿ. ಮಹಾರುದ್ರಗೌಡ, ಡಿವೈಎಸ್ಪಿ ಮಾಲತೇಶ್ ಕೋನಬೇವು ಸೇರಿದಂತೆ ಕಾರ್ಯಕಾರಿ ಸಮಿತಿ ಸದಸ್ಯರು, ವಿಶೇಷ ಸಮನ್ವಯ ಸಮಿತಿ ಸದಸ್ಯರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸದಸ್ಯರು, ಸಾರ್ವಜನಿಕರು ಪಾಲ್ಗೊಂಡಿದ್ದರು.

# ರೈತರ ಸೇವೆ ಸ್ಮರಣೀಯ: ಮೇಯರ್ ಪಿ.ಗಾದೆಪ್ಪ



**ಬಳ್ಳಾರಿ:** ಯಾವುದೇ ಆಸೆ ಇಲ್ಲದೇ ದೇಶಕ್ಕಾಗಿ, ಜನರಿಗಾಗಿ ಕಷ್ಟಪಟ್ಟು ದುಡಿದು ಬೆಳೆ ಬೆಳೆಯುವ ರೈತರ ಸೇವೆ ಸ್ಮರಣೀಯವಾಗಿದೆ ಎಂದು ಬಳ್ಳಾರಿ ತಾಲ್ಲೂಕು ಕೃಷಿಕ ಸಮಾಜದ ಅಧ್ಯಕ್ಷರೂ ಆಗಿರುವ ಮಹಾನಗರ ಪಾಲಿಕೆಯ ಮೇಯರ್ ಪಿ.ಗಾದೆಪ್ಪ ಅವರು ಹೇಳಿದರು.

ಕೃಷಿ ಇಲಾಖೆಯ ಆತ್ಮ ಯೋಜನೆ, ಕೃಷಿ ವಿಜ್ಞಾನ ಕೇಂದ್ರ ಹಗರಿ ಹಾಗೂ ಬಳ್ಳಾರಿ ತಾಲ್ಲೂಕು ಕೃಷಿಕ ಸಮಾಜ ಇವರ ಸಂಯುಕ್ತಾಶ್ರಯದಲ್ಲಿ ಬಳ್ಳಾರಿ ತಾಲ್ಲೂಕಿನ ಹಗರಿಯ ಕೃಷಿ ವಿಜ್ಞಾನ ಕೇಂದ್ರದ ಸಭಾಂಗಣದಲ್ಲಿ ಅಂತರಾಷ್ಟ್ರೀಯ ರೈತ ದಿನಾಚರಣೆ ಅಂಗವಾಗಿ ಮಂಗಳವಾರ ಆಯೋಜಿಸಿದ್ದ ಕಿಸಾನ್ ಗೋಷ್ಠಿ ಕಾರ್ಯಕ್ರಮ ಹಾಗೂ ರೈತ, ರೈತ ಮಹಿಳೆಯರಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರೈತರ ನಿಸ್ವಾರ್ಥ ಸೇವೆಯನ್ನು ಪರಿಗಣಿಸಿ ಅವರಿಗೆ ಗೌರವ ಸಮರ್ಪಣೆ ಮಾಡುವುದಕ್ಕಾಗಿ ರೈತರ ದಿನಾಚರಣೆ ಆಚರಿಸಲಾಗುತ್ತದೆ ಎಂದರು.

ಕೃಷಿ ಮಹಾವಿದ್ಯಾಲಯದ ಪಶು ವಿಜ್ಞಾನದ ಪ್ರಾಧ್ಯಾಪಕ ಡಾ.ರಮೇಶ್ ಅವರು ಮಾತನಾಡಿ, ರೈತರು ಸುಸ್ಥಿರ ಕೃಷಿ ಕಡೆ ಗಮನ ನೀಡಿ, ಹೆಚ್ಚಿನ ಇಳುವರಿ ಪಡೆಯುವ ಮೂಲಕ ಆದಾಯವನ್ನು ದ್ವಿಗುಣಗೊಳಿಸಿಕೊಳ್ಳಬೇಕು. ಭೂಮಿಯ ಒಡಲನ್ನು ರಕ್ಷಿಸುವುದಕ್ಕಾಗಿ ನೈಸರ್ಗಿಕ ಕೃಷಿಯ ಮೇಲೆ ಅವಲಂಬಿತರಾಗಬೇಕು ಎಂದು ರೈತರಿಗೆ ತಿಳಿಸಿದರು.

ಹಗರಿ ಕೃಷಿ ವಿಜ್ಞಾನ ಕೇಂದ್ರದ ಮಣ್ಣು ವಿಜ್ಞಾನಿ ಡಾ. ರವಿ ಅವರು ಮಾತನಾಡಿ, ಮಣ್ಣು ರೈತರ ಕಣ್ಣು. ಮಣ್ಣಿಂದಲೇ ಜಗದ ಉಗಮ. ಮಣ್ಣನ್ನು ನಾವು ಮುಂದಿನ ಪೀಳಿಗೆಯವರೆಗೂ ಕಾಪಾಡಬೇಕು. ಅತಿಯಾದ ರಾಸಾಯನಿಕ ಬಳಕೆಯನ್ನು ತಪ್ಪಿಸಿ ಸುಸ್ಥಿರ ಕೃಷಿಯೆಡೆಗೆ ಹೆಜ್ಜೆ ಇಡಬೇಕು ಎಂದು ಕರೆ ನೀಡಿದರು.

ಬಳ್ಳಾರಿ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಗರ್ಜಪ್ಪ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ದೇಶ ಹಸಿವು ಮುಕ್ತ ಮಾಡುವಲ್ಲಿ ರೈತರ ಪಾತ್ರ ಬಹುಮುಖ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಹಗರಿಯ ಕೃಷಿ ಕಾಲೇಜಿನ ಪ್ರಭಾರ ಅಧಿಕಾರಿ ಡಾ. ರವಿಶಂಕರ್ ಅವರು ಮಣ್ಣಿನ ಮಹತ್ವ, ನೀರು ಮತ್ತು ಮಣ್ಣು ಸಂರಕ್ಷಣೆ ಕುರಿತು ವಿಷಯ ಮಂಡನೆ ಮಾಡಿದರು. ಕೃಷಿ ಅಧಿಕಾರಿ ಬಸವರಾಜ ಸಿಂಧಿಗೇರಿ, ಕೃಷಿ ಇಲಾಖೆಯಡಿ ದೊರೆಯುವ ವಿವಿಧ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಪ್ರಗತಿಪರ ರೈತರಾದ ಕಾರೇಕಲ್ಲು ವೀರಾಪುರದ ಭೋಗಾರೆಡ್ಡಿ, ಎತ್ತಿನ ಬೂದಿಹಾಳು ಗ್ರಾಮದ ಗಾಳೆಪ್ಪ, ದಮ್ಮೂರು ಗ್ರಾಮದ ನಿತೀಶ್ ಹಾಗೂ ಇಬ್ರಾಹಿಂಪುರದ ರವಿಕುಮಾರ್ ಇವರು ತಮ್ಮ ಕೃಷಿ ಅನುಭವವನ್ನು ರೈತರಲ್ಲಿ ಹಂಚಿಕೊಂಡರು.

ತದನಂತರ ರೈತರೆಲ್ಲರೂ ಕೃಷಿ ವಿಜ್ಞಾನ ಕೇಂದ್ರ ಹಗರಿಯ ಕುಸುಬೆ ಕ್ಷೇತ್ರಕ್ಕೆ ಭೇಟಿ ನೀಡಲಾಯಿತು. ಫ್ಯಾಕ್ಟ್ ಕಂಪನಿಯವರು ಡ್ರೋನ್ ಮೂಲಕ ನ್ಯಾನೋ ಯೂರಿಯಾವನ್ನು ಕುಸುಬೆ ಬೆಳೆಗೆ ಸಿಂಪಡಿಸುವುದನ್ನು ಪ್ರಾತ್ಯಕ್ಷಿಕೆ ಮೂಲಕ ಪ್ರದರ್ಶಿಸಿದರು ಹಾಗೂ ಫ್ಯಾಕ್ಟ್ ಸೇಲ್ಸ್ ಮ್ಯಾನೇಜರ್ ರೇವಂತ್ ಮಣ್ಣು ಮಾದರಿ ಸಂಗ್ರಹಿಸುವ ವಿಧಾನ ತೋರಿಸಿಕೊಟ್ಟರು.

ಕೃಷಿ ಇಲಾಖೆಯ ಆತ್ಮ ಯೋಜನೆಯಡಿ ತಾಲ್ಲೂಕು ಮಟ್ಟದಿಂದ 05 ರೈತ, ರೈತ ಮಹಿಳೆಯರಿಗೆ ಸನ್ಮಾನಿಸಿ ಗೌರವಿಸಲಾಯಿತು. ಕಕ್ಕಬೇವಿನಹಳ್ಳಿ ಗ್ರಾಮದ ಲಕ್ಷ್ಮಿ□□ಪುತ್ರಪ್ಪ, ಕುಂಬಳಪ್ಪ ತಂಬ್ರಳ್ಳಿ ಗ್ರಾಮ, ಕಾರೇಕಲ್ಲು ವೀರಾಪುರದ ರಾಜಶೇಖರ ರೆಡ್ಡಿ, ದಮ್ಮೂರು ಗ್ರಾಮದ ನಿರ್ಮಲ ಹಾಗೂ ಬಾದನಹಟ್ಟಿ ಗ್ರಾಮದ ಚಾನಾಳು ಕವಿತಾ ಇವರಿಗೆ ಸನ್ಮಾನಿಸಿ ಪ್ರಶಸ್ತಿಪತ್ರ ನೀಡಲಾಯಿತು.

ಈ ಸಂದರ್ಭದಲ್ಲಿ ಕೃಷಿ ವಿಸ್ತರಣಾ ವಿಜ್ಞಾನಿ ಡಾ.ನವೀನ್, ಫ್ಯಾಕ್ಟ್ ಕಂಪನಿಯ ಅಸಿಸ್ಟೆಂಟ್ ಜನರಲ್ ಮ್ಯಾನೇಜರ್ ಅರುಣ್ ಕುಮಾರ್ ಪಳನಿಸ್ವಾಮಿ, ತಾಲ್ಲೂಕು ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ಉಪಾಧ್ಯಕ್ಷ ಗೋಡೆಹಾಳ್ ಸತ್ಯನಾರಾಯಣರೆಡ್ಡಿ, ಸಮಿತಿ ಖಜಾಂಚಿ ವೈ.ಲಿಂಗಾರಾಜು, ಕಾರ್ಯಕಾರಿ ಸಮಿತಿ ಸದಸ್ಯರುಗಳಾದ ವೈ.ಗಿರಿಗೋವಿಂದಪ್ಪ, ಕೆ.ರಾಮಣ್ಣ, ಎಸ್.ಸಮುದ್ರರಾಜ್, ವೈ. ಗೋಪಾಲರೆಡ್ಡಿ, ಕೃಷಿ ಅಧಿಕಾರಿಗಳಾದ ಜಂಬಣ್ಣ, ಜ್ಯೋತಿ, ಗಾಯಿತ್ರಿ, ಆತ್ಮ ಯೋಜನೆಯ ಸಿಬ್ಬಂದಿಗಳಾದ ಕವಿತಾ ಕುಮಾರಿ, ವಾಣಿ ಕೋರಪ್ಪಳ, ಶಿಲ್ಪಾ, ಕೃಷಿ ಸಂಜೀವಿನಿ ಸಿಬ್ಬಂದಿ ಮಣಿಕೃಷ್ಣ ಸೇರಿದಂತೆ ಬಳ್ಳಾರಿ ಹಾಗೂ ಕುರುಗೋಡು ತಾಲ್ಲೂಕಿನ ರೈತರು ಭಾಗವಹಿಸಿದ್ದರು.

### ಶಾಮನೂರು ಬದ್ಧತೆ; ಮಾದರಿ ದಾವಣಗೆರೆ ಜಿಲ್ಲೆಗೆ ಅಪಾರ ಕೊಡುಗೆ; ಸಚಿವ ಗುಂಡೂರಾವ್

# ಹೊಳಲ್ಕೆರೆಯಲ್ಲಿ ಶಾಮನೂರು ಶ್ರದ್ಧಾಂಜಲಿ ಸಭೆ

**ಹೊಳಲ್ಕೆರೆ:** ಶಾಮನೂರು ಶಿವಶಂಕರಪ್ಪ ಅವರ ಪಕ್ಷನಿಷ್ಠೆ, ಬದ್ಧತೆ, ಜನಪರ ಕಾಳಜಿ, ಸಾಮಾಜಿಕ ಸೇವೆ ಎಂದಿಗೂ ಸ್ಮರಣಿಯ ಎಂದು ಆರೋಗ್ಯ ಸಚಿವ ದಿನೇಶ್ ಗುಂಡುರಾವ್ ಅಭಿಪ್ರಾಯ ವ್ಯಕ್ತಪಡಿಸಿದರು.

ಪಟ್ಟಣದ ಗಣಪತಿ ಕಲ್ಯಾಣ ಮಂಟಪದಲ್ಲಿ ಬ್ಲಾಕ್ ಕಾಂಗ್ರೆಸ್ ಸಮಿತಿ ಆಯೋಜಿಸಿದ್ದ ಶಾಮನೂರು ಶಿವಶಂಕರಪ್ಪ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ದಾವಣಗೆರೆ ನಗರವನ್ನು ವಾಣಿಜ್ಯ, ಶಿಕ್ಷಣ, ವೈದ್ಯಕೀಯ ಕ್ಷೇತ್ರ ಸೇರಿ ವಿವಿಧ ಕ್ಷೇತ್ರದಲ್ಲಿ ದೇಶವನ್ನು ಗಮನ ಸೆಳೆಯುವಂತೆ ಕಟ್ಟಿದ್ದಾರೆ. ಶಾಸಕ, ಸಂಸದ, ಸಚಿವರಾಗಿ ಸಾರ್ವಜನಿಕರ ಕಲ್ಯಾಣಕ್ಕೆ ಶ್ರಮಿಸಿದ್ದಾರೆ. ಕೊಡಗೈ ದಾನಿಗಳಾಗಿದ್ದ ಶಿವಶಂಕರಪ್ಪ ದೊಡ್ಡ ಆಲದ ಮರದಂತೆ ಸಮಾಜ ಸೇವೆ ಸಲ್ಲಿಸಿದರು ಎಂದರು.

ಕಾಂಗ್ರೆಸ್ ಪಕ್ಷದ ಖಜಾಂಚಿಯಾಗಿ ಪಕ್ಷಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಇಳಿ ವಯಸ್ಸಿನಲ್ಲಿಯೂ ಸಕ್ರಿಯ ರಾಜಕಾರಣದ ಜತೆ ತಮ್ಮ ವ್ಯಾಪಾರದ ಉದ್ಯಮಗಳನ್ನು ನಿರ್ವಹಿಸುವ ಶಕ್ತಿ ಹೊಂದಿದ್ದರು. ಅವರ ಸೇವೆ ಎಂದಿಗೂ ಸ್ಮರಣೀಯವಾಗಿ ಎಂದು ತಿಳಿಸಿದರು.

ನಮ್ಮ ತಂದೆ ಮಾಜಿ ಮುಖ್ಯಮಂತ್ರಿ ಗುಂಡೂರಾವ್ ಕಾಲದಿಂದಲೂ ನಮ್ಮ ಕುಟುಂಬದ ಒಡನಾಡಿಗಳಾಗಿದ್ದ ಶಿವಶಂಕರಪ್ಪ, ಯಾವುದೇ ಪಕ್ಷದ ನಾಯಕರು ದಾವಣಗೆರೆಗೆ ಬಂದಾಗ ಅವರ ಅತಿಥ್ಯ ಸತ್ಕಾರ್ಯ ಕೈಗೊಳ್ಳುತ್ತಿದ್ದ ಅಜಾತಶತ್ರು ಆಗಿದ್ದರು ಎಂದು ಸ್ಮರಿಸಿದರು.

ಮಾಜಿ ಸಚಿವ ಹೆಚ್.ಆಂಜನೇಯ ಮಾತನಾಡಿ, ಶಿವಶಂಕರಪ್ಪ ಶ್ರದ್ಧಾಂಜಲಿ ಕಾರ್ಯಕ್ರಮಕ್ಕೆ ಆಹ್ವಾನಿಸಿದಾಕ್ಷಣ ಕ್ಷಣ ಯೋಚಿಸದೆ ದಿನೇಶ್ ಗುಂಡೂರಾವ್ ಬರುತ್ತೇನೆಂದು ತಿಳಿಸಿ, ಆಗಮಿಸಿ ಹಿರಿಯ ಜೀವಕ್ಕೆ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ ಎಂದರು.



ಮನುಕುಲದ ಮಾನವತವಾದಿ ಶಾಮನೂರು ಶಿವಶಂಕರಪ್ಪ ಜಾತಿ-ಧರ್ಮ ಎನ್ನದೆ ಜಾತ್ಯತೀತ ತತ್ವ ಸಿದ್ಧಾಂತಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡಿದ್ದರು. ಶೋಷಿತರ ಧ್ವನಿಯಾಗಿ ಎಲ್ಲ ಬಡ ಜನರ ಪ್ರಗತಿಗೆ ಶ್ರಮಿಸಿದರು. ನೊಂದ ಜನರ ಪಾಲಿಗೆ ಊರುಗೋಲಾಗಿದ್ದರು. ಉಚಿತ ಶಿಕ್ಷಣ, ಆರೋಗ್ಯ ವ್ಯವಸ್ಥೆಗೆ ಮಾದರಿ ಆಗಿದ್ದರು ಎಂದು ತಿಳಿಸಿದರು.

ಸಿ.ಕೆ.ಜಾಪರ್ ಷರೀಫ್ ಸಹಕಾರದಿಂದ 1972ರಲ್ಲಿ ಕಾಂಗ್ರೆಸ್ ಪಕ್ಷದ ಟಿಕೆಟ್ ಸಿಕ್ಕು ಶಾಸಕರಾಗಿ ಆಯ್ಕೆಯಾದರು. ಅಂದಿನಿಂದಲೂ ಜೀವಿತಾವಧಿಯವರೆಗೂ ಪಕ್ಷನಿಷ್ಠರಾಗಿಯೇ ಇದ್ದರು. ಅವರು ಬದುಕು ಮಾದರಿ ಎಂದರು.

ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಹನುಮಂತಪ್ಪ, ಜಿಲ್ಲಾಧ್ಯಕ್ಷ ಎಂ.ಕೆ.ತಾಜಾಪೀರ್, ಜಿಪಂ ಮಾಜಿ ಅಧ್ಯಕ್ಷ ಪಿ.ಆರ್.ಶಿವಕುಮಾರ್, ಗೀತಾನಂದಿನಿಗೌಡ, ಮಾಜಿ ಸದಸ್ಯರಾದ ಇಂದಿರಾಕಿರಣ್, ಎಂ.ಜಿ.ಲೋಹಿತ್ ಕುಮಾರ್, ಗ್ಯಾರಂಟಿ ಜಿಲ್ಲಾಧ್ಯಕ್ಷ ಶಿವಣ್ಣ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಎಂ.ಕೆ.ರುದ್ರಪ್ಪ, ಮಾಜಿ ಅಧ್ಯಕ್ಷ ಕೆ.ಎಂ.ಶಿವಕುಮಾರ್, ವೀರಶೈವ ಲಿಂಗಾಯತ ಸಮಾಜದ ತಾಲ್ಲೂಕಾಧ್ಯಕ್ಷ ಮಾಳಿಗೆ ಪ್ರಭಾಕರ್, ಭೋವಿ ನಿಗಮದ ಮಾಜಿ ಸದಸ್ಯ ಹನುಮಂತಪ್ಪ ಗೋಡೆಮನೆ ಮಾತನಾಡಿದರು.

ಮುಖಂಡ ಬಿ.ಆರ್.ರವಿವರ್ಮ, ಕೆಡಿಪಿ ಸದಸ್ಯರಾದ ಸುರೇಶ್ ಪಾಡಿಗಟ್ಟೆ, ಕಿರಣ್, ಪುಟ್ಟಣ್ಣ, ದೇವೇಂದ್ರಪ್ಪ, ಪುರಸಭೆ ಮಾಜಿ ಉಪಾಧ್ಯಕ್ಷ ಕೆ.ಸಿ.ರಮೇಶ್, ಜಗದೀಶ್ ನಾಡಿಗ್, ಮಹಡಿ ಶಿವಮೂರ್ತಿ, ಸಾಸಲು ದೇವರಾಜ್, ಯುವ ಕಾಂಗ್ರೆಸ್ ಅಧ್ಯಕ್ಷ ಚೇತನ್ ಬೋರೇನಹಳ್ಳಿ, ಮುಖಂಡರಾದ ರಂಗಸ್ವಾಮಿ, ಪವನ್ ಯಾದವ್ ಇದ್ದರು.

### ಜಿಲ್ಲಾ ಮಟ್ಟದ ಸಮನ್ವಯ ಸಭೆಯಲ್ಲಿ ಡಿಸಿ ನಾಗೇಂದ್ರ ಪ್ರಸಾದ್.ಕೆ ಕಟ್ಟುನಿಟ್ಟಿನ ಸೂಚನೆ

# ಜಿಲ್ಲೆಯಲ್ಲಿ ಜನನ, ಮರಣ ನೋಂದಣಿಗೆ ವಿಳಂಬ ತೋರುವಂತಿಲ್ಲ

**ಬಳ್ಳಾರಿ:** ಜಿಲ್ಲೆಯಲ್ಲಿ ಬೆಳೆ ಕಟಾವು ಪ್ರಯೋಗಗಳು ಮತ್ತು ಜನನ, ಮರಣ ಘಟನೆ ವಿವರ ನೋಂದಣಿಯಲ್ಲಿ ವಿಳಂಬ ತೋರುವಂತಿಲ್ಲ, ಈ ಕುರಿತು ಸಂಬಂಧಿಸಿದ ಅಧಿಕಾರಿಗಳು ನಿಗಾ ವಹಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಜನನ ಮತ್ತು ಮರಣ ಘಟನೆ ವಿವರಗಳನ್ನು ನಿಗದಿತ ಅವಧಿಯೊಳಗೆ ತಪ್ಪದೇ ಮಾಹಿತಿ ನೋಂದಾಯಿಸಿಕೊಂಡು, ಸಂಬಂಧಿಸಿದ ಕುಟುಂಬದವರಿಗೆ ಪ್ರಮಾಣಪತ್ರ ವಿತರಣೆ ಮಾಡಬೇಕು. ಅವರನ್ನು ಕಚೇರಿಗಳಿಗೆ ಅಲೆದಾಡಿಸುವಂತಿಲ್ಲ ಎಂದು ತಿಳಿಸಿದರು.

ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರದಲ್ಲಿ ಕಳೆದ ನಾಲ್ಕು ತಿಂಗಳಲ್ಲಿ ಒಟ್ಟು 125 ಜನನ, ಮರಣ ಘಟನೆ ವಿವರ ನೋಂದಣಿಯಲ್ಲಿ ವಿಳಂಬವಾಗಿದ್ದು, ಎಲ್ಲಾ ಘಟನೆಗಳನ್ನು ನಿಗಧಿತ ಸಮಯದಲ್ಲಿ ನೋಂದಣಿ ಮಾಡಲು ಸಂಬಂಧಿಸಿದ ವೈದ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ಅದೇರೀತಿಯಾಗಿ ಸಂಡೂರು ತಾಲ್ಲೂಕಿನ ತೋರಣಗಲ್ಲು, ಬಂಡ್ರಿ, ಚೋರನೂರು, ತಾರನಗರ ಮತ್ತು ಸಿರುಗುಪ್ಪ ತಾಲ್ಲೂಕಿನ ಕರೂರು ಸರ್ಕಾರಿ ಆಸ್ಪತೆಗಳಲ್ಲಿ ಜನನ ಮತ್ತು ಮರಣ ಘಟನೆಗಳ ವಿವರ ನೋಂದಣಿಯಲ್ಲಿ ವಿಳಂಬವಾಗಿರುವುದು ಕಂಡುಬಂದಿದ್ದು, ಕಾರಣ ಕೇಳಿ ಸಂಬಂಧಿಸಿದ ತಾಲ್ಲೂಕು ವೈದ್ಯಾಧಿಕಾರಿಗಳಿಗೆ ನೋಟಿಸ್ ಜಾರಿ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಪ್ರತಿ ತಿಂಗಳಿಗೊಮ್ಮೆ ಆಯಾ ತಾಲ್ಲೂಕುಗಳ ತಹಶೀಲ್ದಾರರು ಜನನ ಮತ್ತು ಮರಣ ಪ್ರಮಾಣ ಪತ್ರ ವಿತರಣೆಗೆ ಸಂಬಂಧಿಸಿದಂತೆ ಆಗುವ ವಿಳಂಬ ಕುರಿತು ಸಭೆ ನಡೆಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿರುವ ಎಲ್ಲಾ ಸಣ್ಣ ನೀರಾವರಿ ಹಾಗೂ ನೀರಿನಾಸರೆಗಳ ಗಣತಿಯನ್ನು ಸಮರ್ಪಕವಾಗಿ ಕೈಗೊಳ್ಳಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದ ಅವರು, ಜಿಲ್ಲಾ ಮಟ್ಟದಲ್ಲಿ ಗಣತಿ ಕಾರ್ಯ ಮಾಡುವ ಮೇಲ್ವಿಚಾಕರಿಗೆ ಮತ್ತು ತಾಲ್ಲೂಕು ಮಟ್ಟದಲ್ಲಿ ಗಣತಿ ಕಾರ್ಯ ಕೈಗೊಳ್ಳುವ ಕಂದಾಯ ಇಲಾಖೆಯ ಗ್ರಾಮ ಲೆಕ್ಕಾಧಿಕಾರಿಗಳು ಹಾಗೂ ಕಂದಾಯ ನಿರೀಕ್ಷಕರು ಗಣತಿ ಕಾರ್ಯ ವಿಧಾನದ ಕುರಿತು ಸೂಕ್ತ ತರಬೇತಿ ಹೊಂದಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಜಿಲ್ಲಾ ಸಾಂಖ್ಯಿಕ ಅಧಿಕಾರಿ ಎನ್.ಕೆ.ಪತ್ರಿಬಸಪ್ಪ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಸೋಮಸುಂದರ್, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ ಸೇರಿದಂತೆ ಜಿಲ್ಲೆಯ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು.

# ಅಕ್ಕಪಡೆ ಯೋಜನೆ: ಜಿಲ್ಲಾ ಮಟ್ಟದ ಮೇಲ್ವಿಚಾರಣೆ, ಪರಿಶೀಲನಾ ಸಮಿತಿ ಸಭೆ



**ರಾಮನಗರ:** ಬೆಂಗಳೂರು ದಕ್ಷಿಣ ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ನಗರದ ಜಿಲ್ಲಾ ಪೊಲೀಸ್ ಕಚೇರಿ ಸಭಾಂಗಣದಲ್ಲಿ ಅಕ್ಕ ಪಡೆ ಯೋಜನೆಯ ಜಿಲ್ಲಾ ಮಟ್ಟದ ಮೇಲ್ವಿಚಾರಣೆ ಮತ್ತು ಪರಿಶೀಲನಾ ಸಮಿತಿ ಸಭೆ ಆಯೋಜಿಸಲಾಗಿತ್ತು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ರಾಮಚಂದ್ರಪ್ಪ,

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ದಿನೇಶ್, ಡಿವೈಎಸ್‌ಪಿ ಶ್ರೀನಿವಾಸ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶಿವಕುಮಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಬಿಲಾಲ್, ಮಕ್ಕಳ ರಕ್ಷಣಾಧಿಕಾರಿ ರಜಿನಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು, ಸಖಿ ಮತ್ತು ಸಾಂತ್ವನ ಕೇಂದ್ರದ ಸಿಬ್ಬಂದಿಗಳು ಹಾಜರಿದ್ದರು.

### ಡಾ.ಕಸ್ತೂರಿ ರಂಗನ್ ವರದಿ ತಿರಸ್ಕಾರ : ದೂರವಾದ ಆತಂಕ

# ರಾಜ್ಯ ಸರಕಾರದ ಕ್ರಮ ಸ್ವಾಗತಾರ್ಹ : ಡಿ.ಸಿ ಸಣ್ಣಸ್ವಾಮಿ


**ಹಾಸನ** : ಮಲೆನಾಡು ಭಾಗದ ಜನರಲ್ಲಿ ಭಾರಿ ಆತಂಕ ಉಂಟು ಮಾಡಿದ್ದ ಡಾ.ಕಸ್ತೂರಿ ರಂಗನ್ ವರದಿಯನ್ನು ತಿರಸ್ಕರಿಸಿರುವ ರಾಜ್ಯ ಸರಕಾರದ ಕ್ರಮ ಸ್ವಾಗತಾರ್ಹ, ಎಂದು ಜಿಲ್ಲಾ ಕಾಂಗ್ರೆಸ್ ವಕ್ತಾರರು ಹಾಗೂ ಮಾಜಿ ಜಿ.ಪಂ ಸ್ಥಾಯಿ ಸಮಿತಿ ಅಧ್ಯಕ್ಷರಾದ ಡಿ.ಸಿ ಸಣ್ಣಸ್ವಾಮಿ ಸರ್ಕಾರಕ್ಕೆ ಅಭಿನಂದನೆ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸಕಲೇಶಪುರ ಮಲೆನಾಡು ಭಾಗದ ರೈತರು, ಕಾಫಿ ಬೆಳೆಗಾರರು, ಹೋಮ್ ಸ್ಟೇ, ರೇಸಾರ್ಟ್, ಹಾಗೂ ವಸತಿ ಗ್ರಾಮಗಳಲ್ಲಿ ಹತ್ತಾರು ವರ್ಷಗಳಿಂದ ಸ್ವಾದೀನದಲ್ಲಿದ್ದು, ಜೀವನಕ್ಕಾಗಿ ಕಾಫಿ ಏಲಕ್ಕಿ, ಮೆಣಸು, ಶುಂಠಿ ಹಾಗೂ ಇನ್ನಿತರೆ ಬೆಳೆಗಳನ್ನು ಬೆಳೆದುಕೊಂಡು ಬದುಕು ಸಾಗಿಸುತ್ತಿದ್ದರು, ಆದರೆ ಕಸ್ತೂರಿ ರಂಗನ್ ವರದಿಯಿಂದ ಈ ಭಾಗದ ಜನರಲ್ಲಿ ಭಾರಿ ಆತಂಕ ಉಂಟುಮಾಡಿತ್ತು. ಕಾರಣ ಯಾವುದೇ ರೀತಿಯ ಗಣಿಗಾರಿಕೆ, ಕೈಗಾರಿಕೆ, ಕಟ್ಟಡ ನಿರ್ಮಾಣ, ಸಿಮೆಂಟು, ಕಲ್ಲು, ರಾಸಾಯನಿಕ ಬಳಸಲು, ಜನವಸತಿ ನಿರ್ಮಿಸಲು ಅವಕಾಶವಿಲ್ಲ ಎಂಬ ಕಸ್ತೂರಿ ರಂಗನ್ ವರದಿ ಆತಂಕ ಸೃಷ್ಟಿಸಿತ್ತು. ಅದರೆ ಇದೀಗ ಡಾ.ಕಸ್ತೂರಿ ರಂಗನ್ ವರದಿಯನ್ನು ರಾಜ್ಯ ಸರಕಾರ ತಿರಸ್ಕರಿಸಿರುವುದು ರೈತರು ಸೇರಿದಂತೆ ಪ್ರವಾಸೋದ್ಯಮಕ್ಕೂ ಸಹ ಹೆಚ್ಚು ಅನುಕೂಲವಾಗಲಿದೆ. ರೈತರ ಪರ ನಿಂತಿರುವ ರಾಜ್ಯ ಸರಕಾರದ ಕ್ರಮ ಸ್ವಾಗತಾರ್ಹವಾದುದು ಎಂದು ತಿಳಿಸಿದ್ದಾರೆ.



ಈ ಹಿಂದೆ ಕಸ್ತೂರಿ ರಂಗನ್ ವರದಿಯ ಬಗ್ಗೆ ಭಾರಿ ಪರ,ವಿರೋಧ ಚರ್ಚೆಗಳಾಗಿದ್ದವು, ಕಸ್ತೂರಿ ರಂಗನ್ ವರದಿ ಜಾರಿಗೊಂಡರೆ ಪಶ್ಚಿಮ ಘಟ್ಟ ಪ್ರದೇಶಗಳಲ್ಲಿ ಹೆಚ್ಚಿನ ನಿರ್ಬಂಧಗಳನ್ನು ಜಾರಿಗೊಳಿಸಿದರೆ ಅದರಿಂದ ಗ್ರಾಮದ ಜನರು ಗಂಭೀರ ಸಮಸ್ಯೆಗಳನ್ನು ಅನುಭವಿಸಬೇಕಾಗಿತ್ತು, ಜನರ ಜೀವನೋಪಾಯದ ಮೇಲೆ ಇದು ತೀವ್ರ ಪರಿಣಾಮ ಬೀರುವ ಸಾಧ್ಯತೆ ಇತ್ತು, ಪಶ್ಚಿಮ ಘಟ್ಟ ಪ್ರದೇಶವನ್ನು ಪರಿಸರ ಸೂಕ್ಷ್ಮ ಪ್ರದೇಶ ಎಂದು ಘೋಷಿಸುವ ಸಂಬಂಧ ಕೇಂದ್ರ ಸರಕಾರ ಹೊರಡಿಸಿರುವ ಅಧಿಸೂಚನೆಯನ್ನು ರಾಜ್ಯ ಸರಕಾರ ತಿರಸ್ಕರಿಸಿರುವುದು, ಪರಿಸರ ಸೂಕ್ಷ್ಮ ವಲಯ ಹಾಗೂ ಸಂರಕ್ಷಿತ ಅರಣ್ಯ ಪ್ರದೇಶ ಹೊರತುಪಡಿಸಿ ಬೇರೆ ಪ್ರದೇಶದಲ್ಲಿ ಕೃಷಿ, ಮತ್ತಿತರ ಚಟುವಟಿಕೆ ಮುಂದುವರಿಸಲು ಯಾವುದೇ ತೊಂದರೆ ಇಲ್ಲ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಬೆಳಗಾವಿ ಅಧಿವೇಶನದಲ್ಲಿ ತಿಳಿಸಿರುವುದು ನಿಟ್ಟುಸಿರು ಬಿಡುವಂತೆ ಮಾಡಿದೆ ಎಂದರು.

# ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಅಯ್ಯಪ್ಪಸ್ವಾಮಿ ಪೂಜೆ



**ಗದಗ:** ನಗರದ ದಿ. ಗದಗ ಕೋ. ಆಪ್ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಗದಗ ಜಿಲ್ಲಾ ಶ್ರೀ ಅಯ್ಯಪ್ಪಸ್ವಾಮಿ ಸೇವಾ ಸಮಿತಿ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಅಯ್ಯಪ್ಪಸ್ವಾಮಿ ಪೂಜಾ ಕಾರ್ಯಕ್ರಮ 25-12-2025ರಂದು ಸಂಜೆ 6.30ಕ್ಕೆ ಜರುಗಲಿದೆ.

ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಹಾಗೂ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ ನೇತೃತ್ವ ವಹಿಸುವರು.

ಅಯ್ಯಪ್ಪಸ್ವಾಮಿ ಎಲ್ಲಾ ಮಾಲಾಧಾರಿಸ್ವಾಮಿಗಳು ಪೂಜೆಗೆ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ದಿ. ಗದಗ ಕೋ. ಆಪ್ ಕಾಟನ್ ಸೇಲ್ ಸೊಸೈಟಿ ಚೇರಮನ್ ರವಿ ಮೂಲಿಮನಿ, ಗದಗ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಅವರು ತಿಳಿಸಿದ್ದಾರೆ.

# ಪತ್ರಕರ್ತರ ಸ್ಮಾರ್ಟ್‌ಕಾರ್ಡ್ ಮಾನ್ಯತಾ ಅವಧಿ ವಿಸ್ತರಣೆ

**ದಾವಣಗೆರೆ** : ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯವರು ಮಾನ್ಯತೆ ಪಡೆದ ಪತ್ರಕರ್ತರಿಗೆ ವಿತರಿಸಲಾಗಿರುವ ಸ್ಮಾರ್ಟ್‌ಕಾರ್ಡಗಳ ಮಾನ್ಯತಾ ಅವಧಿಯನ್ನು ಫೆಬ್ರವರಿ 28, 2026 ರವರೆಗೆ ವಿಸ್ತರಿಸಲಾಗಿದೆ.

ನಿಗಮದ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ಸೂಕ್ತ ತಿಳುವಳಿಕೆ ನೀಡುವುದು ಮತ್ತು ಡಿಸೆಂಬರ್ 31 ರವರೆಗೆ ಚಾಲ್ತಿಯಲ್ಲಿರುವ ಸ್ಮಾರ್ಟ್‌ಕಾರ್ಡ್ ಬಸ್ ಪಾಸ್‌ಗಳನ್ನು ಹೊಂದಿರುವ ಪತ್ರಕರ್ತರನ್ನು ಫೆ.28,2026ರವರೆಗೆ ಕ.ರಾ.ರ.ಸಾ ನಿಗಮದ ಬಸ್ಸುಗಳಲ್ಲಿ ಪ್ರಯಾಣಿಸಲು ಅನುಮತಿಸಬೇಕೆಂದು ಮುಖ್ಯ ಸಂಚಾರ ವ್ಯವಸ್ಥಾಪಕರಾದ ಎಸ್ ರಾಜೇಶ್ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ಬಳ್ಳಾರಿ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಪ್ರಸ್ತಕ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿ.ಹೆಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಅರ್ಹ ಹೊಸ ವಿದ್ಯಾರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಆಫ್-ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.2025-26ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿ.ಹೆಚ್.ಡಿ ಅಧ್ಯಯನ ಪ್ರಾರಂಭಿಸಿರುವ (ದಿನಾಂಕ:10-02-2025 ಮತ್ತು ಅದರ ನಂತರ ಪ್ರಥಮ ವರ್ಷದ ಪಿ.ಹೆಚ್.ಡಿ. ಪ್ರಾರಂಭಿಸಿರಬೇಕು) ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಗೆ ಸೇರಿದ ಅರ್ಹ ಅಭ್ಯರ್ಥಿಗಳು ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಅರ್ಜಿ ಸಲ್ಲಿಸಬಹುದು.ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳಲ್ಲಿ ಹಾಗೂ ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿ.ಹೆಚ್.ಡಿ ಅಧ್ಯಯನ ಮಾಡುತ್ತಿರುವ ಹೊಸ ಅಭ್ಯರ್ಥಿಗಳು ಮಾತ್ರ ಆಫ್-ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.ಅರ್ಜಿ ಸಲ್ಲಿಸಲು ಜ.09 ಕೊನೆ ದಿನವಾಗಿದ್ದು, ಸಂಜೆ 5.30 ಗಂಟೆಯೊಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊ.8050770004 ಗೆ ಸಂಪರ್ಕಿಸಬಹುದು

**ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಜಗಳೂರು**

**ಸಿ.ಆರ್.ಮಿಸ್ ನಂ:993/2025**

**ಅರ್ಜಿದಾರರು:** 1. ಶ್ರೀಮತಿ ರೇಣುಕಮ್ಮ, ಕೋಂ ಲೇಟ್ ನಾಗರಾಜಪ್ಪ, ವಯಸ್ಸು 40 ವರ್ಷ.2. ರಂಜಿತ ಬಿನ್ ಲೇಟ್ ನಾಗರಾಜಪ್ಪ,ವಯಸ್ಸು ವರ್ಷ.3. ನೇತ್ರಾವತಿ ಬಿನ್ ಲೇಟ್ ನಾಗರಾಜಪ್ಪ, ವಯಸ್ಸು ವರ್ಷ. ಎಲ್ಲರೂ ಕೂಲಿ ಕೆಲಸ, ಎಲ್ಲರ ವಾಸ: ಗುಡ್ಡದಲಿಂಗನಹಳ್ಳಿ ಗ್ರಾಮ. ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ,

**ವಿರುದ್ದ**

**ಎದುರುದಾರರು :** ತಹಶೀಲ್ದಾರ್‌ರವರು ತಹಶೀಲ್ದಾರವರ ಕಛೇರಿ, ಜಗಳೂರು

**ಸಾರ್ವಜನಿಕ ನೋಟೀಸ್**

ಮೇಲ್ಕಂಡ ಪ್ರಕರಣದಲ್ಲಿನ 1ನೇ ಅರ್ಜಿದಾರರ ಅತ್ತೆ ಹಾಗೂ 2ಮತ್ತು 3ನೇ ಅರ್ಜಿದಾರರ ಆಜ್ಜಿಯವರಾದ ಶ್ರೀಮತಿ ಗೌರಮ್ಮ ಕೋಂ ಬಸಪ್ಪ ಇವರು ದಿನಾಂಕ 13-09-2024 ರಂದು ಜಗಳೂರು ತಾಲ್ಲೂಕು, ಗುಡ್ಡದಲಿಂಗಣ್ಣನಹಳ್ಳಿ ಗ್ರಾಮದಲ್ಲಿ ಮರಣ ಹೊಂದಿದ್ದು, ಸದರಿ ದಿನಾಂಕವನ್ನು ಎದುರುದಾರರು ಸಂಬಂಧಪಟ್ಟ ದಾಖೆಯಲ್ಲಿ ದಾಖಲೆಯಲ್ಲಿ ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ, ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿ ಕೊಂಡು ಪ್ರಕರಣವನ್ನು ದಿನಾಂಕ:-30-01-2026ರ ಬೆಳಿಗ್ಗೆ 11.00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ, ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ..ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:-22-12-2025ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಅರ್ಜಿದಾರರ ಪರ ವಕೀಲರು
ಮಲ್ಲಿಕಾರ್ಜುನ

ಶಿರಸ್ತೆದಾರರು
ಸಿವಿಲ್ ಮತ್ತು ಜೆ.ಎಂ.
ಎಫ್. ಸಿ ನ್ಯಾಯಾಲಯ
ಜಗಳೂರು

**ಮಾನ್ಯ ಘನ 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ದಾವಣಗೆರೆ**

ಸಿ.ಆರ್.ಮಿಸ್.ನಂ: 3066/ 2025

**ಅರ್ಜಿದಾರರು** : ಶ್ರೀಮತಿ ಶೃತಿ ಎ ಕೋಂ ಮಂಜುನಾಥ ಎಸ್. ತಂದೆ ಲೇಟ್ ಅಂಜಿನಪ್ಪ ವಯಸ್ಸು ಸುಮಾರು 33 ವರ್ಷ ವಾಸ: 91/89/354 ಪಿ, 3 ನೇ ಮೇನ್ 3ನೇ ಕ್ರಾಸ್, ಡಿ.ಸಿ.ಎಂ. ಟೌನ್‌ಶಿಪ್, ದಾವಣಗೆರೆ

**-ವಿರುದ್ಧ**

**ಎದುರುದಾರರು:** ಆಯುಕ್ತರು
ಜನನ ಮತ್ತು ಮರಣ ನೋಂದಾಣಾಧಿಕಾರಿಗಳು, ದಾವಣಗೆರೆ

**ಪ್ರಕಟಣೆಗಾಗಿ**

ಈ ಮೇಲ್ದಂಡ ಕೇಸಿನಲ್ಲಿ ಅರ್ಜಿದಾರರು ಎದುರುದಾರರ ವಿರುದ್ಧ ಅರ್ಜಿಯನ್ನು ಸಲ್ಲಿಸಿದ್ದು, ಅರ್ಜಿದಾರರ ತಂದೆಯಾದ ಅಂಜಿನಪ್ಪ ಇವರು ದಿನಾಂಕಃ 03-06-2000 ರಂದು ಅರ್ಜಿದಾರರು ಈ ಹಿಂದೆ ಬಾಡಿಗೆ ಮನೆಯಲ್ಲಿದ್ದ ವಿನೋಬನಗರ, ದಾವಣಗೆರೆಯಲ್ಲಿ ಮರಣಿಸಿದ್ದು, ಇವರ ಮರಣ ಪ್ರಮಾಣ ಪತ್ರವನ್ನು ಪಡೆಯುವ ಸಲುವಾಗಿ ಅರ್ಜಿದಾರರು ಘನ ನ್ಯಾಯಾಲಯದಲ್ಲಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಇದಕ್ಕೆ ಸಂಬಂಧಿಸಿದಂತೆ ತಕರಾರು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಿವುದಿದ್ದಲ್ಲಿ ದಿನಾಂಕ: 27-01-2026 ರಂದು ಖುದ್ದು ಹಾಜರಾಗಿ ಆಕ್ಷೇಪಣೆಯನ್ನು ಸಲ್ಲಿಸತಕ್ಕದ್ದು.

ತಪ್ಪಿದ್ದಲ್ಲಿ ತಮ್ಮ ಗೈರು ಹಾಜರಿಯಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು. ನ್ಯಾಯಾಲಯದ ಮುದ್ರೆ ಹಾಗೂ ಸಹಿಯೊಂದಿಗೆ ದಿನಾಂಕ: 19-12-2025 ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/-
ಅರ್ಜಿದಾರರ ಪರ ವಕೀಲರು
(ಬಿ.ವೈ ತಿಪ್ಪೇಶ್)

ಸಹಿ/-
ಶಿರಸ್ತೇದಾರರು
ಮಾನ್ಯ 2ನೇಹೆಚ್ಚುವರಿ ಸಿವಿಲ್
ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ನ್ಯಾಯಾಲಯ ದಾವಣಗೆರೆ

# ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

**ಬಳ್ಳಾರಿ:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ವಿಷಯ ವ್ಯಾಸಂಗ ಮಾಡಿರುವ ಪದವಿ, ಸ್ನಾತಕೋತ್ತರ ಪದವಿಧರರಿಗೆ ಬಳ್ಳಾರಿ ಜಿಲ್ಲೆಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯಲ್ಲಿ ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕುರಿತು 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ತರಬೇತಿಗಾಗಿ ಕರ್ನಾಟಕದಲ್ಲಿ ಕಾನೂನಾತ್ಮಕವಾಗಿ ಸ್ಥಾಪಿತಗೊಂಡ ವಿಶ್ವವಿದ್ಯಾನಿಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ ಕನ್ನಡ ಭಾಷೆ ಬಳಸಲು ಪ್ರಬುದ್ಧತೆ ಇರುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದು. ಮೆರಿಟ್ ಹಾಗೂ ಸಂದರ್ಶನದ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು. ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅರ್ಜಿ ಲಕೋಟೆಯ ಮೇಲೆ ಕಡ್ಡಾಯವಾಗಿ ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ನೀಡುವ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಎಂದು ನಮೂದಿಸಬೇಕು.ಆಯ್ಕೆಯಾದ ಅಭ್ಯರ್ಥಿಗಳು ಸಂದರ್ಶನದ ವೇಳೆ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಆಯ್ಕೆಯಾಗಿ ತರಬೇತಿಗೆ ಹಾಜರಾಗುವ ಸಂದರ್ಭದಲ್ಲಿ ಮೂಲ ದಾಖಲಾತಿಗಳನ್ನು ಬಳ್ಳಾರಿ ಜಿಲ್ಲೆಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ಸಂದರ್ಭದಲ್ಲಿ ಅಭ್ಯರ್ಥಿಗಳು ಸ್ನಾತ್ತಕೋತ್ತರ ಅಂತಿಮ ವರ್ಷದ ಪದವಿಯ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸಬೇಕು. ಅಂಕಪಟ್ಟಿಯನ್ನು ನಿರೀಕ್ಷಿಸಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.ತರಬೇತಿಯ ಅವಧಿ ವೇಳೆ ಮಾಹೆಯಾನ 15,000 ರೂ. (ಹದಿನೈದು ಸಾವಿರ ರೂಪಾಯಿಗಳು ಮಾತ್ರ) ಗಳ ಶಿಷ್ಯವೇತನ ನೀಡಲಾಗುವುದು. ಅವಧಿ ಈ ತರಬೇತಿಯು 2026ರ ಕ್ಯಾಲೆಂಡರ್ ಅವಧಿಯ ಜನವರಿ–2026ರ ಮಾಹೆಯಿಂದ ಪ್ರಾರಂಭಗೊಂಡು ಡಿಸೆಂಬರ್–2026ಕ್ಕೆ ಕೊನೆಗೊಳ್ಳಲಿದೆ. ಈ ತರಬೇತಿಯು 12 ತಿಂಗಳ ಅಪ್ರೆಂಟಿಸ್ ತರಬೇತಿಯಾಗಿದ್ದು, ತಾತ್ಕಾಲಿಕವಾಗಿರುತ್ತದೆ. ತರಬೇತಿಯ ಅವಧಿಯಲ್ಲಿ ಬೇರೆ ಉದ್ಯೋಗ ಮಾಡುವಂತಿಲ್ಲ. ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ. ಆಸಕ್ತರು ಅರ್ಜಿಯನ್ನು 2025ರ ಡಿಸೆಂಬರ್ 26 ರೊಳಗಾಗಿ ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ ಆವರಣ, ಬಳ್ಳಾರಿ ಇಲ್ಲಿಗೆ ಸಲ್ಲಿಸಬಹುದಾಗಿದೆ.ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯಿಂದ ಪಡೆಯಬಹುದು ಎಂದು ಹಿರಿಯ ಸಹಾಯಕ ನಿರ್ದೇಶಕ ತುಕಾರಾಂ ರಾವ್ ಬಿ.ವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 2ನೇ ದಿನ 5253 ಮಕ್ಕಳಿಗೆ ಪೋಲಿಯೋ ಹನಿ

**ಚಿಕ್ಕಮಗಳೂರು:** ಜಿಲ್ಲಾದ್ಯಂತ ಡಿಸೆಂಬರ್ 22 ರಂದು ನಡೆದ ಪಲ್ಸ್ ಪೋಲಿಯೋ ಕಾರ್ಯಕ್ರಮದ ಎರಡನೇ ದಿನ 5253 ಮಕ್ಕಳಿಗೆ ಪೋಲಿಯೋ ಹನಿ ಹಾಕಲಾಗಿದ್ದು, ಒಟ್ಟು ಸಂಖ್ಯೆ 81,287ಕ್ಕೆ ಏರಿದೆ.ತಾಲ್ಲೂಕುವಾರು ಮಾಹಿತಿಯಂತೆ ಚಿಕ್ಕಮಗಳೂರು 1995. ಕಡೂರು 424, ತರೀಕೆರೆ 641, ಅಜ್ಜಂಪುರ 149, ಮೂಡಿಗೆರೆ 1199, ಕಳಸ 234, ಕೊಪ್ಪ 221, ಎನ್.ಆರ್.ಪುರದಲ್ಲಿ 292 ಹಾಗೂ ಶೃಂಗೇರಿಯಲ್ಲಿ 98 ಮಕ್ಕಳಿಗೆ ಪೋಲಿಯೋ ಹನಿ ಹಾಕಲಾಗಿದೆ.ನಗರ ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಮನೆ–ಮನೆ ಭೇಟಿ ಚಟುವಟಿಕೆಯು ನಡೆಯುತ್ತಿದ್ದು, ಡಿಸೆಂಬರ್ 24 ರಂದು ಈ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಜಿಲ್ಲಾ ಆರ್.ಸಿ.ಹೆಚ್.ಅಧಿಕಾರಿ ಡಾ.ಹೆಚ್.ಕೆ.ಮಂಜುನಾಥ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂತರ ಕಾಲೇಜು ಮಹಿಳಾ ಕಬಡ್ಡಿ ಪಂದ್ಯಾವಳಿ ಸಂಪನ್ನ



**ರಾಮನಗರ:** ಇಲ್ಲಿನ ಸರ್ಕಾರಿ ಕಾನೂನು ಕಾಲೇಜು ಹಾಗೂ ಹುಬ್ಬಳ್ಳಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಅಂತರ ಕಾಲೇಜು ಮಹಿಳಾ ಕಬಡ್ಡಿ ಪಂದ್ಯಾವಳಿಯನ್ನು ರಾಯರದೊಡ್ಡಿಯ ಆರ್.ವಿ.ಸಿ.ಎಸ್. ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿತ್ತು.

ರಾಮನಗರ ನಗರಸಭೆಯ ಅಧ್ಯಕ್ಷರಾದ ಶೇಷಾದ್ರಿ (ಶಶಿ) ಹಾಗೂ ಕಲ್ಯಾಣ ಮಂಟಪದ ಮಾಲೀಕರಾದ ಆರ್.ವಿ. ಸುರೇಶ್ ಅವರು ವಿಜೇತರಿಗೆ ಪ್ರಶಸ್ತಿ ಪ್ರದಾನ ಮಾಡಿದರು. ರಾಮನಗರ ನಗರಸಭೆ ಪೌರಾಯುಕ್ತ ಡಾ. ಜಯಣ್ಣ ಕಾರ್ಯಕ್ರಮ ಉದ್ಘಾಟಿಸಿದರು. ಸರ್ಕಾರಿ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಡಾ. ನಾಗಶೇಷಮ್ಮ ಅಧ್ಯಕ್ಷತೆ ವಹಿಸಿದರು.

ಕರ್ನಾಟಕದಾದ್ಯಂತ 17 ಕಾನೂನು ಕಾಲೇಜುಗಳಿಂದ ಕ್ರೀಡಾ ತಂಡಗಳು ಭಾಗವಹಿಸಿದ್ದವು, 04 ತಂಡಗಳು ಸೆಮಿಫೈನಲ್ ತಲುಪಿದವು. ರಾಮನಗರದ ಸರ್ಕಾರಿ ಕಾನೂನು ಕಾಲೇಜಿನ ತಂಡ ಮತ್ತು ಶಿವಮೊಗ್ಗದ ಸಿ.ಬಿ.ಆರ್. ಕಾನೂನು ಕಾಲೇಜಿನ ತಂಡದೊಂದಿಗೆ ಅಂತಿಮ ಪಂದ್ಯ ನಡೆದು ಅತಿಥೇಯ ತಂಡವಾದ ರಾಮನಗರದ ಸರ್ಕಾರಿ ಕಾನೂನು ಕಾಲೇಜು ತಂಡ ಪ್ರಥಮ ಸ್ಥಾನ ಗಳಿಸಿ ವಿಜೇತರಾದರು. ಪುತ್ತೂರಿನ ವಿವೇಕಾನಂದ ಕಾನೂನು ಕಾಲೇಜಿನ ತಂಡಕ್ಕೆ ಮೂರನೇ ಸ್ಥಾನ ಹಾಗೂ ನಾಲ್ಕನೇ ಸ್ಥಾನವನ್ನು ಕೋಲಾರದ ಸರ್ಕಾರಿ ಕಾನೂನು ಕಾಲೇಜುನವರು ಪಡೆದುಕೊಂಡರು.

ರಾಷ್ಟ್ರೀಯ ಕಬಡ್ಡಿ ಕ್ರೀಡಾಪಟು ಸಿಂಧುಶ್ರೀ, ಹುಬ್ಬಳ್ಳಿಯ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ದೈಹಿಕ ಶಿಕ್ಷಣ ನಿರ್ದೇಶಕ ಡಾ.ಖಾಲಿದ್ ಖಾನ್, ರಾಮನಗರದ ಸರ್ಕಾರಿ ಕಾನೂನು ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕ ಭಾಸ್ಕರ್.ಪಿ., ಬೋಧಕೇತರ ವರ್ಗದವರು, ವಿದ್ಯಾರ್ಥಿ ವೃಂದ ಹಾಗೂ ಹಿರಿಯ ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಉದ್ಯಮ ಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮ

**ಚಿಕ್ಕಬಳ್ಳಾಪುರ:** ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಬೆಂಗಳೂರು, ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರ ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಲಸು ಬಯಸುವ ಅಭ್ಯರ್ಥಿಗಳಿಗೆ ಹತ್ತು ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.

ಈ ಕಾರ್ಯಕ್ರಮದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಬಯಸುವ ಅಭ್ಯರ್ಥಿಗಳಿಗೆ ಉದ್ಯಮಶೀಲತಾ ಪ್ರೇರಣೆ, ಸ್ವಂತ ಉದ್ಯಮ ಸ್ಥಾಪನೆಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು, ಪ್ರೋತ್ಸಾಹ, ಉದ್ಯಮದಾರರಿಗೆ ದೊರೆಯುವ ಸೌಲಭ್ಯಗಳು, ಮಾರುಕಟ್ಟೆ ಮುಂತಾದ ವಿಷಯಗಳ ಹಾಗೂ ಇತರೆ ಕೈಗಾರಿಕಾ ವಿಷಯಗಳ ಕುರಿತು ತರಬೇತಿ ನೀಡಲಾಗುವುದು. ಕನಿಷ್ಠ 21 ವರ್ಷ ವಯಸ್ಸಿನವರಾಗಿರಬೇಕು. 10ನೇ ತರಗತಿ ಉತ್ತೀರ್ಣರಾಗಿರಬೇಕು. ಆಸಕ್ತ ಅಭ್ಯರ್ಥಿಗಳು ಜನವರಿ 3 ರೊಳಗೆ ಅರ್ಜಿಯನ್ನು ಜಂಟಿ ನಿರ್ದೇಶಕರ ಕಚೇರಿ, ಸಿಡಾಕ್, ಜಿಲ್ಲಾ ಕೈಗಾರಿಕಾ ಕೇಂದ್ರ, ಚಿಕ್ಕಬಳ್ಳಾಪುರ ಇಲ್ಲಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರ ಕಚೇರಿ, ಸಿಡಾಕ್, ಜಿಲ್ಲಾ ಕೈಗಾರಿಕಾ ಕೇಂದ್ರ, ಬಿ.ಬಿ. ರಸ್ತೆ, ಚಿಕ್ಕಬಳ್ಳಾಪುರ. ದೂ.ಸಂ:7348974724, 7760145784 ಗೆ ಸಂಪರ್ಕಿಸಬಹುದು.

# ಡಾ.ಶಾಮನೂರು ಶಿವಶಂಕರಪ್ಪ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ

**ದಾವಣಗೆರೆ:** ಡಾ.ಶಾಮನೂರು ಶಿವಶಂಕರಪ್ಪ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಘಟಕದ ವತಿಯಿಂದ ನಗರದ ಡಾ.ಮೋದಿ ವೃತ್ತದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಭಾವಪೂರ್ಣ ಶ್ರದ್ಧಾಂಜಲಿ ನಮನ ಸಲ್ಲಿಸಲಾಯಿತು.ಈ ವೇಳೆ ಕರವೇ ಜಿಲ್ಲಾಧ್ಯಕ್ಷ ಎಂ.ಎಸ್.ರಾಮೇಗೌಡ ಮಾತನಾಡಿ, ಶಾಮನೂರು ಶಿವಶಂಕರಪ್ಪ ಮಧ್ಯಮ ವರ್ಗದ ಧ್ವನಿಯಾಗಿದ್ದರು. ದಾವಣಗೆರೆಯು ಶೈಕ್ಷಣಿಕವಾಗಿ ಜ್ಞಾನಕಾಶಿ ಎಂಬ ಬಿರುದು ಬರಲು ಶಿವಶಂಕರಪ್ಪ ಅವರೇ ಕಾರಣ. ಅಂತಹ ಮಹಾನ್ ವ್ಯಕ್ತಿಯನ್ನು ಕಳೆದುಕೊಂಡಿರುವುದು ದಾವಣಗೆರೆಗೆ ತುಂಬಲಾರದ ನಷ್ಟವಾಗಿದೆ ಎಂದರು.

ಹಲವು ವರ್ಷಗಳ ಬೇಡಿಕೆಯಾದ ಗುಂಡಿ ವೃತ್ತದ ಪಾದಾಚಾರಿ ವ್ಯಾಪಾರಿಗಳಿಗೆ ವ್ಯವಸ್ಥಿತವಾಗಿ ಪರ್ಯಾಯ ವ್ಯವಸ್ಥೆ ಕಲ್ಪಿಸುವಲ್ಲಿ ಶಾಮನೂರು ಶಿವಶಂಕರಪ್ಪ ಅವರ ಬಹುದೊಡ್ಡ ಪಾತ್ರವಿದೆ. ಎಷ್ಟೋ ಕಡುಬಡವ ವಿದ್ಯಾರ್ಥಿಗಳಿಗೆ ಮತ್ತು ಪತ್ರಕರ್ತರ ಮಕ್ಕಳಿಗೆ ಸ್ಕಾಲರ್‌ಶಿಪ್ ಕೊಡುವ ಮೂಲಕ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸುವಂತ ಕೆಲಸ ಶಾಮನೂರು ಮಾಡಿದ್ದಾರೆ. ದಾವಣಗೆರೆ, ರಾಜ್ಯ, ಹೊರ ರಾಜ್ಯದ ದೇವಸ್ಥಾನಗಳ ಅಭಿವೃದ್ಧಿಗೂ ಹಣ ನೀಡಿರುವುದು. ಹೀಗೆ ಯಾರೇ ಬಂದರೂ ಅವರ ಕಷ್ಟ ಆಲಿಸಿ ಅವರಿಗೂ ಪರಿಹಾರ ನೀಡುವಲ್ಲಿ ಹಿರಿಯ ಶಾಸಕರು ಯಾವಾಗಲೂ ಮುಂದೆ ಇದ್ದರು.

# ರೈತ ದಿನಾಚರಣೆ ಕಾರ್ಯಕ್ರಮ

**ಗದಗ:** ಐ.ಸಿ.ಎ.ಆರ್–ಕೆ.ಎಚ್.ಪಾಟೀಲ ಕೃಷಿ ವಿಜ್ಞಾನಕೇಂದ್ರ, ಹುಲಕೋಟಿ ವತಿಯಿಂದ ದಿನಾಂಕ 23–12–2025ರಂದು "ರೈತ ದಿನಾಚರಣೆ" ಕಾರ್ಯಕ್ರಮವನ್ನುಏರ್ಪಡಿಸಲಾಯಿತು. ಕಾರ್ಯಕ್ರಮದಉದ್ಘಾಟನೆಯನ್ನುಶಿವ ಕುಮಾರ ಎಸ್, ನಿರ್ದೇಶಕರು, ಎಸ್.ಬಿ.ಐ–ಎ. ಎಸ್.ಎಫ್ ಆರ್.ಸೆ.ಟಿ., ಹುಲಕೋಟಿಇವರು ನೆರವೇರಿಸಿ, ರೈತರಿಟೇಲ್‌ದರದಲ್ಲಿ ಕೃಷಿಗೆ ಬೇಕಾದ ಸಾಮಾಗ್ರಿಗಳನ್ನು ತಂದು ಹೋಲ್ ಸೇಲ್‌ದರದಲ್ಲಿ ಮಾರುವುದು ವಿಪರ್ಯಾಸ, ಹೀಗಾಗಿ ರೈತ ಬೆಳೆದ ಬೆಳೆಗಳಿಗೆ ರೈತನೇ ಬೆಲ 'ನಿಗದಿಪಡಿಸುವಂತಾಗಬೇಕುಎಂದರು.



ಕಾರ್ಯಕ್ರಮದ ಮುಖ್ಯಅಥಿತಿಗಳಾಗಿ ಎಸ್. ಕೆ. ಮುದ್ಲಾಪೂರ, ದೇಸಿ ಫೆಸಿಲಿಟೇಟರ್ ಹಾಗೂ ಕೆವಿಕೆ ವಿಶ್ರಾಂತ ವಿಜ್ಞಾನಿಗಳುಮಾತನಾಡಿಕೃಷಿ ನಡೆದುಬಂದದಾರಿ, ಕೃಷಿ ಕ್ಷೇತ್ರದಲ್ಲಿಆಗುತ್ತಿರುವ ಬದಲಾವಣೆ, ಆವಿಷ್ಕಾರಗಳು ಹಾಗು ರೈತರುಅನುಭವಿಸುತ್ತಿರುವ ತೊಂದರೆಗಳ ಕುರಿತು ಮಾತನಾಡಿ, ಉತ್ತಮ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಂಡು ಯಶಸ್ವಿ ರೈತರಾಗಬೇಕುಎಂದು ಸಲಹೆ ನೀಡಿದರು. ರೈತ ದಿನಾಚರಣೆಯ ಅಂಗವಾಗಿ ಕೃಷಿಯಲ್ಲಿ ಸಾಧನೆ ಮಾಡಿದಐದುಜನಪ್ರಗತಿಪರರೈತ ಹಾಗೂ ರೈತ ಮಹಿಳೆಯರಿಗೆ ಕೃಷಿ ವಿಜ್ಞಾನಕೇಂದ್ರದಿಂದ ಸನ್ಮಾನಿಸಲಾಯಿತು.

ಕೃಷಿ ಪಂಡಿತ ಪ್ರಶಸ್ತಿ ವಿಜೇತ ಪ್ರಗತಿಪರ ಕೃಷಿ ಮಹಿಳೆ ಶ್ರೀಮತಿ ಸುಧಾ ಬೇವಿನಮರದ ಇವರುಗದಗಜಿಲ್ಲೆಗೆಕೆ.

ಎಚ್.ಪಾಟೀಲ ಕೃಷಿ ವಿಜ್ಞಾನಕೇಂದ್ರಒಂದು ವರದಾನವಾಗಿದೆ. ಇದುರೈತರ ಏಳ್ಗೆಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳತ್ತಲಿದೆ. ಇದರಸದುಪಯೋಗ ಪಡೆದುಕೊಂಡ ಫಲವಾಗಿ ಕೃಷಿಯಲ್ಲಿ ಸಾಧನೆ ಮಾಡಲು ಸಾಧ್ಯವಾಯಿತು. ಹೀಗಾಗಿ ಇದರ ಸದುಪಯೋಗವನ್ನುರೈತರೆಲ್ಲರ ೂ ಪಡೆದುಕೊಂಡುಆರ್ಥಿಕ ಪ್ರಗತಿಯನ್ನು ಹೊಂದಬೇಕುಎಂದುಹೇಳಿದರು. ಇನ್ನೋರ್ವ ಸನ್ಮಾನಿತಕೋಟುಮಚಗಿಗ್ರಾಮದಸಾವಂ ಯವಕೃಷಿಕರಾದವಿದ್ಯಾಧರರಮಣಿಇವರು ಮಾತನಾಡಿರೈತರು ಸಾವಯವ ಕೃಷಿ ಅಳವಡಿಸಿಕೊಳ್ಳಲುಗದಗಜಿಲ್ಲೆಯಲ್ಲಿಕೆವಿಕೆಯ ವಿಜ್ಞಾನಿಗಳ ಪಾತ್ರ ಮಹತ್ವದ್ದಾಗಿದೆಎಂದು ಹೇಳಿ ಕೃಷಿಯನ್ನು ಲಾಭದಾಯಕವನ್ನಾಗಿ ಮಾಡಬೇಕೆಂದುಅಭಿಪ್ರಾಯ ಪಟ್ಟರು. ಕಾರ್ಯಕ್ರಮದಅಧ್ಯಕ್ಷತೆ ವಹಿಸಿದ್ದ ಕೆ.ವಿ.ಕೆ ಹುಲಕೋಟಿಯ ಮುಖ್ಯಸ್ಥೆಡಾ. ಸುಧಾ ವ ೦ಕಣಿಮಾತನಾಡಿರಾಸಾಯನಿಕಗೊಬ್ಬರದ ಬಳಕೆ ಕಡಿಮೆ ಮಾಡಿ, ಸಾವಯವ ಹಾಗೂ ನೈಸರ್ಗಿಕಕೃಷಿಯನ್ನು ಅಳವಡಿಸಿಕೊಂಡು, ಹಾಳಾಗುತ್ತಿರುವ ಮಣ್ಣಿನಗುಣಮಟ್ಟವನ್ನು ಹೆಚ್ಚಿಸಬೇಕು. ಉತ್ತಮಆಹಾರ ಸೇವನೆಯಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ಕೃಷಿ ಮತ್ತುರೈತಕಲ್ಯಾಣಖಾತೆಕೇಂದ್ರ ಸಚಿವರಾದ ಮಾನ್ಯಶ್ರೀ ಶಿವರಾಜ ಸಿಂಗ ಚವ್ಹಾಣಇವರುರೈತ ದಿನಾಚರಣೆ ಹಾಗೂ ವಿಕಸಿತ ಭಾರತ ಜಿ ರಾಮ್ ಜಿ ಯೋಜನೆಯ ಬಗ್ಗೆ ಮಾತನಾಡಿದ್ದನ್ನು ನೇರ ಪ್ರಸಾರದ ಮೂಲಕ ರೈತರಿಗೆತೋರಿಸಲಾಯಿತು.ಜೊತೆಗೆರೈತರಿಗೆ ವಿಕಸಿತ ಭಾರತ ಉದ್ಯೋಗಮತ್ತುಜೀವನೋಪಾಯಗ್ಯಾರಂಟಿಮಿಷನ್ (ಗ್ರಾಮೀಣ) ಕಾಯ್ದೆ, 2025 ಇದರಬಗ್ಗೆಸಿದ್ಧಪಡಿಸಿದಹಸ್ತಪ್ರತಿಯನ್ನು ವಿತರಿಸಲಾಯಿತು.

# ನಗರಸಭೆಯಿಂದ ಸಾರ್ವಜನಿಕ ಸಮಾಲೋಚನಾ ಸಭೆ

**ಚಿಕ್ಕಮಗಳೂರು:** ನಗರಸಭೆಯ 2026–27ನೇ ಸಾಲಿನ ಆಯವ್ಯಯ ತಯಾರಿಸುವ ಸಂಬಂಧ ಮೊದಲನೇ ಸುತ್ತಿನ ಸಾರ್ವಜನಿಕ ಸಮಾಲೋಚನಾ ಸಭೆಯು ಡಿಸೆಂಬರ್ 30 ರಂದು ಬೆಳಿಗ್ಗೆ 11 ಗಂಟೆಗೆ ನಗರಸಭಾ ಸಭಾಂಗಣದಲ್ಲಿ ಅಧ್ಯಕ್ಷರಾದ ಶೀಲಾ ದಿನೇಶ್ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ.

ನಗರಸಭೆಯ ಆಯ–ವ್ಯಯದ ರೂಪುರೇಷೆಯನ್ನು ಪ್ರಸ್ತಾಪಿತ ವೆಚ್ಚಗಳು ಹಾಗೂ ಅದರೊಂದಿಗೆ ಕ್ರಿಯಾ ಯೋಜನೆಗಳು, ಹೊಸದಾಗಿ ಕೈಗೆತ್ತಿಕೊಳ್ಳಬೇಕಾದ ಕಾಮಗಾರಿಗಳ ಬಗ್ಗೆ ಸಾರ್ವಜನಿಕರಿಂದ ಮತ್ತು ನೋಂದಾಯಿತ ವಸತಿ ಕ್ಷೇಮಾಭಿವೃದ್ಧಿ ಸಂಘಗಳು, ನೋಂದಾಯಿತ ಸರ್ಕಾರೇತರ ಸಂಘ ಸಂಸ್ಥೆಗಳು, ವಾಣಿಜ್ಯ ಮತ್ತು ಕೈಗಾರಿಕಾ ಸಂಘಗಳು ಇತರೆ ಸಂಘ ಸಂಸ್ಥೆಗಳ ಪ್ರತಿನಿಧಿಗಳು ರಾಜಕೀಯ ಮುಖಂಡರುಗಳು, ಹಿರಿಯ ನಾಗರಿಕರು, ಮಾಧ್ಯಮದವರು ಮತ್ತು ಸಾರ್ವಜನಿಕರ ಅಭಿಪ್ರಾಯಗಳನ್ನು ಆಧರಿಸಿ ಸಂಗ್ರಹಿಸಲು ಈ ಸಭೆ ನಡೆಸಲಾಗುತ್ತಿದೆ. ಸಭೆಗೆ ಸರ್ವರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ತಮ್ಮ ಅಮೂಲ್ಯವಾದ ಸಲಹೆಗಳನ್ನು ನೀಡಿ. ಸಭೆಯನ್ನು ಯಶಸ್ವಿಗೊಳಿಸುವಂತೆ ಪೌರಾಯುಕ್ತರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಪಿಹೆಚ್ ಡಿ ವ್ಯಾಸಂಗ ವೇತನಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಹೆಚ್.ಡಿ ಅಧ್ಯಾಯನ ಮಾಡುತ್ತಿರುವ ಹೊಸ ವಿದ್ಯಾರ್ಥಿಗಳಿಗೆ ವ್ಯಾಸಂಗ ವೇತನ ಮಂಜೂರು ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಹಿಂದುಳಿದ ವರ್ಗಗಳ ಪ್ರವರ್ಗ–ಖ, 2(ಎ), 3(ಎ) ಹಾಗೂ 3(ಬಿ) ಗೆ ಸೇರಿದ ವಿದ್ಯಾರ್ಥಿಗಳು ಮಾಸಿಕ ರೂ. 10,000/– ವ್ಯಾಸಂಗ ವೇತನ, ಪಡೆಯಬಹುದು. ಅರ್ಜಿಯನ್ನು ಜನವರಿ 9, 2026 ರೊಳಗಾಗಿ ಸಲ್ಲಿಸಬಹುದು. ಹೆಚ್ಚಿನ ವಿವರಗಳು ಇಲಾಖಾ ವೆಬ್‌ಸೈಟ್ https://www.bcwd.karnataka.gov.in ನಲ್ಲಿ ವೀಕ್ಷಿಸಬಹುದೆಂದು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

# ಸಿರುಗುಪ್ಪ ನಗರಸಭೆ: ಬೀದಿನಾಯಿ ದತ್ತು ಪಡೆದು ಪೋಷಿಸಲು ಆಸಕ್ತರಿದ್ದಲ್ಲಿ ಸಂಪರ್ಕಿಸಿ

**ಬಳ್ಳಾರಿ:** ಸಿರುಗುಪ್ಪ ನಗರಸಭೆ ವ್ಯಾಪ್ತಿಯಲ್ಲಿನ ಬೀದಿನಾಯಿಗಳನ್ನು ದತ್ತು ಪಡೆದು ಪೋಷಣೆ ಮಾಡಲು ಇಚ್ಛಿಸುವವರು ಹಾಗೂ ಆಶ್ರಣ ತಾಣದಲ್ಲಿರುವ ಬೀದಿನಾಯಿಗಳಿಗೆ ಆಹಾರ ಪೂರೈಸಲು ಇಚ್ಛಿಸುವ ಪ್ರಾಣಿಗಳ ಸಂರಕ್ಷಣೆ ಸಂಕಲ್ಪ ಹೊಂದಿರುವವರು, ಪ್ರಾಣಿಗಳ ಮೇಲೆ ದಯೆ ಇರುವವರು ಕೂಡಲೇ ಸಿರುಗುಪ್ಪ ನಗರಸಭೆ ಕಾರ್ಯಾಲಯಕ್ಕೆ ಸಂಪರ್ಕಿಸಬಹುದಾಗಿದೆ.

ಬೀದಿನಾಯಿಗಳಿಂದ ಸಾರ್ವಜನಿಕರಿಗೆ ಹಾಗೂ ಸಂಚರಿಸುವ ವಾಹನ ಸವಾರರಿಗೆ ಆಗುವ ತೊಂದರೆ ನಿಯಂತ್ರಿಸಲು ನಗರಸಭೆ ವತಿಯಿಂದ ಹಿಡಿದು ಅವುಗಳನ್ನು ಆಶ್ರಯತಾಣಕ್ಕೆ ಸಾಗಿಸಲಾಗುತ್ತಿದೆ. ಹಾಗಾಗಿ ಆಶ್ರಣ ತಾಣದಲ್ಲಿರುವ ಬೀದಿನಾಯಿಗಳಿಗೆ ಆಹಾರ ಪೂರೈಸಲು ಇಚ್ಛಿಸುವವರು ಇದ್ದಲ್ಲಿ ಎನ್.ಜಿ.ಓ ಸಂಘ ಸಂಸ್ಥೆಗಳು, ಪ್ರಾಣಿದಯಾ ಸಂಘಗಳು ಹಾಗೂ ಇತರೆ ಪ್ರಾಣಿ ಪ್ರಿಯರು ಸಿರುಗುಪ್ಪ ನಗರಸಭೆ ಕಾರ್ಯಾಲಯಕ್ಕೆ ಸಂಪರ್ಕಿಸಬಹುದು ಎಂದು ಸಿರುಗುಪ್ಪ ನಗರಭೆಯ ಪೌರಾಯುಕ್ತ ಗಂಗಾಧರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರಕಾರಿ ಗೋಮಾಳವನ್ನಾಗಿ ಯಥಾಸ್ಥಿತಿ ಮುಂದುವರೆಸುವಂತೆ ಮನವಿ

**ಹೊನ್ನಾಳಿ :** ತಾಲೂಕಿನ ಸುಂಕದಕಟ್ಟೆ ಗ್ರಾಮ ವ್ಯಾಪ್ತಿಯಲ್ಲಿ ಬರುವ ಬೇಚಾರ ಗ್ರಾಮ ಮಲ್ಲದೇವರಕಟ್ಟೆಯ ಸ.ನಂ 4 ಮತ್ತು 7 ರಲ್ಲಿ ಗ್ರಾಮದ ದನಕರುಗಳಿಗೆ ಕಾಯ್ದಿರಿಸಿದ 29.37 ಎಕರೆ ವಿಸ್ತೀರ್ಣದ ಗೋಮಾಳವನ್ನು ಹೊನ್ನಾಳಿಯ ನಿವೇಶನ ರಹಿತರಿಗೆ ಮಂಜೂರು ಮಾಡಿರುವುದನ್ನು ರದ್ದುಪಡಿಸಿ ಸರಕಾರಿ ಗೋಮಾಳವನ್ನಾಗಿ ಯಥಾಸ್ಥಿತಿಯಲ್ಲಿ ಮುಂದುವರೆಸುವಂತೆ ರಾಜ್ಯ ರೈತಸಂಘ ಮತ್ತು ಹಸಿರುಸೇನೆಯ ಅಧ್ಯಕ್ಷ ಕರಿಬಸಪ್ಪ ಗೌಡ ಹೇಳಿದರು.

ಉಪವಿಭಾಗಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿದ ಸಂದರ್ಭದಲ್ಲಿ ಶಾಸಕ ಡಿ.ಜಿ. ಶಾಂತನಗೌಡರಿಗೆ, ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಚ್.ಬಿ. ಮಂಜಪ್ಪ ಹಾಗೂ ಉಪವಿಭಾಗಾಧಿಕಾರಿಗಳಿಗೆ ಮನವಿ ಸಲ್ಲಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಕಳೆದ ಐದು ವರ್ಷಗಳ ಹಿಂದೆ ವ್ಯಾಪಿಸಿದ್ದ ಕೊರೋನಾ ಸಂದರ್ಭದಲ್ಲಿ ಗ್ರಾಮಸ್ಥರಿಗೆ ಆಸರೆಯಾಗಿದ್ದ ಗೋಮಾಳದ ಜಮೀನನ್ನು ಹೊನ್ನಾಳಿಯ ನಿವೇಶನ ರಹಿತರಿಗೆ ಮಂಜೂರು ಮಾಡಿರುವುದು ಅತ್ಯಂತ ಖಂಡನೀಯ ಎಂದರು.

ಸರಕಾರಿ ಜಮೀನನ್ನು ಯಾವುದೇ ಕಾರಣಕೂ ಬೇರೆ ಉದ್ದೇಶಗಳಿಗೆ ಬಳಕೆ ಮಾಡಬಾರದು ಎಂಬ ಸರಕಾರದ ಆದೇಶ ಮತ್ತು ಸರ್ವೋಚ್ಚ ನ್ಯಾಯಾಲಯದ ಆದೇಶವನ್ನು ಉಲ್ಲಂಘನೆ ಮಾಡಿ ಗೋಮಾಳದ ಜಮೀನನ್ನು ನಿವೇಶನರಹಿತರಿಗೆ ಮಂಜೂರು ಮಾಡಿರುವ ಅಧಿಕಾರಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸುವಂತೆ ಮನವಿ ಮಾಡಿದರು.

ಸರಕಾರ ಇಲ್ಲಿಯವರೆಗೂ ಕೋಟ್ಯಾಂತರ ರೂಪಾಯಿಗಳನ್ನು ವೆಚ್ಚ ಮಾಡಿ ಈ ಗೋಮಾಳದಲ್ಲಿ ನಿರ್ಮಿಸಿದ ಕೆರೆಗಳು, ಮತ್ತು ಬೆಳೆಸಿರುವ ಸಾವಿರಾರು ಗಿಡಮರಗಳ ಜೊತೆ ಬೆಲೆ ಬಾಳುವ ಶ್ರೀಗಂಧದ ಮರಗಳಿದ್ದು, ಇದು ಅಭಯಾರಣ್ಯವಾಗಿರುತ್ತದೆ. ಇದರಿಂದ ಸ್ಥಳೀಯ ರೈತರಿಗೆ ದನಕುರುಗಳಿಗೆ, ವನ್ಯಜೀವಿಗಳಿಗೆ ಮತ್ತು ಬಡಕುಟುಂಬಗಳ ಜೀವನಕ್ಕೆ ಹೆಚ್ಚಿನ ಅನುಕೂಲವಾಗಿದೆ ಎಂದರು.

ಗ್ರಾಮದ ರೈತಮುಖಂಡ ಕರಿಬಸಪ್ಪ ಮಾತನಾಡಿ, ಇಲ್ಲಿ ಬೆಳೆದಿರುವ ಗಿಡಮರಗಳನ್ನು ಕಡಿದು ನಿವೇಶನ ಮಾಡಲು ಅನುಮತಿ ಕೊಡುವ ಅಧಿಕಾರಿಗಳ ವಿರುದ್ಧ ಮತ್ತು ಮರಗಳನ್ನು ಕಡಿಯುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

ಎಚ್.ಕೆ. ನರಸಿಂಹಮೂರ್ತಿ ಮಾತನಾಡಿ, ಸಾರ್ವಜನಿಕರು ಕೃಷಿ ಚಟುವಟಿಕೆಗಳಿಗೆ ಒಂದು ಗಿಡಮರ ಕಡಿದರೆ ಕೇಸ್ ಹಾಕಿ ಜೈಲಿಗೆ ಕಳಿಸುತ್ತಾರೆ ಆದರೆ ಇಲ್ಲಿ ಸರಕಾರಿ ಅಧಿಕಾರಿಗಳೇ ಕಾನೂನು ಉಲ್ಲಂಘನೆ ಮಾಡಿ, ಅನುಮತಿ ಕೊಡುವುದಕ್ಕೆ ಮುಂದಾಗಿರುವುದು ಅಕ್ಷಮ್ಯ ಅಪರಾಧ ಎಂದರು.

ಆದ್ದರಿಂದ ಉಪವಿಭಾಗಾಧಿಕಾರಿಗಳು, ಶಾಸಕ ಡಿ.ಜಿ. ಶಾಂತನಗೌಡ ಅವರು, ಗ್ರಾಮಸ್ಥರ ಅನುಕೂಲಕ್ಕಾಗಿ ಇರುವ ಈ ಗೋಮಾಳವನ್ನು ಯಥಾಸ್ಥಿತಿಯಲ್ಲಿ ಗ್ರಾಮದ ಜನತೆಗೆ ಬಿಡಬೇಕು ನಿವೇಶನ ಮಾಡುವ ಕುರಿತು ಯಾವುದೇ ಚಟುವಟಿಕೆಗಳನ್ನು ಹಮ್ಮಿಕೊಳ್ಳಬಾರದು ಶಾಸಕರು ಸರಕಾರದ ಹಂತದಲ್ಲಿ ನಿವೇಶನ ಮಂಜೂರಾತಿ ಆದೇಶವನ್ನು ರದ್ದುಪಡಿಸಿ ಗೋಮಾಳವನ್ನು ಯಥಾಸ್ಥಿತಿಡುವಂತೆ ಆದೇಶ ಮಾಡಿಸಬೇಕು ಎಂದು ಆಗ್ರಹಿಸಿದರು.ಈ ಸಂದರ್ಭದಲ್ಲಿ ಗ್ರಾ.ಪಂ. ಅಧ್ಯಕ್ಷ ಮಂಜುನಾಥ್, ಸದಸ್ಯರಾದ ಡಿ.ಬಿ. ಶ್ರೀನಾಥ್, ರೈತಸಂಘದ ಬಸಪ್ಪ ಮೇಸ್ತ್ರಿ, ಬೆಳಗುತ್ತಿಯ ಉಮೇಶ್, ಹನಗವಾಡಿಯ ರಮೇಶ್, ಎಸ್.ಕೆ. ಕರಿಯಪ್ಪ, ಅನಂತಯ್ಯ, ರಂಗನಾಥ್, ರುದ್ರಪ್ಪ, ನಿವೃತ್ತ ಉಪನ್ಯಾಸಕರಾದ ಹನುಮಂತಪ್ಪ, ಚನ್ನಬಸಪ್ಪ, ಸೇರಿದಂತೆ ನೂರಾರು ಜನ ಗ್ರಾಮಸ್ಥರು ಹಾಜರಿದ್ದರು.



ಹೊನ್ನಾಳಿ ತಾಲೂಕ್ ಸುಂಕದಕಟ್ಟೆಯ ಬೇಚಾರ ಗ್ರಾಮ ಮಲ್ಲದೇವರಕಟ್ಟೆಯ ಗೋಮಾಳವನ್ನು ಯಥಾಸ್ಥಿತಿಯಲ್ಲಿಯೇ ಉಳಿಸಬೇಕು ಎಂದು ಉಪವಿಭಾಗಾಧಿಕಾರಿಗಳಿಗೆ, ಶಾಸಕ ಡಿ.ಜಿ. ಶಾಂತನಗೌಡ ಅವರಿಗೆ ಮನವಿ ಸಲ್ಲಿಸಿದರು.


# ಬೀದಿನಾಯಿಗಳನ್ನು ಪೋಷಿಸಲು ಆಸಕ್ತರಿಂದ ಅರ್ಜಿ ಆಹ್ವಾನ

**ದಾವಣಗೆರೆ :** ಜಗಳೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿನ ಬೀದಿ ನಾಯಿಗಳ ಪಾಲನೆ ಮತ್ತು ಪ್ರಾಣಿ ಸಂರಕ್ಷಣಾ ಸೇವೆಗಳನ್ನು ಒದಗಿಸಲು ಸರ್ಕಾರೇತರ ಸಂಸ್ಥೆಗಳಿಂದ ಮತ್ತು ಬೀದಿ ನಾಯಿಗಳ ದತ್ತು ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಸಂಸ್ಥೆಗಳು, ಸರ್ಕಾರಿ ಕಚೇರಿ, ಶಿಕ್ಷಣ–ಸಂಸ್ಥೆ, ಆಸ್ಪತ್ರೆ ಕ್ರೀಡಾಂಗಣ, ಬಸ್ ನಿಲ್ದಾಣದಂತಹ ಸಾರ್ವಜನಿಕ ಸ್ಥಳಗಳಲ್ಲಿ ಇರುವ ಬೀದಿ ನಾಯಿಗಳನ್ನು ಆಶ್ರಯ ತಾಣಗಳಿಗೆ ಸ್ಥಳಾಂತರಿಸಿ ಪೋಷಣೆ ಮಾಡಲು ಎಲ್ಲಾ ವಿವರಗಳೊಂದಿಗೆ ಮತ್ತು ಸಾರ್ವಜನಿಕರು ಕೂಡಾ ಬೀದಿ ನಾಯಿಗಳನ್ನು ದತ್ತು ತೆಗೆದುಕೊಂಡು ಪೋಷಣೆ ಮಾಡಬಹುದು. ಹೆಚ್ಚಿನ ಮಾಹಿತಿಗಾಗಿ ಪಟ್ಟಣ ಪಂಚಾಯಿತಿಯ ಆರೋಗ್ಯ ಶಾಖೆ ಸಂಪರ್ಕಿಸಬಹುದೆಂದು ಮುಖ್ಯಾಧಿಕಾರಿ ತಿಳಿಸಿದ್ದಾರೆ.

# ಉತ್ತಮ ಆಡಳಿತ ಸೇವೆಯಿಂದ ಸಮಸ್ಯೆಗಳ ಪರಿಹಾರ: ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ

**ಚಿಕ್ಕಬಳ್ಳಾಪುರ :** ಉತ್ತಮ ಆಡಳಿತ ನೀಡುವುದು ಪ್ರಜಾಪ್ರಭುತ್ವ ವ್ಯವಸ್ಥೆಯ ಪ್ರಮುಖ ಧ್ಯೇಯ. ದಕ್ಷ ಆಡಳಿತದಿಂದ ಸರ್ವತೋಮುಖ ಪ್ರಗತಿ ಸಾಧ್ಯ ಎಂದು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಅವರು ತಿಳಿಸಿದರು.



ಮಂಗಳವಾರ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್‌ನ ಸರ್ ಎಂ.ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ನಡೆದ ಸುಶಾಸನ ಸಪ್ತಾಹ –ಪ್ರಶಾಸನ ಗ್ರಾಮಗಳ ಕಡೆಗೆ 2025ರ ಉತ್ತಮ ಆಡಳಿತ ವಾರ ಕಾರ್ಯಕ್ರಮದ ಜಿಲ್ಲಾ ಮಟ್ಟದ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.


ಉತ್ತಮ ಆಡಳಿತದಿಂದ ಸಮಾಜದ ಅನೇಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಾಧ್ಯ. ಸಾಮಾಜಿಕ ಹಕ್ಕುಗಳೆಂದರೆ ಕೇವಲ ವಸತಿ, ಆಹಾರ ಮತ್ತು ಶಿಕ್ಷಣ ನೀಡುವುದಷ್ಟೆ ಅಲ್ಲ, ವೈಯಕ್ತಿಕ ಭದ್ರತೆ ನೀಡಿ, ಹಕ್ಕುಗಳನ್ನು ರಕ್ಷಿಸುವ ಉದ್ದೇಶ ಹೊಂದಿದೆ.ತಳಮಟ್ಟದಿಂದ ಆಡಳಿತವನ್ನು ಬಲಪಡಿಸುವ ಮತ್ತು ಸಾಮಾನ್ಯ ಜನರಿಗೆ ಸರ್ಕಾರಿ ಸೇವೆಗಳನ್ನು ಪರಿಣಾಮಕಾರಿಯಾಗಿ ತಲುಪಿಸುವುದು 'ಸುಶಾಸನ ಸಪ್ತಾಹ ಅಭಿಯಾನ'ದ ಮುಖ್ಯ ಗುರಿಯಾಗಿದೆ.

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನದ ಅಂಗವಾಗಿ "ಸುಶಾಸನ ಸಪ್ತಾಹ ಪ್ರಶಾಸನ ಗ್ರಾಮಗಳ ಕಡೆಗೆ" ಎಂಬ ಸಪ್ತಾಹವನ್ನು ಆಚರಣೆ ಮಾಡಲಾಗುತ್ತಿದೆ. ಉತ್ತಮ ಆಡಳಿತ ನೀಡುವ ನಿಟ್ಟಿನಲ್ಲಿ ಈ ಸಪ್ತಾಹದ ಕುರಿತು ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಅರಿವು ಮೂಡಿಸಲು ಏರ್ಪಡಿಸಿರುವ ಕಾರ್ಯಾಗಾರವು ಆಡಳಿತವನ್ನು ಪರಿಣಾಮಕಾರಿಯಾಗಿ ತಲುಪಿಸಲು ತುಂಬಾ ಸಹಕಾರಿಯಾಗಿದೆ. ಕಳೆದ 19ನೇ ತಾರೀಖಿನಿಂದ ಜಿಲ್ಲಾಡಳಿತ ಕೈಗೊಂಡಿರುವ ಸಪ್ತಾಹವು ಜನರಿಗೆ ಅನುಕೂಲವಾಗಿದೆ. ಕಂದಾಯ ದಾಖಲೆಗಳು ಸೇರಿದಂತೆ ಇತರ ದಾಖಲೆಗಳನ್ನು ಜನರಿಗೆ ಸಕಾಲದಲ್ಲಿ ತಲುಪಿಸುವ ವ್ಯವಸ್ಥೆಯ ಉತ್ತಮ ಆಡಳಿತಕ್ಕಾಗಿ ರಾಜ್ಯದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆ 4ನೇ ಸ್ಥಾನವನ್ನು ಗಳಿಸಿದೆ. ರೈತರಿಗೆ 2000 ಪಹಣಿಗಳನ್ನು ವಿತರಿಸಲಾಗಿದೆ. ದಾಖಲೆಗಳನ್ನು ಜನರಿಗೆ ನೀಡಿದ್ದಕ್ಕಾಗಿಯೇ 2 ಕೋಟಿ ಹಣ ಸರ್ಕಾರದ ಬೊಕ್ಕಸಕ್ಕೆ ಸೇರಿದೆ. ಇ–ಪೌತಿ ಖಾತೆ ಮೂಲಕ 15000 ಖಾತೆಗಳನ್ನು ಮಾಡಿಕೊಡಲಾಗಿದೆ. 2025–26ನೇ ಸಾಲಿನಲ್ಲಿ ಅಕ್ಟೋಬರ್ ಅಂತ್ಯಕ್ಕೆ ಸಮಗ್ರ ಅಭಿವೃದ್ಧಿ ಕಾರ್ಯಕ್ರಮಗಳ (ಏಆಕ) ಅನುಷ್ಠಾನದಲ್ಲಿ ಚಿಕ್ಕಬಳ್ಳಾಪುರ ಪಶು ಪಾಲನಾ ಮತ್ತು ವೈದ್ಯಕೀಯ ಸೇವಾ ಇಲಾಖೆಯು ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸಿದೆ. ಕರ ವಸೂಲಿಯಲ್ಲಿ ಕಳೆದ 4 ತಿಂಗಳನಿಂದ ನಮ್ಮ ಜಿಲ್ಲೆಯ ಗ್ರಾಮ ಪಂಚಾಯ್ತಿಗಳು ಪ್ರಥಮ ಸ್ಥಾನವನ್ನು ಕಾಯ್ದುಕೊಂಡಿವೆ. ಉಳಿದ ತಾಲ್ಲೂಕುಗಳಲ್ಲೂ ಮುಂದಿನ ಕೆಲವು ತಿಂಗಳುಗಳಲ್ಲಿ ಪೂರ್ಣಗೊಳಿಸಲಾಗುವುದು. ಜನರು ಆನ್ ಲೈನ್ ನಲ್ಲೇ ದೃಢೀಕೃತ ಕಂದಾಯ ದಾಖಲೆಗಳನ್ನು ತೆಗೆದುಕೊಳ್ಳುವ ರೀತಿ ಎಲ್ಲ ಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ. ಈ ಎಲ್ಲಾ ಸೇವೆಗಳನ್ನು ಇನ್ನಷ್ಟು ಉತ್ತಮಗೊಳಿಸಿ ಸುಶಾಸನ ಸಪ್ತಾಹವನ್ನು ಆಚರಿಸುತ್ತಿದ್ದೇವೆ ಎಂದು ತಿಳಿಸಿದರು.


ಸಕಾಲ ಸಂಯೋಜಕ ವಸಂತ್ ಅವರು ಸಕಾಲ ಯೋಜನೆ ಅನುಷ್ಠಾನ ಕುರಿತು ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್, ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ಮುನಿರಾಜು ಅವರು ತಮ್ಮ ಇಲಾಖೆಗಳಲ್ಲಿ ಕೈಗೊಂಡಿರುವ ಜನಸ್ನೇಹಿ ಪ್ರಗತಿ ಕಾರ್ಯಗಳನ್ನು ಕಕಖಿ ಮೂಲಕ ತಿಳಿಸಿದರು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎನ್ ಭಾಸ್ಕರ್, ಜಿಲ್ಲಾಪಂಚಾಯತ್ ನ ಮುಖ್ಯ ಲೆಕ್ಕಧಿಕಾರಿ ರಘು, ಜಿಲ್ಲಾಪಂಚಾಯತ್ ಸಹಾಯಕ ಕಾರ್ಯದರ್ಶಿ ಮುನಿರಾಜು ಹಾಗೂ ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಸಿಬಂದಿ ವರ್ಗದವರು ಉಪಸ್ಥಿತರಿದ್ದರು.



# ಸುಂದರ ಕಲಾ ಮ್ಯೂಸಿಯಂ ಸತ್ಯದ ಅಭಯಾರಣ್ಯ



ಥಾಯ್ಲೆಂಡ್, ಪಟ್ಟಾಯ ಪ್ರವಾಸ ಮುಗಿಸಿ ಭಾರತಕ್ಕೆ ಹಿಂದಿರುಗುವ ದಿನವದು. ನಮ್ಮ ವಿಮಾನ ಬ್ಯಾಂಕಾಕ್ನಿಂದ ಮಧ್ಯಾಹ್ನ ಹೊರಡುವುದಿತ್ತು. ಅರ್ಧ ದಿನ ಹೇಗೆ ಕಳೆಯಬೇಕು ಎಂದುಯೋಚಿಸುತ್ತಿದ್ದಾಗ ಹತ್ತಿರದಲ್ಲೇ ವಿಶಿಷ್ಟವಾದ 'ದಿ ಸ್ಯಾಂಕ್ಚುರಿ ಆಫ್ ಟ್ರೂಥ್'ಮ್ಯೂಜಿಯಂ ಇರುವುದು ಗೊತ್ತಾಯಿತು. ಅದು ನಾವು ತಂಗಿದ್ದ ಹೋಟೆಲ್ನಿಂದ ತುಂಬಾ ಸನಿಹದಲ್ಲೇ ಇತ್ತು. ಅಲ್ಲಿಗೆಹೋಗಲು ನಿರ್ಧರಿಸಿದೆವು.
ಸರ್ವಧರ್ಮಗಳ ಸಂದೇಶಗಳನ್ನು ಸಾರುವ ಜಗತ್ತಿನ ಅತೀ ಎತ್ತರವಾದ ಕಲಾ ದೇಗುಲ ಥಾಯ್ಲೆಂಡ್ನಲ್ಲಿ ನಿರ್ಮಾಣವಾಗುತ್ತಿದೆ. ಇದನ್ನು ಸಂಪೂರ್ಣವಾಗಿ ಮರದಿಂದ ನಿರ್ಮಿಸಲಾಗುತ್ತಿದೆ. 44 ವರ್ಷಗಳಿಂದ ಇದರ ಕೆತ್ತನೆಯ ಕೆಲಸ ನಡೆಯುತ್ತಿದ್ದು, ಇದೇ ವರ್ಷ ಪೂರ್ಣಗೊಳ್ಳಲಿದೆ ಎನ್ನಲಾಗುತ್ತಿದೆ. ಇದು ಚೀನಾದ ವ್ಯಾಪಾರಿ ಲೆಕ್ ವಿರಿಯಾಫನ್ ಅವರ ಕನಸು.
ಅದೋ ನೆಲ ನೀರು ನೀಲಾಗಸಗಳ ಸಂಗಮ. ಅಲ್ಲಿ ಎಚ್ಎಂಎಸ್ ಬೀಗಲ್ನಂಥ ಬೃಹತ್ ಹಡಗು ಲಂಗರು ಹಾಕಿ ನಿಂತಂತೆ ಭಾಸವಾಗುತಿತ್ತು. ಹಿಂದೆ ಕಡಲು ಹರಡಿಕೊಂಡಿದೆ. ಹತ್ತಿರಹೋಗಿ ನೋಡಿದರೆ ಅದು ಹಡಗಲ್ಲ, ರಾಜ ಮಹಾರಾಜರ ಅರಮನೆ ಮೀರಿಸುವಂಥ ವೈಭವದ ಕಟ್ಟಡ!. ಹೌದು ಸಂಪೂರ್ಣ ಮರದ ದಿಮ್ಮಿಗಳಿಂದ ಕೆತ್ತನೆಯ ಕುಸುರಿ ಕೆಲಸದಿಂದ ಅರಳುತ್ತಿರುವ ಶ್ರೇಷ್ಠ ಸುಂದರ ಕಲಾಮ್ಯೂಸಿಯಂ.
ಅಲ್ಲಿ ಮರದ ಮೆಟ್ಟಿಲುಗಳಿದ್ದವು. ಹೆಲ್ಮೆಟ್ ಧರಿಸಿ ಹೆಜ್ಜೆ ಇರಿಸಿದೆವು. ಹಕ್ಕಿಪಕ್ಷಿಗಳ ಕಲರವ, ಹಸುರಿನ ಉದ್ಯಾನ, ತಿಳಿನೀರ ಸರೋವರ ಮುದ ನೀಡುತ್ತಿದ್ದವು. ಸಮುದ್ರ ತೀರದಲ್ಲಿ ಅದ್ಭುತವಾದ ಕಲಾಮ್ಯೂಸಿಯಂ ಅತ್ಯಾಕರ್ಷ ಕವಾಗಿ ಕಾಣಿಸುತ್ತಿತ್ತು. ಅಲ್ಲಿ ಪರಿಣತ ಕಲಾಕಾರರು ಉಳಿ, ಚಾಣ, ಬಾಚಿ ಹಿಡಿದು ಕೆತ್ತನೆಯಲ್ಲಿ ತೊಡಗಿದ್ದರು. ಥಾಯ್ಲೆಂಡ್, ಕಾಂಬೋಡಿಯಾಹಾಗೂ ಮಯನ್ಮಾರ್ ದೇಶಗಳ ಬಡಗಿಗಳು ದಶಕಗಳಿಂದ ಅಲ್ಲಿ ಕೆಲಸಮಾಡುತ್ತಿದ್ದರು. 'ದಿ ಸ್ಯಾಂ ಕ್ಚುರಿ ಆಫ್ ಟ್ರೂಥ್'ಗೆ ಮತ್ತೊಂದು ಹೆಸರು 'ಸತ್ಯದ ಅಭಯಾರಣ್ಯ'. ಮರದ ಕಲಾಮ್ಯೂಸಿಯಂ ಜಗತ್ತಿನಲ್ಲಿಯೇ ಅತಿ ಭವ್ಯ ಹಾಗೂ ಅಪರೂಪದ್ದು. ಬೌದ್ಧ, ಜೈನ, ಕ್ರೈಸ್ತ ಹಾಗೂ ಹಿಂದೂ ಧರ್ಮದ ನೂರಾರು ದೇವಾನು ದೇವತೆಗಳು ಅಲ್ಲಿ ಜೀವ ಪಡೆದಿದ್ದಾರೆ. ಇದು ದೇವಸ್ಥಾನ-ಕಳಸ-ಗೋಪುರಾಕೃತಿಗಳ ಸಮ್ಮಿಶ್ರಣ.
ಈ ಕಲಾಮ್ಯೂಸಿಯಂನಲ್ಲಿ ಹುಟ್ಟು, ಸಾವು, ಕುಟುಂಬ ಪ್ರೀತಿ, ದೈವ, ನಾಗರಿಕತೆ, ಸರಳ ಜೀವನ ಹಾಗೂ ಮೋಕ್ಷವೆಂಬ ಏಳು ಸತ್ಯಗಳು ಕೆತ್ತನೆಯ ರೂಪ ಪಡೆದು ಅನಾವರಣಗೊಂಡಿದೆ. ಧಾರ್ಮಿಕ, ಆಧ್ಯಾತ್ಮಿಕ ಹಾಗೂ ವಾಸ್ತವ ಕಲಾಕೃತಿಗಳನ್ನು ಸೂಕ್ಷ್ಮವಾಗಿ ಅಧ್ಯಯನಮಾಡಿದರೆ ಎಲ್ಲವೂ ಅರಿವಿಗೆ ಬರುತ್ತವೆ.
ದಿ



ಸ್ಯಾಂಕ್ಚುರಿ ಆಫ್ ಟ್ರೂಥ್ಹೊರಭಾಗದಲ್ಲಿರುವ ಕೆತ್ತನೆಗಳು

ಚೀನಾ ವ್ಯಾಪಾರಿಯ ಕನಸು ಜಗತ್ತಿನಲ್ಲಿಯೇ ಅತೀ ಎತ್ತರದ ಮರದ ಕಲಾಮ್ಯೂಸಿಯಂ ಇದು. 105 ಮೀಟರ್ ಎತ್ತರ, 100 ಮೀಟರ್ ಅಗಲ ಹಾಗೂ 2,115 ಚದರ ಮೀಟರ್ ವಿಸ್ತೀರ್ಣ (ಒಳಾಂಗಣ)ದ ಈ ಕಟ್ಟಡ ಚತುರ್ಭುಜ ವಿನ್ಯಾಸದಲ್ಲಿ ರೂಪುಗೊಂಡಿದೆ. ಅಚ್ಚರಿಗೊಳಿಸುವ ಈಮ್ಯೂಸಿಯಂಗೆ ರೋಚಕ ಕಥೆ ಇದೆ. ಲೇಕ್ ವಿರಿಯಾಫನ್ ಎಂಬ ಚೀನಾದ ವ್ಯಾಪಾರಿ ಬಹು ಹಿಂದೆಯೇ ಥಾಯ್ಲೆಂಡ್ಗೆ ಬಂದು ಉದ್ಯಮ ಆರಂಭಿಸಿ ದೊಡ್ಡ ಶ್ರೀಮಂತನಾದ. ಥಾಯ್ಲೆಂಡ್ ಸಮುದ್ರ ತೀರದುದ್ದಕ್ಕೂ ಅವನದೇ ಅಂಗಡಿ, ಮುಂಗಟ್ಟು,ಹೋಟೆಲ್ಗಳ ಸರಣಿ ಸ್ಥಾಪನೆಯಾದವು. ಸಮುದ್ರತೀರದಲ್ಲಿ ಸರ್ವಧರ್ಮಗಳ ಸಿದ್ಧಾಂತಗಳನ್ನು ಮರದ ಕೆತ್ತನೆಯ ಮೂಲಕ ಅನಾವರಣಗೊಳಿಸಬೇಕು ಎಂದು ಕನಸು ಕಂಡ. ಅದಕ್ಕಾಗಿ ಸುಮಾರು ಹದಿಮೂರು ಹೆಕ್ಟೇರ್ ಜಾಗವನ್ನು ಖರೀದಿಸಿ ಮೀಸಲಿರಿಸಿದ. 1981ರಲ್ಲಿ ಕೆತ್ತನೆ ಕೆಲಸ ಶುರುವಾಯಿತು. ಇದಕ್ಕಾಗಿ ವಿದೇಶಗಳಿಂದ ನೂರಾರು ನುರಿತ ಕುಸುರಿ ಕೆತ್ತನೆಯ ಬಡಗಿಗಳು ಬಂದಿಳಿದರು. ಕೆತ್ತನೆಗಾಗಿ ಸಾಗುವಾನಿ, ಮೊಹೋಗನಿ, ಮೈಡಿಂಗ್, ಮೈಪಂಚೆಟ್ನಂಥ ಮರದ ದಿಮ್ಮಿಗಳು ಸಂಗ್ರಹವಾದವು. ತುಂಬಾ ಹಳೆಯದಾದ ಮೈಟಾಕಿನ್ ಮರವನ್ನು ವಿಶೇಷ ಕೆತ್ತನೆಗೆ ತರಿಸಲಾಯಿತು.
ಮರದಮ್ಯೂಸಿಯಂ ಕೆಲಸ ಆರಂಭವಾಗಿ 44 ವರ್ಷಗಳು ಉರುಳಿವೆ. ಆದರೂ ಪೂರ್ಣವಾಗಿಲ್ಲ. 2025ರ ಅಂತ್ಯಕ್ಕೆ ಮ್ಯೂಸಿಯಂ ಪೂರ್ಣಗೊಳ್ಳಬಹುದು ಎನ್ನಲಾಗುತ್ತಿದೆ. ಮ್ಯೂಸಿಯಂನ ಹೃದಯ ಭಾಗದಿಂದ ಮೇಲಕ್ಕೆ ಒಂದು ಕಂಬದಂಥ ಗೋಪುರ ಚಾಚಿಕೊಂಡಿದೆ. ಅದರ ತುದಿಯಲ್ಲಿ ಬ್ರಹ್ಮನ ಚತುರ್ಮುಖ ಪ್ರತಿಮೆ ಕಾಣಿಸುತ್ತದೆ. ಈ ಚತುರ್ಮುಖ ತಂದೆ, ತಾಯಿ, ಗುರು ಹಾಗೂ ಆಳುವ ದೊರೆಯ ಸಂಕೇತ ರೂಪಗಳಾಗಿವೆ. ದಯೆ, ಸಮಚಿತ್ತ, ಪರೋ ಪಕಾರ, ಸಂತೃಪ್ತಿ ಇವು ಚತುರ್ಮುಖದ ಇತರ ಭಾವಗಳು. ಬ್ರಹ್ಮನಮೂರ್ತಿಯ ಸುತ್ತಲಿನ ಮೇಲ್ಛಾವಣಿಯ ನಾಲ್ಕೂ ದಿಕ್ಕುಗಳಲ್ಲಿ ನಾಲ್ಕು ವಿಶೇಷತೆಗಳಿವೆ. ಭವಿಷ್ಯದ ಬದುಕು ಆರೋಗ್ಯಪೂರ್ಣ ವಾಗಿರಲು ಭೂತಕಾಲದ ನೀತಿ, ನಿಯಮ, ಸಿದ್ಧಾಂ ತಗಳ ಪಾಲನೆ ಆಗಬೇಕು ಎನ್ನುವುದನ್ನು ಪೂರ್ವ ದಿಕ್ಕಿನ ಚಿತ್ರಗಳು ತೋರಿಸುತ್ತವೆ. ಪಶ್ಚಿಮದಲ್ಲಿ ಬಾಲಕಿಯೊಬ್ಬಳು ಪಾರಿವಾಳಗಳಿಗೆ ಕಾಳು ತಿನ್ನಿಸುವ ಚಿತ್ರವಿದೆ. ಜಗತ್ತಿನ ಹಸಿವು ತಣಿಸುವ ಹಾಗೂ ಭೂಮಿಯನ್ನು ಫಲವತ್ತುಗೊಳಿಸುವ ಸಂಕೇತವದು. ಕಮಲದ ಹೂವಿನ ಮೇಲೆ ಧ್ಯಾನಾಸಕ್ತರಾಗಿ ಕುಳಿತು ಆಧ್ಯಾತ್ಮಕ ಚಿಂತನೆ ಭೋದಿಸುವ ದೇವತೆಯ ಚಿತ್ರ ಉತ್ತರ ದಿಕ್ಕಿನಲ್ಲಿದ್ದರೆ, ದಕ್ಷಿಣದಲ್ಲಿ ತಂದೆ, ತಾಯಿ, ಮಕ್ಕಳ ಕುಟುಂಬದ ಚಿತ್ರಗಳಿವೆ. ಇವೆಲ್ಲಾ ಅರ್ಥ ಪೂರ್ಣ ಬದುಕಿಗೆ ಮುಖ್ಯ. ಮೇಲ್ಛಾವಣಿಯ ನಾಲ್ಕೂ ದಿಕ್ಕಿನ ಮಧ್ಯ ಕುದುರೆ ಸವಾರನೊಬ್ಬ ಕಡಿವಾಣ ಹಿಡಿದು ಎಲ್ಲವನ್ನೂ ನಿಯಂತ್ರಣ ಮಾಡುವ ಚಿತ್ರ ವಿಶೇಷ ಪರಿಕಲ್ಪನೆ. ದಿ ಸ್ಯಾಂಕ್ಚುರಿ ಆಫ್ ಟ್ರೂಥ್ನಹೊರನೋಟ ನೆಲಮಹಡಿಯ ಒಳಂಗಣ ವೈ ವಿಧ್ಯಮಯ ಕೆತ್ತನೆಗಳಿಂದ ಕೂಡಿದೆ. ಮರದ ಕುಸುರಿ ಕೆತ್ತನೆಗಳು ಒಂದನ್ನೊಂದು ಮೀರಿಸುತ್ತವೆ. ಇಲ್ಲಿಯೂನಾಲ್ಕು ದಿಕ್ಕುಗಳಲ್ಲಿ ನಾಲ್ಕು ಹಜಾರಗಳಿದ್ದು, ವೈವಿಧ್ಯಮಯ ಕೆತ್ತನೆಗಳಿಂದ ತುಂಬಿಹೋಗಿವೆ. ಉತ್ತರ ದಿಕ್ಕಿನ ಹಜಾರದಲ್ಲಿ ಬೌದ್ಧ ಧರ್ಮದ ತತ್ವ ಸಿದ್ಧಾಂತಗಳಿಗೆ ಸಂಬಂಧಿಸಿದ ಚಿತ್ರಗಳಿವೆ. ಒಳ್ಳೆಯದನ್ನು ಮಾಡಿದರೆ ಒಳ್ಳೆಯದಾಗುತ್ತದೆ. ಕೆಟ್ಟದನ್ನು ಮಾಡಿದರೆ ಕೆಟ್ಟದ್ದಾಗುತ್ತದೆ ಎನ್ನುವ ಸಿದ್ಧಾಂತವನ್ನು ಇಲ್ಲಿಯ ಕೆತ್ತನೆ ಸಂದೇಶ ನೀಡುತ್ತದೆ. ದಕ್ಷಿಣ ದಿಕ್ಕಿನ ಹಜಾರದಲ್ಲಿ ಸೌರಮಂಡಲದ ಸೂರ್ಯ , ಚಂದ್ರ, ಗ್ರಹ, ಉಪಗ್ರಹ, ನಕ್ಷತ್ರಾದಿಗಳಿದ್ದು ಅವು ಬದುಕಿನ ಹುಟ್ಟು, ಸಾವು, ಯಶಸ್ಸನ್ನು ನಿರ್ಧರಿಸುತ್ತವೆ. ಪಶ್ಚಿಮ ಹಜಾರದ ಪಂಚಭೂತಗಳಾದ ನೀರು, ಗಾಳಿ, ನೆಲ, ಬೆಂಕಿ, ಆಕಾಶಗಳ ಕೆತ್ತನೆಗಳಿದ್ದು, ಅವು ಬದುಕಿನಮೂಲಭೂತ ಅವಶ್ಯಕತೆಯನ್ನು ಸಾರುತ್ತವೆ. ಪೂರ್ವ ಹಜಾರದಲ್ಲಿಯ ಚಿತ್ರಗಳು ತಂದೆ, ತಾಯಿ, ಮಕ್ಕಳ ಕೌಟುಂಬಿಕ ಪ್ರೀತಿ, ಬಂಧನಗಳನ್ನು ಪ್ರತಿನಿಧಿಸುತ್ತವೆ. ಜೊತೆಗೆ ಕೈಲಾಸ ಶಿಖರದಲ್ಲಿ ಕುಳಿತ ಶಿವ, ಹಂಸದ ಮೇಲೆ ಕುಳಿತ ಬ್ರಹ್ಮ, ಕಡಲ ಮಧ್ಯ ಏಳು ಹೆಡೆ ಸರ್ಪದ ನೆರಳಿನಲ್ಲಿ ಪವಡಿಸಿದ ವಿಷ್ಣುವಿನ ಕೆತ್ತನೆ ಆಕರ್ಷ ಣೆಯಾಗಿವೆ. ಇಲ್ಲಿ ಹಾಲಿವುಡ್ ಸಿನಿಮಾಗಳಲ್ಲಿನ ಫ್ಯಾಂಟಸಿಯಂಥ ನೂರಾರು ದೇವಾನುದೇವತೆಗಳ ದೃಶ್ಯಾವಳಿಗಳು ಮನಸೂರೆಗೊಳ್ಳುತ್ತವೆ.
ಖಾಸಗಿ ಒಡೆತನದ 'ದಿ ಸ್ಯಾಂಕ್ಚುರಿ ಆಫ್ ಟ್ರೂಥ್' ಆರಂಭಿಸುವ ಮೊದಲೇ ವಿರಿಯಾಫನ್ 'ದಿ ಏನ್ಸಿಯಂಟ್ ಸಿಟಿ ಆಫ್ಮ್ಯೂಸಿಯಂ' ಸ್ಥಾಪಿಸಿ ಅನುಭವ ಪಡೆದಿದ್ದರು.
ಪಾಶ್ಚಾತ್ಯ ಜಗತ್ತಿನ ವಿಜ್ಞಾನ, ತಂತ್ರಜ್ಞಾನ ಬದುಕಿಗೆ ಐಷಾರಾಮಿ ಸೌಲಭ್ಯ ಒದಗಿಸಿದರೂ ಅವುಗಳಿಗೆಯಾವುದೇ ಧಾರ್ಮಿಕ ಕಟ್ಟಳೆಗಳಿಲ್ಲ. ಅವುಯಾವ ಪ್ರಾಚೀನತೆಯನ್ನು ಜಗತ್ತಿಗೆ ಸಾರುವುದಿಲ್ಲ. ಹಾಗಾಗಿ ವಿರಿಯಾಫನ್ ಏಷ್ಯ ಖಂಡದ ಧರ್ಮ , ಅಧ್ಯಾತ್ಮ, ಪುರಾಣ, ಸಂಪ್ರದಾಯ, ಸಂಸ್ಕೃತಿಗಳನ್ನು ಮೂಲ ನೆಲೆಯಾಗಿಟ್ಟುಕೊಂಡು 'ದಿ ಸ್ಯಾಂಕ್ಚುರಿ ಆಫ್ ಟ್ರೂಥ್' ಅನ್ನು ಸ್ಥಾಪಿಸಿದರು. ಒಳಾಂಗಣದ ಎಡ-ಬಲ, ಮೇಲೆ-ಕೆಳಗೆ ಎಲ್ಲಾ ಕಡೆ ಪ್ರತಿ ಸೆಂಟಿಮೀ ಟರ್ ಜಾಗವೂ ಕಲಾ ಪ್ರೌಢಿಮೆಯಿಂದ ತುಂಬಿಹೋಗಿದೆ. ಪೌರ್ವಾತ್ಯ ಜಗತ್ತಿನ ಬದುಕಿನ ಮೌಲ್ಯಗಳು, ತತ್ವ ಸಿದ್ಧಾಂತಗಳು ಪೀಳಿಗೆಯಿಂದ ಪೀಳಿಗೆಗೆ ಹಸ್ತಾಂ ತರವಾಗಬೇ ಕು. ಈ ನಿಟ್ಟಿನಲ್ಲಿ ಲೇಕ್ ವಿರಿಯಾಫನ್ ಎಲ್ಲಾ ಹಳೆಯ ಧಾರ್ಮಿಕ-ದೈವಿಕ ಶಕ್ತಿಗಳನ್ನು, ಮೌಲ್ಯಗಳನ್ನು ಕಲಾತ್ಮಕವಾಗಿ ಮರದ ಕೆತ್ತನೆಯಲ್ಲಿ ಅರಳಿಸಿದ್ದು ಮೆಚ್ಚುವಂಥ ಕೆಲಸ. ನಾವು ನೋಡಿದ ಅವಿಸ್ಮರಣೀಯ ಮರದ ಪ್ರತಿಮಾಸಂಗ್ರಹಾಲಯ ಎಂದೆಂದಿಗೂ ನೆನಪಿಲ್ಲಿ ಉಳಿಯುವಂಥದ್ದು.



# ನರೇಗಾ ಹೆಸರು ಬದಲಾವಣೆ ಗಾಂಧೀಜಿಗೆ ಮಾಡಿದ ದ್ರೋಹ

**ದಾವಣಗೆರೆ:** ಹಳ್ಳಿಗಳ ಸರ್ವತೋಮುಖ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸಿದ್ದ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಗೆ ಕೇಂದ್ರ ಸರ್ಕಾರ ಮರುನಾಮಕರಣ ಮಾಡುವ ಮೂಲಕ ಗಾಂಧಿಯವರ ಹೆಸರನ್ನೇ ನಾಮಾವಶೇಷ ಮಾಡಲು ಹೊರಟಿದೆ ಎಂದು ಆಮ್ ಆದ್ಮಿ ಪಕ್ಷದ ಜಿಲ್ಲಾಧ್ಯಕ್ಷ ಕೆ.ಎಸ್.ಶಿವಕುಮಾರಪ್ಪ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಮಂತ್ರಿ ಮಂಡಲವು ನರೇಗಾ ಯೋಜನೆಗೆ ಪೂಜ್ಯ ಬಾಪು ಗ್ರಾಮೀಣ ರೋಜಗಾರ ಖಾತ್ರಿ ಯೋಜನೆ ಎಂಬುದಾಗಿ ಪೂಜ್ಯ ಬಾಪು ಗ್ರಾಮೀಣ ರೋಜಗಾರ ಖಾತ್ರಿ ಯೋಜನೆ ಎಂಬುದಾಗಿ ಮರುನಾಮಕರಣ ಮಾಡಲು ನಿರ್ಧರಿಸಿತ್ತು. ಮರುನಾಮಕರಣ ಮಾಡಲು ನಿರ್ಧರಿಸಿತ್ತು. ಪೂಜ್ಯ ಬಾಪು ಗ್ರಾಮೀಣ ರೋಜಗಾರ ಖಾತ್ರಿ ಯೋಜನೆ ಎಂಬುದಾಗಿ ಮರುನಾಮಕರಣ ಮಾಡಲು ನಿರ್ಧರಿಸಿತ್ತು. ಪೂಜ್ಯ ಬಾಪು ಗ್ರಾಮೀಣ ರೋಜಗಾರ ಖಾತ್ರಿ ಯೋಜನೆ ಎಂಬುದಾಗಿ ಮರುನಾಮಕರಣ ಮಾಡಲು ನಿರ್ಧರಿಸಿತ್ತು. ಆದರೆ ಏಕಾಏಕಿ ಲೋಕಸಭೆಯಲ್ಲಿ ಮಸೂದೆ ಮಂಡಿಸುವ ಮೂಲಕ ಗಾಂಧಿಯವರ ಹೆಸರನ್ನು ಹೊರಗಿಟು ಜನಪ್ರಿಯ ಕಲ್ಯಾಣ ಕಾರ್ಯಕ್ರಮದ ಯಶಸ್ಸನ್ನು ತನ್ನದಾಗಿಸಿಕೊಳ್ಳುವ ದುರದ್ದೇಶದಿಂದ ವಿಬಿ–ಜಿ–ರಾಮ್–ಜಿ ಎಂಬ ಗೊಂದಲ ನಾಮಾಂಕನ ಮಾಡಿರುವುದು ಗಾಂಧೀಜಿಗೆ ಮಾಡಿದ ದ್ರೋಹವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪಕ್ಷದ ಮುಖಂಡರಾದ ಎಸ್.ಕೆ.ಆದಿಲ್ ಖಾನ್, ಸುರೇಶ ಶಿಡ್ಲಪ್ಪ, ಕೆ.ರವೀಂದ್ರ, ಶಬ್ಬೀರ್ ಅಹಮದ್, ವಿಕಾಸ್ ಸುದ್ದಿಗೋಷ್ಠಿಯಲ್ಲಿ ಹಾಜರಿದ್ದರು.

# ಐಡಿಯಲ್ ಶಾಲೆಯಲ್ಲೊಂದು ಐತಿಹಾಸಿಕ ಸಂವಾದ ಕಾರ್ಯಕ್ರಮ

**ಚನ್ನಗಿರಿ:** "ಥಟ್ ಅಂತ ಹೇಳಿ" ಕಾರ್ಯಕ್ರಮದ ನಿರೂಪಕರು, ನಡೆದಾಡುವ ಗ್ರಂಥಾಲಯ ಎಂದೇ ಖ್ಯಾತರಾದ ಡಾ. ನಾ. ಸೋಮೇಶ್ವರ ಇವರು ದಿನಾಂಕ: 22–12–2025 ರಂದು ಚನ್ನಗಿರಿಯ ಐಡಿಯಲ್ ಶಾಲಾ ಆವರಣದಲ್ಲಿ ನಡೆಸಿಕೊಟ್ಟ ಪೋಷಕರೊಂದಿಗಿನ ಸಂವಾದ ಕಾರ್ಯಕ್ರಮ ಸೇರಿದ್ದ ಶಾಲೆಯ ಎಲ್ಲಾ ಪೋಷಕರು ಹಾಗೂ ಸಾರ್ವಜನಿಕರನ್ನು ಮಂತ್ರ ಮುಗ್ಧರನ್ನಾಗಿಸಿತು.



ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗಾಗಿ ಪೋಷಕರು ಮತ್ತು ಶಿಕ್ಷಕರು ಏನೇನು ಕ್ರಮಗಳನ್ನು ಅನುಸರಿಸಬೇಕೆಂದು ಸೂಕ್ತ ನಿದರ್ಶನಗಳೊಂದಿಗೆ ವಿವರಿಸಿದ್ದು ಎಲ್ಲಾ ಪೋಷಕರ ಮೆಚ್ಚುಗೆಗೆ ಪಾತ್ರವಾಯಿತು.

ಈ ಕಾರ್ಯಕ್ರಮವನ್ನು ಉದ್ಘಾಟಿಸಿ ಕಾರ್ಯಕ್ರಮದ ಕೊನೆಯವರೆಗೂ ಭಾಗವಹಿಸಿ ಮಾತನಾಡಿದ ಚನ್ನಗಿರಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶ್ರೀ ಎಲ್. ಜಯಪ್ಪನವರು ಈ ರೀತಿಯ ಕಾರ್ಯಕ್ರಮಗಳು ಪೋಷಕರು ಹಾಗೂ ವಿದ್ಯಾರ್ಥಿಗಳಿಗೆ ಅಗತ್ಯವಾಗಿದ್ದು ಆದಷ್ಟು ಎಲ್ಲಾ ಶಾಲೆಗಳಲ್ಲೂ ಮಾಡಬೇಕು ಎಂದು ಅಭಿಪ್ರಾಯ ಪಟ್ಟರು..

ಈ ಸಂದರ್ಭದಲ್ಲಿ ಐಡಿಯಲ್ ಶಾಲೆಯ ಆಡಳಿತ ಮಂಡಳಿಯ ಅಧ್ಯಕ್ಷರಾದ ಶ್ರೀ ಸಿದ್ದೇಶ್ ಎಂ. ಎಸ್. , ಕಾರ್ಯದರ್ಶಿಯಾದ ಶ್ರೀ ರಘು ಬಿ. ಸಿ., ಖಜಾಂಚಿಯಾದ ಶ್ರೀ ರಾಕೇಶ್ ಹೆಚ್. ಬಿ., ಹಾಗೂ ಡಾ. ವಿನಯ್ ಕುಮಾರ್ ಸಂಪನ್ಮೂಲ ವ್ಯಕ್ತಿ ಆಳ್ವಾಸ್ ವಿದ್ಯಾ ಸಂಸ್ಥೆ ಮೂಡುಬಿದಿರೆ ಇವರು ಹಾಜರಿದ್ದರು

# ಪ್ರತಿಫಲ ಇಲ್ಲದೆ ದುಡಿಯುವ ರೈತರಿಗೆ ಪ್ರತಿಯೊಬ್ಬರು ಗೌರವ ನೀಡಬೇಕು

ಚನ್ನಪಟ್ಟಣ: ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೆ ದೇಶಕ್ಕಾಗಿ ಶ್ರಮಿಸುವವರಿದ್ದರೆ ಗಡಿ ಕಾಯುವ ಯೋಧ ಮತ್ತು ದೇಶಕ್ಕೆ ಅನ್ನ ನೀಡಿ ರೈತರಾಗಿದ್ದು ಪ್ರತಿಯೊಬ್ಬರು ಶ್ರಮಿಸಬೇಕು ಎಂದು ಶ್ರೀ ಸಿದ್ದರಾಮೇಶ್ವರ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಬೇವೂರು ಯೋಗೀಶ್‌ಗೌಡ ಅಭಿಪ್ರಾಯಿಸಿದರು.



ಬೇವೂರು ಶ್ರೀ ಸಿದ್ದರಾಮೇಶ್ವರ ವಿದ್ಯಾಸಂಸ್ಥೆಯಲ್ಲಿ ಆಯೋಜಿಸಿದ್ದ ವಿಶ್ವ ರೈತ ದಿನಾಚರಣೆಯಲ್ಲಿ ಅವರು ಮಾತನಾಡಿ ದೇಶ ಕಾಯುವ ಯೋಧ ಜನರ ರಕ್ಷಣೆಗಾಗಿ ಪ್ರಾಣ ತ್ಯಾಗ ಮಾಡಲು ಸಿದ್ದರಾಗಿದ್ದರೆ ದೇಶದ ಜನತೆಗೆ ಅನ್ನ ನೀಡುವ ನಿಟ್ಟಿನಲ್ಲಿ ದೇಶದ ಜನರ ಪ್ರಾಣ ಉಳಿಸುವ ಕಾರ್ಯದಲ್ಲಿ ರೈತರು ಆಹಾರ ಬೆಳೆ ಬೆಳೆಯುತ್ತಾರೆ. ಈ ನಿಟ್ಟಿನಲ್ಲಿ ನಾವೆಲ್ಲಾ ರೈತರಿಗೆ ದೇವರ ಸ್ಥಾನ ನೀಡುತ್ತಾ ಬಂದಿದ್ದು, ಅವರಿಗೆ ಸೂಕ್ತ ಗೌರವ ನೀಡಬೇಕು ಎಂದು ಅಭಿಪ್ರಾಯಿಸಿದರು.

ನಾವು ಯಾವುದೇ ವ್ಯಾಪಾರ ಮಾಡಿದರೂ ಆ ವಸ್ತುಗಳಿಗೆ ನಿಗಧಿತ ಬೆಲೆ ಮತ್ತು ಲಾಭ ಇರುತ್ತದೆ. ಆದರೆ ಆ ವ್ಯಾಪಾರ ನಷ್ಟವಾದರೆ ಮತ್ತೊಂದು ವ್ಯಾಪಾರ ಆರಂಭ ಮಾಡುತ್ತೇವೆ. ಆದರೆ ರೈತರು ಬೆಳೆದ ಬೆಳೆಗೆ ಸೂಕ್ತ ಬೆಲೆಯೂ ಇಲ್ಲದೆ ಹಾಕಿದ ಬಂಡವಾಳವೂ ಕೈ ಸೇರದೆ ಸಾಲಗಾರನಾದರೂ ಸಹ ಮತ್ತೆ ಕೃಷಿಯನ್ನೇ ಮಾಡುತ್ತಾನೆ. ಈ ನಿಟ್ಟಿನಲ್ಲಿ ಲಾಭ ನಿರೀಕ್ಷೆ ಇಲ್ಲದೆ ಕೃಷಿ ಮಾಡುತ್ತಿರುವ ರೈತರನ್ನು ನಾವೆಲ್ಲಾ ಗೌರವಿಸಿ ನಾವು ಸಹ ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆ ಕೊಡಿಸುವಲ್ಲಿ ಕೈ ಜೋಡಿಸಿ ನೇರವಾಗಿ ರೈತರಿಂದ ಬೆಳೆಯನ್ನು ಖರೀದಿ ಮಾಡುವ ಮೂಲಕ ಅವರಿಗೆ ಲಾಭ ಕೊಡಿಸುವ ನಿಟ್ಟಿನಲ್ಲಿ ಶ್ರಮಿಸಬೇಕು ಎಂದು ಯೋಗೀಶ್‌ಗೌಡ ಕಿವಿಮಾತು ಹೇಳಿದರು.

ಇಂದು ನಾವು ಕಾಲಿಗೆ ಹಾಕು ಚಪ್ಪಲಿಗೂ ಒಂದು ನಿರ್ಧಿಷ್ಟ ಬೆಲೆಯನ್ನು ನಿಗಧಿ ಮಾಡಲಾಗಿದೆ. ಆದರೆ ರೈತರು ಬೆಳೆಯುವ ಬೆಳೆಗೆ ನಿರ್ಧಿಷ್ಟ ಬೆಲೆಯೂ ಇಲ್ಲವಾಗಿದ್ದು, ಹೆಚ್ಚು ಬೆಳೆ ಬೆಳೆದಾಗ ವೆಲೆ ಕುಸಿತವಾಗುತ್ತದೆ. ಬೆಳೆ ಇಲ್ಲದ ವೇಳೆ ಬೆಲೆ ಏರಿಕೆ ಆಗುತ್ತದೆ. ಈ ನಿಟ್ಟಿನಲ್ಲಿ ರೈತರು ಲಾಭಧ ನಿರೀಕ್ಷೆ ಇಟ್ಟು ಸಾಲ ಮಾಡಿ ಕೃಷಿ ಮಾಡಿದ ವೇಳೆಯಲ್ಲಾ ಬೆಲೆ ಕುಸಿತವಾಗಿ ರೈತರು ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ನಿಟ್ಟಿನಲ್ಲಿ ಸರ್ಕಾರ ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆಯನ್ನು ನಿಗಧಿ ಮಾಡುವ ನಿಟ್ಟಿನಲ್ಲಿ ಕಾನೂನು ತಿದ್ದುಪಡಿ ಮಾಡಬೇಕು ಎಂದು ಯೋಗೀಶ್‌ಗೌಡ ಒತ್ತಾಯಿಸಿದರು.

ಸಂಸ್ಥೆಯ ಅಧ್ಯಕ್ಷರಾದ ಹೆಚ್.ಪಿ. ದೊಡ್ಡಮಾದೇಗೌಡರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ರೈತರ ಮಕ್ಕಳಾದ ನೀವು ನಿಮ್ಮ ತಂದೆ ತಾಯಿಯ ಶ್ರಮವನ್ನು ನೋಡಿ ಬೆಳೆದಿದ್ದು, ನೀವು ಪೋಷಕರಿಗೆ ಕೃಷಿಯಲ್ಲಿ ಸಹಕಾರ ನೀಡುವ ಜೊತೆಗೆ ಉತ್ತಮ ಶಿಕ್ಷಣ ಪಡೆದು ಅವರಿಗೆ ಆಸರೆಯಾಗುವ ನಿಟ್ಟಿನಲ್ಲಿ ಶ್ರದ್ದೆಯಿಂದ ಶಿಕ್ಷಣ ಪಡೆಯಿರಿ ಎಂದು ಕಿವಿಮಾತು ಹೇಳಿದರು.

ಸಂರ್ಭದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಜಿತೇಂದ್ರಕುಮಾರ್, ಖಜಾಂಚಿ ಬಿ.ಸಿ. ಮನು, ನಿರ್ದೇಶಕರಾದ ಬಿ.ಪಿ. ನಾಗರಾಜು, ಆರ್. ಶಿವಕುಮಾರ್, ಬಿ.ಸಿ. ಕೇತನ್, ಬಿ. ಕೆಂಪೇಗೌಡ, ನವೀನ್‌ಕುಮಾರ್, ಕೆಂಪರಾಜು, ಕೆ.ಟಿ. ಲಕ್ಷ್ಮಮ್ಮ, ಡಿ. ಪ್ರಸಾದ್, ಪ್ರಾಂಶಪಾಲ ಡಿ.ಸಿ. ಸುರೇಶ್, ಉಪನ್ಯಾಸಕರುಗಳಾದ ಆರ್.ಪಿ. ಮಂಜುನಾಥ್, ವಿನೋಧ್, ಉಪ ಪ್ರಾಂಶುಪಾಲರಾದ ಎಸ್. ಜೆ. ಗೌರಮ್ಮ, ದೈಹಿಕ ಶಿಕ್ಷಣ ಶಿಕ್ಷಕರಾದ ಎಸ್. ನಾಗೇಶ್‌ಗೌಡ, ಮುಖ್ಯ ಶಿಕ್ಷಕ ಕೆ. ಚಿರಾಗ್, ಸಹ ಶಿಕ್ಷಕರಾದ ಬಿಸಿ ಗಗನ, ಟಿ. ಎಂ. ಅಮೃತ, ಎಂ.ಎಸ್. ಮಂಜು, ಎನ್. ಪ್ರಶಾಂತ್, ಸುವರ್ಣ, ಸುಧಾ, ಶೋಭಾ, ರಮ್ಯ, ಸಹನ, ಭಾರತಿ, ದ್ವಿ. ದರ್ಜೆ ಸಹಾಯಕರಾದ ಬಿ.ಪಿ. ಚೈತ್ರ, ಬಿ. Today ಅಭಿಷೇಕ್, ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದು ಗಿಡ ನೆಟ್ಟರು.

# ಡಿಜಿಟಲ್ ನ್ಯಾಯದ ಮೂಲಕ ಪರಿಣಾಮಕಾರಿ ಮತ್ತು ತ್ವರಿತ ವಿಲೇವಾರಿಗೆ ಆದ್ಯತೆ

**ಗದಗ:** ಗ್ರಾಹಕರು ತಾವು ಖರೀದಿಸಿದ ಸಾಮಗ್ರಿ ಗುಣಮಟ್ಟ ಅಥವಾ ಪ್ರಮಾಣದಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಆ ಸಂದರ್ಭದಲ್ಲಿ ಡಿಜಿಟಲ್ ನ್ಯಾಯದ ಮೂಲಕ ಪ್ರಕರಣ ದಾಖಲಿಸಿ ತ್ವರಿತ ಹಾಗೂ ಪರಿಣಾಮಕಾರಿಯಾಗಿ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರು ಎ.ಜೆ. ಮಾಲ್ದಾರ ಉದ್ಘಾಟಿಸಿ ಮಾತನಾಡಿದರು.



ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ, ವಾರ್ತಾ ಮತ್ತು ಸಾ.ಸಂ.ಇಲಾಖೆ ಹಾಗೂ ವಿ.ಆರ್.ಕುಷ್ಟಗಿ ಮೆಮೋರಿಯಲ್ ಕಾಲೇಜ್ ಆಫ್ ಕಾಮರ್ಸ , ಗದಗ–ಬೆಟಗೇರಿ ಇವರ ಸಂಯುಕ್ತಾಶ್ರಯದಲ್ಲಿ ಗದಗ–ಬೆಟಗೇರಿಯ ವಿ.ಆರ್. ಕುಷ್ಟಗಿ ಮೆಮೋರಿಯಲ್ ಕಾಲೇಜ್ ಆಫ್ ಕಾಮರ್ಸ ಆವರಣದ ಸುವರ್ಣ ಮಹೋತ್ಸವ ಭವನದಲ್ಲಿ ಬುಧವಾರ ರಾಷ್ಟ್ರೀಯ ಗ್ರಾಹಕರ ದಿನಾಚರಣೆ–2025 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಗ್ರಾಹಕರು ಯಾವುದೇ ವಸ್ತು ಖರೀದಿಸುವಾಗ ಹಾಗೂ ಸೇವೆ ಪಡೆಯುವಾಗ ಜಾಗೃತೆಯಿಂದ ವ್ಯವಹರಿಸಬೇಕು. ಅದರ ಗುಣಮಟ್ಟ, ಪ್ರಮಾಣ, ವ್ಯಾರಂಟಿ, (ಜಥಳಿಡಿಣಥಿ ಜಚಿಣಜ ) ಅವಧಿ ಮುಕ್ತಾಯ ಪರಿಶೀಲಿನೆ ಅತ್ಯವಶ್ಯಕವಾಗಿದೆ. ಗ್ರಾಹಕರಿಗೆ ಅನ್ಯಾಯವಾದಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವನ್ನು ಸಂಪರ್ಕಿಸಿ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ಹೇಳಿದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮಹಿಳಾ ಸದಸ್ಯರಾದ ಶ್ರೀಮತಿ ಯಶೋಧಾ ಪಾಟೀಲ ಇವರು ಪ್ರಾಸ್ತಾವಿಕವಾಗಿ ಮಾತನಾಡಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ಗ್ರಾಹಕರುಗಳು ಅತಿವೇಗದಲ್ಲಿ ವ್ಯಾಜ್ಯಗಳನ್ನು ದಾಖಲಿಸಬಹುದು, ಹಾಗೂ ಸಂಬಂಧಿತ ವ್ಯಾಜ್ಯದ ಸಾಕ್ಷಿಗಳನ್ನು ಡಿಜಿಟಲ್ ನ್ಯಾಯ ಸಲ್ಲಿಸಬಹುದಾಗಿದೆ, ತ್ವರಿತಗತಿಯಲ್ಲಿ ನ್ಯಾಯ ದೊರಕಿಸಿ ಕೊಡುವುದೇ ಇದರ ಮೂಲ ಉದ್ದೇಶವಾಗಿದೆ ಎಂದರು,

ಗ್ರಾಹಕರಿಗೆ ಸಂಬಂಧಿತ ವ್ಯಾಜ್ಯಗಳನ್ನು ಪರಿಶೀಲಿಸಿ, ವಿಲೇವಾರಿ ಮಾಡುವ ಮೂಲಕ ನ್ಯಾಯ ಒದಗಿಸುವುದಾಗಿದೆ ಎಂದರು ಹಾಗೂ ಗ್ರಾಹಕರ ಬೇಡಿಕೆಗೆ ಅನುಗುಣವಾಗಿ ತಾವು ಖರೀದಿಸಿದ ವಸ್ತುಗಳ ಗುಣಮಟ್ಟವು ಕಳಪೆ ಎಂದು ಕಂಡುಬಂದರೆ ಬದಲಾದ ಆಯಾ ಕಾಲಘಟ್ಟದಲ್ಲಿ ಮೊಸವಾದ ಗ್ರಾಹಕರಿಗೆ ಇಂದು ಡಿಜಿಟಲ್ ನ್ಯಾಯದ ಮೂಲಕ ಪ್ರತಿಯೊಬ್ಬ ಗ್ರಾಹಕರು ಪರಿಣಾಮಕಾರಿಯಾಗಿ ಮತ್ತು ತ್ವರಿತ ಗತಿಯಲ್ಲಿ ಹಲವಾರು ತರಹದ ವ್ಯಾಜ್ಯಗಳನ್ನು ವಿಲೇವಾರಿ ಮಾಡುವ ಮೂಲಕ ಗ್ರಾಹಕರಿಗೆ ಸೇವೆ ಕೊಡುವುದಾಗಿದೆ ಎಂದರು. ಮಾರಾಟಗಾರರು ಒಂದು ವಸ್ತುವನ್ನು ಮಾರಾಟ ಮಾಡಬೇಕಾದರೆ ಗುಣಮಟ್ಟದ ವಸ್ತು ಹಾಗೂ ಸೇವೆಯನ್ನು ಒದಗಿಸುವ ಮೂಲಕ ಗ್ರಾಹಕರೊಂದಿಗೆ ನ್ಯಾಯಯುತವಾಗಿ ವ್ಯವಹರಿಸಬೇಕು ಎಂದು ಸೂಚನೆ ನೀಡಿದರು

ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಎಸ್.ಜಿ.ಪಲ್ಲೇದ ಅವರು ಮಾತನಾಡಿ ಪ್ರತಿವರ್ಷ ಡಿ. 24 ರಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಆಚರಣೆ ಮಾಡಲಾಗುತ್ತದೆ ಹಾಗೂ ಮಾರ್ಚ 15 ರಂದು ವಿಶ್ವ ಗ್ರಾಹಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಭಾರತದಲ್ಲಿ ಗ್ರಾಹಕರ ದಿನಾಚರಣೆಯು 1986 ರಲ್ಲಿ ಜಾರಿಗೆ ಬಂದಿದೆ. ಸೆ.67 ರ ಪ್ರಕಾರ ಸುಪ್ರೀಮ್ ಕೋರ್ಟನ ಆದೇಶದಂತೆ ಗ್ರಾಹಕರ ಕುಂದುಕೊರತೆಗಳ ಪರಿಹಾರಕ್ಕಾಗಿ ಇರುವ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಜಿಲ್ಲಾ, ರಾಜ್ಯ, ಕೇಂದ್ರ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿದೆ.

ಯಾವುದೇ ಒಂದು ವಸ್ತುವನ್ನು ಖರೀದಿಸಿದಾಗ ಆ ವ್ಯಕ್ತಿಯನ್ನು ಗ್ರಾಹಕರೆಂದು ಕರೆಯುತ್ತಾರೆ. ಗ್ರಾಹಕರಿಗೆ ತಾವು ಖರೀಸಿದ ಸಾಮಗ್ರಿ ಕುರಿತು ಮಾಹಿತಿ ಪಡೆಯುವ ಹಕ್ಕು, ಆಯ್ಕೆಯ ಹಕ್ಕು, ರಕ್ಷಣೆ ಪಡೆಯುವ ಹಕ್ಕು ಇತ್ಯಾದಿ ತಿಳಿಸುವದೇ ರಾಷ್ಟ್ರೀಯ ಗ್ರಾಹಕರ ದಿನಾಚರಣೆಯ ಉದ್ದೇಶವಾಗಿದೆ ಎಂದರು.

ನಂತರ ಅವರ ಮಾತನಾಡಿ ಶೋಷಣೆ ತಡೆ, ಕಾಳಧನ, ಕಲಬೆರಕೆ, ಹೆಚ್ಚಿನ ಬೆಲೆ ವಸೂಲಿ ಅನ್ಯಾಯದ ವ್ಯಾಪಾರ ಪದ್ಧತಿಗಳಿಂದ ರಕ್ಷಿಸುವುದು. ನ್ಯಾಯ, ಗ್ರಾಹಕರ ಕುಂದುಕೊರತೆಗಳ ಪರಿಹಾರಕ್ಕಾಗಿ ಇರುವ ಆಯೋಗಗಳ ಜಿಲ್ಲಾ, ರಾಜ್ಯ, ಕೇಂದ್ರ ಮಟ್ಟದ ಬಗ್ಗೆ ಮಾಹಿತಿ ನೀಡುವುದು. ಕಾಯಿದೆಗಳ ಜಾರಿ: ಗ್ರಾಹಕ ಸಂರಕ್ಷಣಾ ಕಾಯಿದೆ, 2019 ರಂತಹ ಕಾನೂನುಗಳ ಅನ್ವಯದ ಕುರಿತು ವಿವರವಾಗಿ ಎಸ್.ಜಿ.ಪಲ್ಲೇದ ತಿಳಿಸಿದರು.

# ಬಿಜೆಪಿಯಿಂದ ಸುಶಾಸನ ದಿನ, ಸಾರ್ವಜನಿಕ ಸ್ಥಳಗಳಲ್ಲಿ ಅಟಲಜೀ ಸ್ಮೃತಿ ಪ್ರದರ್ಶಿನಿ ಆಯೋಜನೆ

**ದಾವಣಗೆರೆ:** ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಜನ್ಮದಿನದ ಪ್ರಯುಕ್ತ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಕರೆಯ ಮೇರೆಗೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ನಿರ್ದೇಶನದಂತೆ ಡಿಸೆಂಬರ್ 25ರಂದು ಜಿಲ್ಲೆಯಲ್ಲಿ ಸುಶಾಸನ ದಿನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅನಿಲಕುಮಾರ ನಾಯ್ಕ ತಿಳಿಸಿದರು.




ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ಅಂಗವಾಗಿ ಡಿಸೆಂಬರ್ 24ರಂದು ಸಂಜೆ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ದೀಪ ಬೆಳಗಿಸಲಾಗುತ್ತಿದೆ. ಡಿ.25ರಂದು ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಮೀಪದ ರಾಷ್ಟ್ರೀಯ ಹೆದ್ದಾರಿ ಹಾಗೂ ಹೆಬ್ಬಾಳ್ ಟೋಲಗೇಟ್ ಬಳಿ ಅಟಲಜೀ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ವಾಹನ ಚಾಲಕರಿಗೆ ಸಿಹಿ ವಿತರಿಸಲಾಗುವುದು. ಎಲ್ಲಾ ಮಂಡಗಳಲ್ಲಿ ಡಿ.25ರಿಂದ 31ರವರೆಗೆ ಅಟಲಜೀ ಜೀವನ ಮತ್ತು ಸಾಧನೆಗಳ ಉಪನ್ಯಾಸ ಏರ್ಪಡಿಸಲಾಗುವುದು. ಪಕ್ಷದ ಕಚೇರಿ, ಸ್ಥಳೀಯ ಸಂಸ್ಥೆಗಳ ಕಚೇರಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಅಟಲಜೀ ಸ್ಮೃತಿ ಪ್ರದರ್ಶಿನಿ ಆಯೋಜಿಸಲಾಗುವುದು ಎಂದರು.

ಭಾರತರತ್ನ ಅಟಲ್ ಬಿಹಾರಿ ವಾಜಪೇಯಿಯವರ ಸಭ್ಯತೆ, ಸರಳತೆ ಮತ್ತು ಸಂವೇದನಶೀಲತೆಯು ಕೋಟ್ಯಂತರ ಭಾರತೀಯರ ಹೃದಯವನ್ನು ಸೂರೆಮಾಡಿದೆ. ಅವರ ಪರಿಶುದ್ಧ ರಾಜಕಾರಣದ ಜೀವನ, ಕೊಡುಗೆಗಳಿಗೆ ಇಡೀ ದೇಶ ಋಣಿಯಾಗಿದೆ. ಅವರ ಜೀವನ, ಸಾಧನೆಗಳನ್ನು ಸಾರುವ ನಿಟ್ಟಿನಲ್ಲಿ ವಾಜಪೇಯಿ ಜನ್ಮಶತಮಾನೋತ್ಸವ ವರ್ಷಾಚರಣೆ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಅಟಲಜೀಯವರ ರಾಜಕೀಯ ಬದುಕು, ದೇಶಕ್ಕೆ ಕಲ್ಪಿಸಿದ ಮೂಲ ಸೌಕರ್ಯ, ವಿದೇಶಾಂಗ ನೀತಿ, ಜನಸಾಮಾನ್ಯರ ಬದುಕನ್ನು ಹಸನಾಗಿಸಲು ಕೈಗೊಂಡ ಪ್ರಮುಖ ಸುಧಾರಣೆ, ಕೊಡುಗೆಗಳನ್ನು ಸ್ಮರಿಸುವುದು, ಬೂತ್ ನಿಂದ ರಾಷ್ಟ್ರಮಟ್ಟದವರೆಗೆ ಅಭಿಯಾನಕ್ಕೆ ಕಾರ್ಯಕರ್ತರನ್ನು ಸಜ್ಜುಗೊಳಿಸುವ ಮೂಲಕ ಅಟಲಜೀ ಸಾರಿದ ಉದಾತ್ತ ಆದರ್ಶ, ಚಿಂತನೆಗಳನ್ನು ಸಂಘಟನೆಯ ಮುಂದಿನ ತಲೆಮಾರಿನ ಕಾರ್ಯಕರ್ತರಲ್ಲಿ ಬೇರೂರಿಸುವುದು, ದೇಶ ಮೊದಲು ಎಂಬ ಮೌಲ್ಯವನ್ನು ಎತ್ತಿ ಹಿಡಿದು, ವಿಕಸಿತ ಭಾರತದತ್ತ ನಾಗರಿಕರು ಮತ್ತು ಯುವಕರನ್ನು ಪ್ರೇರೇಪಿಸುವುದು ಅಭಿಮಾನದ ಉದ್ದೇಶವಾಗಿದೆ ಎಂದು ಅವರು ವಿವರಿಸಿದರು.

ಪಕ್ಷದ ಮುಖಂಡರಾದ ತಾರೇಶ ನಾಯ್ಕ, ಸಚಿನ್, ಕೋಳೇನಹಳ್ಳಿ ಬಿ.ಎಂ.ಸತೀಶ, ಆರ್.ಶಿವಾನಂದ, ನೆಲಹೊನ್ನೆ ಮಂಜುನಾಥ, ಕೊಟ್ರೇಶಗೌಡ, ತುಂಬಿಗೆರೆ ದಿನೇಶ, ಕೂಲಂಬಿ ಸಿದ್ದಲಿಂಗಪ್ಪ ಸುದ್ದಿಗೋಷ್ಠಿಯಲ್ಲಿದ್ದರು.


## ಮಹಾನಗರ ಪಾಲಿಕೆ ಕಾರ್ಯಾಲಯ, ದಾವಣಗೆರೆ.

ಸಂಖ್ಯೆ: ದಾಮನಪಾ/ಇತರೆ/ಸಿಆರ್/01/2023–24 ದಿನಾಂಕ:23–12–2025

### ಮರು ಬಹಿರಂಗ ಹರಾಜು ಪ್ರಕಟಣೆ–05ನೇ ಕರೆ

ಈ ಮೂಲಕ ನಗರದ ಸಮಸ್ತ ನಾಗರೀಕರಿಗೆ ತಿಳಿಯಪಡಿಸುವುದೇನೆಂದರೆ, ದಾವಣಗೆರೆ ಮಹಾನಗರ ಪಾಲಿಕೆ ಮಾಲೀಕತ್ತ್ವದ ಕೆ.ಇ.ಬಿ ಹಿಂಭಾಗದ ಮತ್ತು ಸೂಪರ್ ಮಾರ್ಕೆಟ್‌ನ ಮಳಿಗೆಗಳ ರೀತ್ಯಾ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲು ದಿನಾಂಕ: 02–01–2025ರ ತೆರಿಗೆ ನಿರ್ಧರಣೆ, ಹಣಕಾಸು ಮತ್ತು ಮೇಲ್ಮನವಿ ಸ್ಥಾಯಿ ಸಮಿತಿ ಸಭೆಯ ನಡವಳಿ, ವಿಷಯ ಸಂಖ್ಯೆ:16(07) ಮತ್ತು ದಿನಾಂಕ:16–01–2025 ರಸಾಮಾನ್ಯ ಸಭೆಯ ನಡವಳಿ, ವಿಷಯ ಸಂಖ್ಯೆ: 07ರಂತೆ ತೀರ್ಮಾನದಂತೆ ಬಹಿರಂಗ ಹರಾಜು ಮಾಡಲು ತೀರ್ಮಾನಿಸಲಾಗಿರುತ್ತದೆ.

ಅದರಂತೆ ಮಾನ್ಯ ಜಿಲ್ಲಾಧಿಕಾರಿಗಳ ಅಧಿಕೃತ ಜ್ಞಾಪನಾ ನಂ.ಜಿ.ನ.ಕೋ.ದಾ(2)/ಸಿಆರ್/316/2024–25 ದಿನಾಂಕ: 07–03–2025ರಲ್ಲಿ ಮಳಿಗೆಗಳನ್ನು ವಿಲೇವಾರಿ ಮಾಡಲು ಮಂಜೂರಾತಿ ನೀಡಲಾಗಿರುತ್ತದೆ. ಅದರಂತೆ ದಿನಾಂಕ: 10–03–2025 ರರೀತ್ಯಾ ಪ್ರಕಟಣೆ ನೀಡಿ ದಿನಾಂಕ:09–04–2025 ರಂದು ಬಹಿರಂಗ ಹರಾಜು ಪ್ರಕ್ರಿಯೆಯನ್ನು ಮಾಡಿ ಸೂಪರ್‌ಮಾರ್ಕೆಟ್ ನ 16 ಮಳಿಗೆಗಳಲ್ಲಿ 04 ಮಳಿಗೆಗಳನ್ನು ಮತ್ತು ಕೆ.ಇ.ಬಿ ಹಿಂಭಾಗದ 17 ಮಳಿಗೆಗಳಲ್ಲಿ 07 ಮಳಿಗೆಗಳು ಒಟ್ಟು 11 ಮಳಿಗೆಗಳನ್ನು ವಿಲೇವಾರಿ ಮಾಡಲಾಗಿರುತ್ತದೆ. ನಂತರ ದಿನಾಂಕ:03–05–2025 ರಲ್ಲಿ ಪ್ರಕಟಣೆ ನೀಡಿ ದಿನಾಂಕ:03–06–2025 ರಂದು ಸೂಪರ್ ಮಾರ್ಕೆಟ್ ನ 12 ಮಳಿಗೆಗಳಲ್ಲಿ 03 ಮಳಿಗೆಗಳನ್ನು ಮಾತ್ರ ವಿಲೇವಾರಿ ಮಾಡಲಾಗಿರುತ್ತದೆ. ತದನಂತರ ದಿನಾಂಕ: 16–06–2025 ರಲ್ಲಿ ಪ್ರಕಟಣೆ ನೀಡಿ ಸೂಪರ್ ಮಾರ್ಕೆಟ್‌ನ 09 ಮಳಿಗೆಗಳ ಪೈಕಿ 01 ಮಳಿಗೆ ಮಾತ್ರ ವಿಲೇವಾರಿ ಆಗಿದ್ದು, ಉಳಿಕೆ ಮಳಿಗೆಗಳನ್ನು ದಿನಾಂಕ:05–08–2025 ರಂದು ಪ್ರಕಟಣೆ ನೀಡಿದ್ದು, ದಿನಾಂಕ:30–08–2025 ರಂದು ಯಾವುದೇ ಮಳಿಗೆಗಳು ವಿಲೇವಾರಿ ಆಗಿರುವುದಿಲ್ಲ. ಪ್ರಯುಕ್ತ ವಿಲೇವಾರಿಆಗದ ಈ ಕೆಳಕಂಡ ಮಳಿಗೆಗಳಿಗೆ ಮತ್ತೊಮ್ಮೆ ಹರಾಜು ಮೂಲಕ ವಿಲೇವಾರಿ ಮಾಡಲು, ನಿಗಧಿಪಡಿಸಿದ ದಿನಾಂಕದಂದು ಪಾಲಿಕೆಯ ಕೌನ್ಸಿಲ್ ಸಭಾಂಗಣದಲ್ಲಿ ಮತ್ತೊಮ್ಮೆ ಹರಾಜು ಕರೆಯಲಾಗಿದೆ. ಸರ್ಕಾರದ ಸುತ್ತೋಲೆಯಂತೆ ವಿಲೇವಾರಿ ಆಗದ ಸದರಿ ಮಳಿಗೆಗಳಿಗೆ ನಿಗಧಿಪಡಿಸಿದ ಬಾಡಿಗೆಗೆ ಶೆ.10ರಷ್ಟು ಬಾಡಿಗೆ ಕಡಿಮೆ ಮಾಡಿ ಪ್ರಕಟಣೆ ನೀಡಲಾಗಿದೆ.

ಹರಾಜಿನಲ್ಲಿ ಭಾಗವಹಿಸುವವರು ಹರಾಜು ನಡೆಯುವ ಹಿಂದಿನ ದಿನ ಸಂಜೆ 5.00 ಗಂಟೆಯೊಳಗಾಗಿ ಈ ಪ್ರಕಟಣೆಯಲ್ಲಿ ವಿವರಿಸಿರುವಂತೆ ತಾಂತ್ರಿಕ ಶಾಖೆಯಿಂದ ನಿಗಧಿಪಡಿಸಲಾದ ಠೇವಣಿಯಂತೆ ಮುಂಗಡ ಠೇವಣಿಯಾಗಿ ಮೊತ್ತವನ್ನು ಬ್ಯಾಂಕ್‌ನ ಡಿ.ಡಿ ಮೂಲಕ (ನಗದು/ಚೆಕ್ ಅವಕಾಶವಿರುವುದಿಲ್ಲ) ಆಯುಕ್ತರು, ಮಹಾನಗರ ಪಾಲಿಕೆ, ದಾವಣಗೆರೆ ಇವರ ಹೆಸರಿಗೆ ಪಾವತಿಸಿ ಪಾಲಿಕೆಯ ಕಂದಾಯ ಶಾಖೆಯಿಂದ ನೀಡುವ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಟೋಕನ್ ಪಡೆಯತಕ್ಕದ್ದು, ಹೆಚ್ಚಿನ ವಿವರಗಳಿಗಾಗಿ ರಜೆ ದಿನಗಳನ್ನು ಹೊರತುಪಡಿಸಿ ಮುಖ್ಯ ಕಛೇರಿಯ ಮಳಿಗೆ ಶಾಖೆಯಲ್ಲಿ ಮಾಹಿತಿ ಪಡೆಯಬಹುದಾಗಿದೆ. ಮೀಸಲಾತಿ ಮಳಿಗೆಗಳನ್ನು ಪಡೆಯಲು ಇಚ್ಛಿಸುವವರು (ಪ.ಜಾ / ಪ.ಪಂ. ಮತ್ತು ವಿಕಲಚೇತನರು ಅಂದರೆ ಶೇ. 50%ಕ್ಕಿಂತ ಹೆಚ್ಚಾಗಿ ಅಂಗವಿಕಲತೆ ಹೊಂದಿರುವವರು) ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಢೀಕೃತ ಪ್ರಮಾಣ ಪತ್ರವನ್ನು ಹರಾಜಿಗೆ ಮುಂಚಿತವಾಗಿ ಅರ್ಜಿ ನಮೂನೆಯಲ್ಲಿ ಸಲ್ಲಿಸುವುದು, ಇನ್ನುಳಿದ ಷರತ್ತುಗಳನ್ನು ಹರಾಜಿನ ಸಮಯದಲ್ಲಿ ಓದಿ ಹೇಳಲಾಗುವುದು.

**ಪಿ.ಜೆ ಬಡಾವಣೆಯ ಸೂಪರ್‌ಮಾರ್ಕೆಟ್ ಮಳಿಗೆಗಳು**

| ಕ್ರ. ಸಂ. | ಹರಾಜು ದಿನಾಂಕ | ಮಳಿಗೆ ಸಂಖ್ಯೆ | ಮೀಸಲಾತಿ ವಿವರ | ತಾಂತ್ರಿಕ ಶಾಖೆಯಿಂದ ನಿಗಧಿಪಡಿಸಿದ ಬಾಡಿಗೆ ರೂ. | ತಾಂತ್ರಿಕ ಶಾಖೆಯಿಂದ ನಿಗಧಿಪಡಿಸಲಾದ ಠೇವಣಿ ರೂ. |
|---|---|---|---|---|---|
| 1 | ದಿನಾಂಕ: 23–01–2026 11 ಗಂಟೆಗೆ | 1 | ಸಾಮಾನ್ಯ | 14,580/– | 3,00,000/– |
| 2 | | 12 | ಸಾಮಾನ್ಯ | 3,240/– | 2,00,000/– |
| 3 | | 13 | ಸಾಮಾನ್ಯ | 3,240/– | 2,00,000/– |
| 4 | | 14 | ಸಾಮಾನ್ಯ | 3,240/– | 2,00,000/– |
| 5 | | 15 | ಸಾಮಾನ್ಯ | 3,240/– | 2,00,000/– |
| 6 | | 26 | ಪ.ಜಾ | 3,240/– | 2,00,000/– |
| 7 | | 27 | ಸಾಮಾನ್ಯ | 3,240/– | 2,00,000/– |
| 8 | | 32 | ಸಾಮಾನ್ಯ | 2,250/– | 2,00,000/– |

**ಪಿ.ಜೆ ಬಡಾವಣೆಯ ಕೆ.ಇ.ಬಿ ಹಿಂಭಾಗದ ಮಳಿಗೆಗಳು**

| ಕ್ರ. ಸಂ. | ಹರಾಜು ದಿನಾಂಕ | ಮಳಿಗೆ ಸಂಖ್ಯೆ | ಮೀಸಲಾತಿ ವಿವರ | ತಾಂತ್ರಿಕ ಶಾಖೆಯಿಂದ ನಿಗಧಿಪಡಿಸಿದ ಬಾಡಿಗೆ ರೂ. | ತಾಂತ್ರಿಕ ಶಾಖೆಯಿಂದ ನಿಗಧಿಪಡಿಸಲಾದ ಠೇವಣಿ ರೂ. |
|---|---|---|---|---|---|
| 1 | ದಿನಾಂಕ: 23–01–2026 11 ಗಂಟೆಗೆ | 07 | ಪ.ಜಾ | 3,555/– | 58,000/– |
| 2 | | 10 | ಪ.ಜಾ | 3,555/– | 58,000/– |
| 3 | | 11 | ಸಾಮಾನ್ಯ | 3,555/– | 58,000/– |
| 4 | | 12 | ಸಾಮಾನ್ಯ | 3,555/– | 58,000/– |
| 5 | | 16 | ಪ.ಜಾ | 3,555/– | 58,000/– |
| 6 | | 17 | ಸಾಮಾನ್ಯ | 3,555/– | 58,000/– |
| 7 | | 18 | ಸಾಮಾನ್ಯ | 3,555/– | 58,000/– |
| 8 | | 19 | ಸಾಮಾನ್ಯ | 3,555/– | 58,000/– |
| 9 | | 20 | ಸಾಮಾನ್ಯ | 3,555/– | 58,000/– |
| 10 | | 27 | ಸಾಮಾನ್ಯ | 3,555/– | 58,000/– |

**ಷರತ್ತುಗಳು**

1 ಮಹಾನಗರಪಾಲಿಕೆ ಮಾಲೀಕತ್ವದ ಮಳಿಗೆಗಳನ್ನು ಹರಾಜಿನಲ್ಲಿ ಪಡೆದಿರುವ ಮಳಿಗೆ ಬಾಡಿಗೆದಾರರು ಮತ್ತುಅವಲಂಭಿತ ಕುಟುಂಬ ಸದಸ್ಯರು ಸದರಿ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.

2 ಹರಾಜಿನಲ್ಲಿ ಭಾಗವಹಿಸುವವರು ಹರಾಜು ನಡೆಯುವ ಹಿಂದಿನ ದಿನ ಸಂಜೆ 5.00 ಗಂಟೆಯೊಳಗಾಗಿ ವಿವರಿಸಿದಂತೆ ಮುಂಗಡ ಠೇವಣಿ ಮೊತ್ತವನ್ನು ಬ್ಯಾಂಕ್‌ನ ಡಿ.ಡಿ ಮೂಲಕ (ನಗದು/ಚೆಕ್ ಅವಕಾಶವಿರುವುದಿಲ್ಲ) ಆಯುಕ್ತರು, ಮಹಾನಗರ ಪಾಲಿಕೆ, ದಾವಣಗೆರೆ ಇವರ ಹೆಸರಿಗೆ ಪಾವತಿಸಿ ಪಾಲಿಕೆಯ ಮುಖ್ಯ ಕಛೇರಿಯ ಮಳಿಗೆ ಶಾಖೆಯಿಂದ ನೀಡುವ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಟೋಕನ್ ಪಡೆಯತಕ್ಕದು.

3 ಮೀಸಲಾತಿ ಮಳಿಗೆಗಳನ್ನು ಪಡೆಯಲು ಇಚ್ಛಿಸುವವರು (ಪ.ಜಾ/ಪ.ಪಂ ಮತ್ತು ವಿಕಲಚೇತನರು ಅಂದರೆ ಶೇ. 50%ಕ್ಕಿಂತ ಹೆಚ್ಚಾಗಿ ಅಂಗವಿಕಲತೆ ಹೊಂದಿರುವವರು) ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಢೀಕೃತ ಪ್ರಮಾಣ ಪತ್ರವನ್ನು ಹರಾಜಿಗೆ ಮುಂಚಿತವಾಗಿ ಅರ್ಜಿ ನಮೂನೆಯಲ್ಲಿ ಸಲ್ಲಿಸುವುದು. ಸುಳ್ಳು ದಾಖಲೆ ನೀಡಿದಲ್ಲಿ, ಒಂದು ಪಕ್ಷ ಹರಾಜು ಇಸ್ತಿಯಾರ್‌ನಲ್ಲಿ ಯಶಸ್ವಿಯಾಗಿದ್ದರೂ ಮುಂಗಡ ಠೇವಣಿ ಹಣವನ್ನು ಮುಟ್ಟುಗೋಲು ಹಾಕಿಕೊಂಡು ಹರಾಜನ್ನು ರದ್ದುಪಡಿಸಲಾಗುವುದು.

4 ಹಾಲಿ ಇರುವ ವಾಣಿಜ್ಯ ಸಂಕೀರ್ಣದ ಬಾಡಿಗೆದಾರರು ಸರ್ಕಾರದ ಸುತ್ತೋಲೆಯನ್ವಯ "Right of first Refusal" ನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶವಿದ್ದು, ಪೂರ್ಣ ಬಾಕಿ ಬಾಡಿಗೆ ಪಾವತಿಸಿದಲ್ಲಿ ಮಾತ್ರವೇ ಅವಕಾಶ ನೀಡಲಾಗುವುದು. ಆದ್ದರಿಂದ ಸಾರ್ವಜನಿಕ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡುವಾಗ ಅಂತಹ ಬಾಡಿಗೆದಾರರಿಗೆ ಸಾಮಾನ್ಯ ಹರಾಜು ಪ್ರಕ್ರಿಯೆಯಲ್ಲಿ ಅಂತಿಮ ಬಿಡ್ ಮೊತ್ತಕ್ಕೆ "Right of first Refusal" ರಂತೆ ಶೇ 5 ರಷ್ಟು ಹೆಚ್ಚಿಗೆ ನಿಗಧಿಪಡಿಸಿ ಮಳಿಗೆ ಬಾಡಿಗೆ ಪಡೆಯಲು ಅವಕಾಶ ಕಲ್ಪಿಸಿಕೊಡಲಾಗುವುದು. ಸದರಿ ಬಿಡ್ ಮೊತ್ತಕ್ಕೆ ಶೇ 5 ರಷ್ಟು ಹೆಚ್ಚಿಗೆ ನಿಗದಿಪಡಿಸಿದ ಬಿಡ್ ಮೊತ್ತವನ್ನು ಪಾವತಿಸಿ ಅಂಗಡಿ ಬಾಡಿಗೆ ಪಡೆಯಲು ಹಾಲಿ ಇರುವ ವಾಣಿಜ್ಯ ಸಂಕೀರ್ಣದ ಬಾಡಿಗೆದಾರರು ಒಪ್ಪದಿದ್ದಲ್ಲಿ ಸಾಮಾನ್ಯ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಿ ಯಶಸ್ವಿಯಾದ ಅಂತಿಮ ಬಿಡ್‌ದಾರರಿಗೆ ಮಳಿಗೆಯನ್ನು ಬಾಡಿಗೆಗೆ ನೀಡುವುದು.

5 ಯಶಸ್ವಿ ಬಿಡ್‌ದಾರರು, ಹರಾಜು ಆದ ದಿನಾಂಕದಿಂದ 02 ವಾರದ ಒಳಗಾಗಿ ಬಾಕಿ ಠೇವಣಿ ಮೊತ್ತವನ್ನು ಪಾವತಿಸತಕ್ಕದ್ದು. ಇಲ್ಲವಾದಲ್ಲಿ ಮುಂಗಡ ಠೇವಣಿ ಮೊತ್ತವನ್ನು ಮುಟ್ಟಗೋಲು ಹಾಕಿಕೊಂಡು ಮರು ಹರಾಜು ಕರೆಯಲಾಗುವುದು.

6 ಮಾನ್ಯ ಜಿಲ್ಲಾಧಿಕಾರಿಗಳಿಂದ ಹರಾಜು ಅನುಮೋದನೆಯಾದ ನಂತರ ಮಹಾನಗರಪಾಲಿಕೆಗೆ ಕರಾರು ಪತ್ರವನ್ನು ನೋಂದಣಿ ಮಾಡಿಕೊಡುವುದು ಮತ್ತು ಮಳಿಗೆಯನ್ನು ಹರಾಜಿನಲ್ಲಿ ಪಡೆದ ನಂತರ ಮಳಿಗೆ ಬೇಡವೆಂದು ತಿರಸ್ಕರಿಸುವಂತಿಲ್ಲ. ಇಲ್ಲವಾದಲ್ಲಿ ಮುಂಗಡ ಠೇವಣಿ ಮೊತ್ತವನ್ನು ಮುಟ್ಟಗೋಲು ಹಾಕಿಕೊಂಡು ಮರು ಹರಾಜು ಕರೆಯಲಾಗುವುದು.

7 ಯಶಸ್ವಿ ಬಿಡ್‌ದಾರರು ಮಹಾನಗರಪಾಲಿಕೆಗೆ ಕರಾರು ಪತ್ರವನ್ನು ನೋಂದಣಿ ಮಾಡಿಕೊಟ್ಟ ನಂತರ ಮಳಿಗೆಯನ್ನು ಸ್ವಾಧೀನಕ್ಕೆ ನೀಡಲಾಗುವುದು ಹಾಗೂ ಸದರಿಯವರು ಮುಂದೆ ಆಗಿಂದಾಗ್ಗೆ ಸರ್ಕಾರದಿಂದ ಹೊರಡಿಸಬಹುದಾದ ಸುತ್ತೋಲೆಗಳು/ಆದೇಶಗಳನ್ನು ಹಾಗೂ ಮಹಾನಗರಪಾಲಿಕೆ ವಿಧಿಸಬಹುದಾದ ಷರತ್ತುಗಳನ್ನು ಪರಿಪಾಲಿಸಲು ಬದ್ಧರಿರತಕ್ಕದ್ದು, ಮಳಿಗೆಯ ಸುಣ್ಣ–ಬಣ್ಣ, ದುರಸ್ಥಿಗಳನ್ನು ಬಾಡಿಗೆದಾರರೇ ಸ್ವಂತ ಖರ್ಚಿನಿಂದ ಮಾಡಿಸಿಕೊಳ್ಳತಕ್ಕದ್ದು.

8 ಮಳಿಗೆಯ ಬಾಡಿಗೆ ಪರವಾನಗಿ ಗುತ್ತಿಗೆ ಅವಧಿಯು 12 ವರ್ಷಗಳಾಗಿದ್ದು, ಬಿಡ್‌ದಾರರು ಪಾವತಿಸಿದ ಠೇವಣಿ ಮೊತ್ತಕ್ಕೆ ಯಾವುದೇರೀತಿಯ ಬಡ್ಡಿ ಪಾವತಿಸಲಾಗುವುದಿಲ್ಲ.

9 ಮಳಿಗೆ ಬಾಡಿಗೆಯು ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ಹಾಗೂ ಇನ್ನಿತರೆ ತೆರಿಗೆಗಳನ್ನೊಳಗೊಂಡಿದ್ದು, ಪ್ರತಿ ತಿಂಗಳ 5ನೇ ತಾರೀಖಿನ ಒಳಗಾಗಿ ಬಾಡಿಗೆಯನ್ನು ಪಾವತಿಸತಕ್ಕದ್ದು. ತಪ್ಪಿದಲ್ಲಿ ಪ್ರತಿ ಮಾಹೆಯಾನ ಶೇ.2% ರಷ್ಟುದಂಡ ವಿಧಿಸಲಾಗುವುದು. ಅಲ್ಲದೇ ಪ್ರತಿ 03 ವರ್ಷಗಳಿಗೊಮ್ಮೆ ಶೇ. 10% ರಷ್ಟು ಬಾಡಿಗೆ ಹೆಚ್ಚಿಸುವ ಷರತ್ತಿಗೊಳಪಟ್ಟಿರುತ್ತದೆ. ಮಾರಣಾಂತಿಕ ಖಾಯಿಲೆಯಿಂದ ಕಾಲವತ್ಯಾಸವಾದಲ್ಲಿ ಬಾಡಿಗೆಯಲ್ಲಿ ಯಾವುದೇ ರಿಯಾಯಿತಿ ಇರುವುದಿಲ್ಲ.

10 ನಿರಂತರವಾಗಿ 06 ತಿಂಗಳವರೆಗೆ ಬಾಡಿಗೆ ಮೊತ್ತವನ್ನು ಮಹಾನಗರಪಾಲಿಕೆಗೆ ಪಾವತಿಸದಿದ್ದಲ್ಲಿ ಅಥವಾ ಮಳಿಗೆಯನ್ನು ಮರುಗುತ್ತಿಗೆ/ಒಳ ಬಾಡಿಗೆಗೆ ನೀಡಿದ್ದಲ್ಲಿ ಯಾವುದೇ ಮುನ್ಸೂಚನೆ ನೀಡದೆ ಕರಾರು ಪತ್ರವನ್ನು ರದ್ದುಪಡಿಸಿ ಮಳಿಗೆಯನ್ನು ಮಹಾನಗರಪಾಲಿಕೆಯ ವಶಕ್ಕೆ ಪಡೆದುಕೊಳ್ಳುವ ಅಧಿಕಾರ ಮಹಾನಗರ ಪಾಲಿಕೆ ಆಯುಕ್ತರು ಕಾಯ್ದಿರಿಸಿಕೊಂಡಿರುತ್ತಾರೆ.

11 ಮಳಿಗೆಯಲ್ಲಿ ಯಾವುದೇರೀತಿಯ ಸ್ಫೋಟಕ ವಸ್ತುಗಳು, ಮದ್ಯ, ಮಾಂಸ ಮಾರಾಟ(ಮಟನ್ ಮಾರ್ಕೆಟ್ ಹೊರತಾಗಿ) ಇತ್ಯಾದಿ ಮಾರಾಟ ಮಾಡತಕ್ಕದ್ದಲ್ಲ ಹಾಗೂ ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸತಕ್ಕದ್ದಲ್ಲ. ಅಲ್ಲದೇ ಸಂಬಂಧಿತ ಪ್ರಾಧಿಕಾರಗಳಿಂದ ಪರವಾನಿಗೆ ಪಡೆಯದೇ ವ್ಯಾಪಾರ ವಹಿವಾಟು ಮಾಡುವಂತಿಲ್ಲ.

12 ಮಹಾನಗರಪಾಲಿಕೆಯ ಆಯುಕ್ತರು ಅಥವಾ ಅವರಿಂದ ಅಧಿಕಾರ ಪಡೆದ ಇತರೆ ಅಧಿಕಾರಿ/ಸಿಬ್ಬಂಧಿ ವರ್ಗದವರು ಯಾವುದೇ ಸಮಯದಲ್ಲಿ ಮುನ್ಸೂಚನೆ ನೀಡದೆ ಮಳಿಗೆಗೆ ಪ್ರವೇಶಿಸಿ ಪರಿಶೀಲನೆ ನಡೆಸುವ ಅಧಿಕಾರ ಹೊಂದಿರುತ್ತಾರೆ.

13 ಮಳಿಗೆಯ ವಿದ್ಯುತ್ ಸಂಪರ್ಕದ ಬಿಲ್ ಮತ್ತು ನೀರಿನ ದರಗಳನ್ನು ಪ್ರತಿ ತಿಂಗಳು ತಪ್ಪದೇ ಸಂಬಂಧಿಸಿದ ಇಲಾಖೆಗಳಿಗೆ ಪಾವತಿಸಬೇಕು ಹಾಗೂ ಕಟ್ಟಡಕ್ಕೆ ಹೆಚ್ಚುವರಿಯಾಗಿ ವಿದ್ಯುತ್ ಬಳಕೆ ಮಾಡಬೇಕಾದಲ್ಲಿ ಸಂಬಂಧಪಟ್ಟ ಇಲಾಖೆಯಿಂದ ಹೆಚ್ಚುವರಿ ಬೇಡಿಕೆಗೆ ಮಂಜೂರಾತಿ ಪಡೆದುಕೊಳ್ಳತಕ್ಕದ್ದು.

14 ಮಳಿಗೆಯನ್ನು ನಿರಂತರವಾಗಿ ನಿರ್ವಹಣೆ ಮಾಡತಕ್ಕದ್ದು. ಗೋಡೌನ್ ರೂಪದಲ್ಲಿ ನಿರಂತರವಾಗಿ ಬಾಗಿಲು ಹಾಕಿರುವ ಪ್ರಕರಣ ಕಂಡುಬಂದಲ್ಲಿ ಗುತ್ತಿಗೆಯನ್ನು ರದ್ದುಪಡಿಸಿ, ಮಳಿಗೆಯನ್ನು ವಶಕ್ಕೆ ಪಡೆಯಲಾಗುವುದು.

15 ಗುತ್ತಿಗೆಅವಧಿಯು ಮುಗಿದ ತಕ್ಷಣವೇ ಮಳಿಗೆಯನ್ನು ಸುಸ್ಥಿತಿಯಲ್ಲಿರುವಂತೆ ಮಹಾನಗರಪಾಲಿಕೆಯ ಸ್ವಾಧೀನಕ್ಕೆ ನೀಡಲು ಅಥವಾ ಒಂದು ವೇಳೆ ಸದರಿ ಮಳಿಗೆಯ ಯಾವುದೇ ಭಾಗ ಶಿಥಿಲಗೊಂಡಿದ್ದಲ್ಲಿ ಖುದ್ದಾಗಿ ಸ್ವಂತ ಖರ್ಚಿನಿಂದ ದುರಸ್ಥಿಪಡಿಸಿ ಮಹಾನಗರಪಾಲಿಕೆ ಸ್ವಾಧೀನಕ್ಕೆ ನೀಡತಕ್ಕದ್ದು.

16 ಮಳಿಗೆಯ ಬಾಡಿಗೆಯನ್ನು ಮಹಾನಗರಪಾಲಿಕೆಗೆ ಬಾಡಿಗೆಪಾವತಿಸುವ ಅಥವಾ ಮಳಿಗೆಯನ್ನು ತೆರವುಗೊಳಿಸುವ ಸಂಬಂಧಯಾವುದೇ ತಕರಾರು ವ್ಯಕ್ತಪಡಿಸತಕ್ಕದ್ದಲ್ಲ ಮತ್ತುಯಾವುದೇ ಪರಿಹಾರ ಕೇಳತಕ್ಕದ್ದಲ್ಲ. ಅಲ್ಲದೇ ಈ ಬಗ್ಗೆ ಪಾಲಿಕೆಯ ವಿರುದ್ಧಯಾವುದೇ ನ್ಯಾಯಾಲಯದಲ್ಲಿ ದಾವೆವಗೈರೆ ಹೂಡುವಂತಿಲ್ಲವೆಂಬ ನಿಬಂಧನೆಗೆ ಬದ್ಧರಿರತಕ್ಕದ್ದು.

17 ಮೇಲ್ಕಾಣಿಸಿದ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿರುವುದು ತಿಳಿದುಬಂದಲ್ಲಿ ಯಾವುದೇ ಮುನ್ಸೂಚನೆ ನೀಡದೇ ಬಾಡಿಗೆಕರಾರನ್ನು ರದ್ದುಪಡಿಸಿ ಮಳಿಗೆಯನ್ನು ಸ್ವಾಧೀನಕ್ಕೆ ಪಡೆದುಕೊಳ್ಳಲು ಆಯುಕ್ತರು, ಮಹಾನಗರಪಾಲಿಕೆ ದಾವಣಗೆರೆ ಇವರು ಅಧಿಕಾರ ಹೊಂದಿರುತ್ತಾರೆ.

ಹರಾಜಿನ ಷರತ್ತುಗಳನ್ನು ಬದಲಾಯಿಸುವ ಮತ್ತುರದ್ದುಪಡಿಸುವ ಅಧಿಕಾರ ಮಹಾನಗರಪಾಲಿಕೆ ಆಯುಕ್ತರಿಗೆ ಕಾಯ್ದಿರಿಸಿದೆ.

ವಾಸಾಇ/ದಾವಣಗೆರೆ/589/ಕೆಎಸ್‌ಎಂಸಿಎ/2025–26 **ಸಹಿ/– ಆಯುಕ್ತರು, ಮಹಾನಗರ ಪಾಲಿಕೆ ದಾವಣಗೆರೆ**


Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**